ಸಂಪುಟ: ೦೭/ ಸಂಚಿಕೆ: ೧೭೫/ ರವಿವಾರ ದಿನಾಂಕ : ೩೧-೦೮-೨೦೨೫/ ಪುಟ: ೬/ ಬೆಲೆ ೨-೦೦

ಸತ್ಯಕ್ಕೆ ಕಿರಣ ಸುಳ್ಳಿಗೆ ಕಿಡಿ

ಕಛೇರಿ ದೂರವಾಣಿ ಸಂಖ್ಯೆ 0831-3564491

# ಬೆಳಗಿನ ಸೂರ್ಯೋದಯ

ಕನ್ನಡ ಪ್ರಾದೇಶಿಕ ದಿನಪತ್ರಿಕೆ

ಬೆಳಗಾವಿ ■ ಧಾರವಾಡ ■ ಬಾಗಲಕೋಟ ■ ವಿಜಯಪುರ ■ ಗದಗ ■ ಕೊಪ್ಪಳ ■ ಹಾವೇರಿ ■ ಕಾರವಾರ

ಸಂಪಾದಕರು : ಗುರುರಾಜ ಈರಪ್ಪಾ. ಕದಮ, Editor : GURURAJ IRAPPA. KADAM Cell : 9620099959

Volume : 07/ ISSUE : 175/ SUNDAY Date : 31-08-2025/ RNI No. KARKAN/2019/77640/ Postal Reg No. PMG/KA/NK/BM/135/2025-27 / POST AT Vantamury Colony Post Office / email : belaginasuryodaya@gmail.com / Page : 6 / Rs. 2.00

## ದುರ್ಬಲ ವರ್ಗದವರ ಮೇಲಿನ ದೌರ್ಜನ್ಯ ಪ್ರಕರಣಗಳ ಪೊಲೀಸರು ತಡೆಗಟ್ಟಬೇಕು : ಮುಖ್ಯಮಂತ್ರಿ

**ಬೆಂಗಳೂರು,** ರಾಜ್ಯದಲ್ಲಿ ಜಾತಿವ್ಯವಸ್ಥೆಯಿದ್ದು, ಅನೇಕ ದುರ್ಬಲ ವರ್ಗದವರು ಜಾತಿ ತಾರತಮ್ಯವನ್ನು ಅನುಭವಿಸುತ್ತಿದ್ದಾರೆ. ಇಂತಹ ಪ್ರಕರಣಗಳನ್ನು ಗಂಭೀರವಾಗಿ ಪರಿಗಣಿಸಿ, ದೌರ್ಜನ್ಯಗಳನ್ನು ತಡೆಗಟ್ಟಬೇಕು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದರು.

ಅವರು ಇಂದು ರಾಜಭವನದಲ್ಲಿ ನಡೆದ , ರಾಜ್ಯ ಗೃಹ ಇಲಾಖೆಯಲ್ಲಿ ವಿಶಿಷ್ಟ ಸೇವೆ ಸಲ್ಲಿಸಿದ ಅಧಿಕಾರಿಗಳಿಗೆ ರಾಷ್ಟ್ರಪತಿ ಪದಕ ಪ್ರದಾನ ಸಮಾರಂಭದಲ್ಲಿ ಭಾಗವಹಿಸಿ ಮಾತನಾಡಿದರು.

ಸರಕಾರವು ಪ್ರತಿ ಜಿಲ್ಲೆಯಲ್ಲಿ ಡಿಸಿಆರ್‌ಇ ಪೊಲೀಸ್ ಠಾಣೆಗಳನ್ನು ಸ್ಥಾಪಿಸಲಾಗಿದೆ. ನಾನು ಇತ್ತೀಚೆಗೆ ನಡೆಸಿದ ಪರಿಶೀಲನಾ ಸಭೆಯಲ್ಲಿ ಡಿಸಿಆರ್‌ಇ ಪೊಲೀಸ್ ಠಾಣೆಗಳ ಕಾರ್ಯ ಮತ್ತು ಪ್ರಗತಿ ತೃಪ್ತಿದಾಯಕವಿಲ್ಲ ಎಂಬುದನ್ನು ಗಮನಿಸಿದ್ದೇನೆ. ಇದನ್ನು ಅಧಿಕಾರಿಗಳು ಗಂಭೀರವಾಗಿ ಪರಿಗಣಿಸಿ, ದುರ್ಬಲವರ್ಗದವರಿಗೆ ಸುರಕ್ಷತೆ ಒದಗಿಸುವ ಸರಕಾರದ ಉದ್ದೇಶ ಸಫಲವಾಗಬೇಕು. ಇತರೆ ರಾಜ್ಯಗಳಿಗೆ ಹೋಲಿಸಿದರೆ ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ಪಂಗಡಗಳ ಮೇಲಿನ ದೌರ್ಜನ್ಯ ಪ್ರಕರಣಗಳ ವಿರುದ್ಧ ಶಿಕ್ಷೆಯ ಪ್ರಮಾಣ ಬಹಳ ಕಡಿಮೆಯಿದೆ. ಈ ಬಗ್ಗೆ ಪೊಲೀಸರು ಗಮನಹರಿಸಬೇಕು ಎಂದರು.

**ಮುಂಜಾಗ್ರತಾ ಕ್ರಮಗಳಿಂದ ಅಪರಾಧ ತಡೆಗಟ್ಟಬಹುದು :** ಇಂದು ವಿಶಿಷ್ಟ ಸೇವೆ ಸಲ್ಲಿಸಿರುವ ಪೊಲೀಸ-ರಿಗೆ ಕೊಡಮಾಡಲಾದ ಸೇವಾ ಪದಕದ ಹಿಂದೆ ಅವರ ಸೇವಾ ಮನೋಭಾವ, ಪ್ರಮಾಣಿಕತೆ ಹಾಗೂ ಪರಿಶ್ರಮವಿರುತ್ತದೆ. ಸಾಮಾಜಿಕ ಕಳಕಳಿಯೊಂದಿಗೆ ಸೇವೆ ಸಲ್ಲಿಸಿದಾಗ ಮಾತ್ರ ಇಂತಹ ಸಾಧನೆ ಸಾಧ್ಯವಾಗುತ್ತದೆ. ಸಮಾಜದಲ್ಲಿ ಕಾನೂನು ಸುವ್ಯವಸ್ಥೆ ಕಾಪಾಡುವ ಜೊತೆಗೆ ಜನರ ಆಸ್ತಿಪಾಸ್ತಿ ಸಂರಕ್ಷಿಸುವುದು ಪೊಲೀಸರ ಜವಾಬ್ದಾರಿ. ದೇಶದಲ್ಲಿ ಶಾಂತಿ ನೆಮ್ಮದಿ ನೆಲೆಸುವಲ್ಲಿ ಪೊಲೀಸರ ಪಾತ್ರ ಅತ್ಯಂತ ಮಹತ್ವವಾದುದು. ಸಮಾಜದಲ್ಲಿ ನಡೆಯುವ ಅಪರಾಧಗಳನ್ನು ತಡೆಗಟ್ಟುವ ಜವಾಬ್ದಾರಿ ಸರಕಾರ ಹಾಗೂ ಪೊಲೀಸಿನವರದ್ದಾಗಿದೆ. ಮುಂಜಾಗ್ರತಾ ಕ್ರಮಗಳನ್ನು ಕೈಗೊಂಡರೆ ಬಹಳಷ್ಟು ಅಪರಾಧಗಳನ್ನು ತಡೆಗಟ್ಟಲು ಸಾಧ್ಯವಾಗುತ್ತದೆ ಎಂದರು.



**ಸಾಮಾನ್ಯ ಜನರಿಗೆ ನ್ಯಾಯ ಸಿಗುವಂತಾಗಬೇಕು :** ಪೊಲೀಸರಿಗೆ ಸಾಮಾಜಿಕ ಬದ್ಧತೆಯಿದ್ದರೆ, ಸಮಾಜದಲ್ಲಿ ಶಾಂತಿ ನೆಲೆಸಲು ಸಾಧ್ಯ. ಸಮಾಜದಲ್ಲಿನ ಅಸಮಾನತೆಗಳನ್ನು ತೊಡೆದು ಸಂವಿಧಾನ ನೀಡುವ ರಕ್ಷಣೆಯನ್ನು ಜಾರಿಗೊಳಿಸುವಲ್ಲಿ ಪೊಲೀಸರ ಪಾತ್ರ ಪ್ರಮುಖವಾಗಿದೆ. ಬಲಾಢ್ಯರ ಕೈಯ್ಯಲ್ಲಿ ಅಧಿಕಾರವಿದ್ದರೆ, ದುರ್ಬಲ ವರ್ಗದವರ ಜೀವನ ದುಸ್ತರವಾಗುತ್ತದೆ ಎಂದು ಡಾ.ಬಿ.ಆರ್. ಅಂಬೇಡ್ಕರ್ ಅವರು ತಿಳಿಸಿದ್ದರು. ದುರ್ಬಲವರ್ಗಗಳ ಮೇಲಾಗುವ ದೌರ್ಜನ್ಯಗಳನ್ನು ಪೊಲೀಸರು ತಡೆಗಟ್ಟಬೇಕಿದೆ. ಸಾಮಾನ್ಯ ಜನರಿಗೆ ನ್ಯಾಯ ದೊರಕಿಸಿಕೊಡಬೇಕು. ಪೊಲೀಸರ ಸಂಖ್ಯೆಯ ಬಗ್ಗೆ ಗಮನಹರಿಸದೇ, ಅವರು ತಡೆಗಟ್ಟಿರುವ ಅಪರಾಧಗಳೆಷ್ಟು ಎಂದು ಪರಿಗಣಿಸಬೇಕಾಗಿದೆ ಎಂದರು.

ಇಂದಿನ ಪ್ರಶಸ್ತಿ ವಿಜೇತರ ಸಾಧನೆ ಶ್ಲಾಘನೀಯವಾಗಿದ್ದು, ಇತರ-ರಿಗೆ ಮಾದರಿಯಾಗಬೇಕು. ಸಮಾಜದಲ್ಲಿನ ನ್ಯೂನ್ಯತೆಗಳಿಗೆ ಪರಿಹಾರ ಕಂಡುಕೊಳ್ಳಬೇಕಿದೆ. ಪೊಲೀಸ್ ಇಲಾಖೆಯ ಅಧಿಕಾರಿ ಸಿಬ್ಬಂದಿಗಳು ಆತ್ಮವಿಮರ್ಶೆ ಮಾಡಿಕೊಂಡು ಉತ್ತಮ ಸೇವೆ ಸಲ್ಲಿಸಬೇಕು ಎಂದರು.

> **"ರಾಜ್ಯ ಪೊಲೀಸ್ ಆಧುನೀಕರಣಗೊಳ್ಳುತ್ತಿದೆ. ಆಧುನೀಕರಣ ಅನೇಕ ಸವಾಲುಗಳನ್ನು ಎದುರಿಸುತ್ತಿದೆ. ರಾಜ್ಯದಲ್ಲಿ ಮತ್ತು ರಾಷ್ಟ್ರದಲ್ಲಿ ಸೈಬರ್ ಅಪರಾಧಗಳು ಬಹಳ ಹೆಚ್ಚಾಗುತ್ತಿವೆ. ಸೈಬರ್ ಅಪರಾಧಗಳನ್ನು ಮಟ್ಟ ಹಾಕದೇ ಹೋದರೆ ಜನರಿಗೆ ಕೋಟ್ಯಂತರ ರೂ. ನಷ್ಟ ಉಂಟಾಗುತ್ತದೆ. ಅದಕ್ಕಾಗಿಯೇ ದೇಶದಲ್ಲೆ ಮೊದಲ ಬಾರಿಗೆ ರಾಜ್ಯದಲ್ಲಿ ಸೈಬರ್ ಪೊಲೀಸ್ ಠಾಣೆಯನ್ನು ಸ್ಥಾಪಿಸಲಾಯಿತು. ಇಂದು ಸೈಬರ್ ಅಪರಾಧಗಳಿಗಾಗಿಯೇ 45ಕ್ಕೂ ಹೆಚ್ಚು ಪೊಲೀಸ್ ಠಾಣೆಗಳನ್ನು ರಾಜ್ಯದಲ್ಲಿ ಸ್ಥಾಪಿಸಲಾಗಿದೆ. ಯಾವುದೇ ಪೊಲೀಸ್ ಠಾಣೆಯಲ್ಲಿಯೂ ಸೈಬರ್ ಅಪರಾಧಕ್ಕೆ ಸಂಬಂಧಿಸಿದ ದೂರುಗಳನ್ನು ದಾಖಲಿಸಬಹುದು ಎಂಬ ಆದೇಶವನ್ನು ಹೊರಡಿಸಲಾಗಿದೆ"**
>
> **ಡಾ.ಜಿ.ಪರಮೇಶ್ವರ್, ಗೃಹ ಸಚಿವ**

## ಮೀಸಲಾತಿಗೂ- ಸಾಮಾಜಿಕ- ಶೈಕ್ಷಣಿಕ ಸಮೀಕ್ಷೆಗೂ ಸಂಬಂಧ ಇಲ್ಲ: ಸಚಿವ ಈಶ್ವರ್ ಖಂಡ್ರೆ

**ಬೆಂಗಳೂರು,** ಮೀಸಲಾತಿಗೂ, ಸಾಮಾಜಿಕ ಶೈಕ್ಷಣಿಕ ಸಮೀಕ್ಷೆಗೂ ಯಾವುದೇ ಸಂಬಂಧವಿಲ್ಲ. ಹೀಗಾಗಿ ವೀರಶೈವ ಲಿಂಗಾಯತರು ಗಣತಿ ವೇಳೆ ನೈಜ ಮಾಹಿತಿ ನೀಡುವಂತೆ ಮನವಿ ಮಾಡಲು ಅಖಿಲ ಭಾರತ ವೀರಶೈವ ಲಿಂಗಾಯತ ಮಹಾಸಭಾ ನಿರ್ಧರಿಸಿದೆ ಎಂದು ಮಹಾಸಭಾದ ಹಿರಿಯ ಉಪಾಧ್ಯಕ್ಷ ಮತ್ತು ಅರಣ್ಯ ಸಚಿವ ಈಶ್ವರ್ ಖಂಡ್ರೆ ತಿಳಿಸಿದ್ದಾರೆ.

ಶನಿವಾರ ನಗರದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಕೆಲವರು ಮೀಸಲಾತಿ ದೊರಕಬಹುದು ಎಂದು ತಮ್ಮ ಉಪಜಾತಿಗೆ ಸಮೀಪದ ಮತ್ತೊಂದು ಜಾತಿಯ ಹೆಸರು ಬರೆಸುತ್ತಿದ್ದಾರೆ. ಈ ಸಮೀಕ್ಷೆಯ ವರದಿ ಗೌಪ್ಯವಾಗಿದ್ದು, ಇದರಿಂದ ಜಾತಿ ಪ್ರಮಾಣ ಪತ್ರ ಲಭಿಸುವುದಿಲ್ಲ ಎಂದು ತಿಳಿಸಿದರು.

ಶುಕ್ರವಾರ(ಆ.29) ಬೆಂಗಳೂರಿನಲ್ಲಿ ಹಿರಿಯ ಮುಖಂಡರಾದ ಶಾಮನೂರು ಶಿವಶಂಕರಪ್ಪ ಅವರ ಅನುಪಸ್ಥಿತಿಯಲ್ಲಿ ತಮ್ಮ ಅಧ್ಯಕ್ಷತೆಯಲ್ಲಿಯೇ ನಡೆದ ಸಮುದಾಯದ ಸಚಿವರು, ಶಾಸಕರ ಸಭೆಯಲ್ಲಿ ಈ ಬಗ್ಗೆ ಚರ್ಚಿಸಲಾಗಿದೆ ಎಂದು ತಿಳಿಸಿದರು.

ಸುಳ್ಳು ಸತ್ಯ ಆಗುವುದಿಲ್ಲ: 'ಬಿಜೆಪಿಯವರು ಧರ್ಮಸ್ಥಳ ವಿಚಾರದಲ್ಲಿ ಯಾತ್ರೆ ಮಾಡುತ್ತಾ ಸುಳ್ಳು ಆರೋಪ ಮಾಡುತ್ತಿದ್ದಾರೆ, ಸುಳ್ಳು ಎಷ್ಟೇ ಸಾರಿ ಹೇಳಿದ್ರು ಅದು ಸತ್ಯ ಆಗಲು ಸಾಧ್ಯವಿಲ್ಲ ಎಂದು ಈಶ್ವರ್ ಖಂಡ್ರೆ ತಿರುಗೇಟು ನೀಡಿದರು. ಧರ್ಮಸ್ಥಳದ ಬಗ್ಗೆ ನಮಗೂ ಗೌರವ ಇದೆ.



ನಾವೂ ಮಂಜುನಾಥನ ಭಕ್ತರೇ, ನಮಗೂ ಭಕ್ತಿ ಗೌರವ ಎಲ್ಲವೂ ಇದೆ. ಜನರ ಮನದಲ್ಲಿ ಮೂಡಿದ ಶಂಕೆ ನಿವಾ-ರಿಸುವ ಜವಾಬ್ದಾರಿ ಹೊತ್ತ ಸರಕಾರ ನ್ಯಾಯಸಮ್ಮತವಾಗಿ ತನಿಖೆ ನಡೆಸುತ್ತಿದೆ. ಪಾರದರ್ಶಕವಾಗಿ ಎಲ್ಲ ಆಯಾಮದಲ್ಲೂ ತನಿಖೆ ನಡೆದಿದೆ. ಇಂತಹ ಸ್ಥಿತಿಯಲ್ಲಿ ರಾಜಕೀಯ ಬೆರೆಸುವುದು ಸರಿಯಲ್ಲ. ಬಿಜೆಪಿಯವರು ಆತ್ಮಾವಲೋಕನ ಮಾಡಿಕೊಳ್ಳಲಿ. ನಾಟಕ ಮಾಡುವುದನ್ನು ನಿಲ್ಲಿಸಿ, ಸರಕಾರದೊಂದಿಗೆ ಸಹಕರಿಸಲಿ ಎಂದು ಈಶ್ವರ್ ಖಂಡ್ರೆ ಮನವಿ ಮಾಡಿದರು.

### ಸಮುದಾಯ ಭವನಕ್ಕೆ ಶ್ರೀಗಳಿಂದ ಶಂಕುಸ್ಥಾಪನೆ

## ಭವನಗಳು ಮೋಜು ಮಸ್ತಿಗಾಗಿ ಅಲ್ಲ, ಧಾರ್ಮಿಕ ಕಾರ್ಯ ನಡೆಯಲಿ



**ಮೋಳೆ;** ರಾಜ್ಯ ಸರಕಾರದ 25 ಕೋಟಿ ವಿಶೇಷ ಅನುದಾನದಲ್ಲಿ 12 ಕೋಟಿಯಷ್ಟು ರಸ್ತೆ ಹಾಗೂ 13 ಕೋಟಿ ಅನುದಾನದಲ್ಲಿ ಸಮುದಾಯ ಭವನ ಕಾಮಗಾರಿಗಳಿಗೆ ಚಾಲನೆ ನೀಡಲಾಗಿದೆ ಎಂದು ಕಾಗವಾಡ ಶಾಸಕ ರಾಜು ಕಾಗೆ ಹೇಳಿದರು.

ಅವರು ಕಾಗವಾಡ ಮತಕ್ಷೇತ್ರದ ಕವಲಗುಡ್ಡ ಶ್ರೀ ಲಕ್ಷ್ಮೀದೇವಿ ದೇವಸ್ಥಾನದ ಹತ್ತಿರ ಸಮುದಾಯ ಭವನ,ಬಮ್ನಾಳ ಗ್ರಾಮದ ಹನುಮಾನ ಮಂದಿರ ಹತ್ತಿರ ಸಮುದಾಯ ಭವನ, ಹಣಮಾಪುರ ಗ್ರಾಮದ ಶ್ರೀ ಅಮೋಘಸಿದ್ದೇಶ್ವರ ಗುಡಿಯ ಹತ್ತಿರ, ಸಮುದಾಯ ಭವನ, ಕಲೂತಿ ಗ್ರಾಮದ ಶ್ರೀ ಯಲ್ಲಮ್ಮ ದೇವಿಯ ಗುಡಿಯ ಹತ್ತಿರ ಸಮುದಾಯ ಭವನ,ತಾಂವಶಿ ಗ್ರಾಮದಲ್ಲಿ ಶ್ರೀ ಮರಗುಬಾಯಿ ದೇವಸ್ಥಾನದ ಹತ್ತಿರ ಸಮುದಾಯ ಭವನ, ಹಾಗೂ ಸಣಬರಗಿ ಗ್ರಾಮದಲ್ಲಿ ಜೆಜೆಎಂ ಕಾಮಗಾರಿಗೆ ಶಾಸಕ ರಾಜು ಕಾಗೆ ಭೂಮಿ ಪೂಜೆ ನೆರವೇರಿಸಿ ಮಾತನಾಡುತ್ತಿದ್ದರು. 13 ಕೋಟಿ ವೆಚ್ಚದಲ್ಲಿ 60 ಸಮುದಾಯ ಭವನಗಳನ್ನು ನಿರ್ಮಿಸುವ ಯೋಜನೆ ಸಿದ್ಧಗೊಂಡಿದ್ದು, ಮುಂದಿನ ಕೆಲವೇ ದಿನಗಳಲ್ಲಿ ಎಲ್ಲ ಸಮುದಾಯ ಭವನಗಳಿಗೂ ಶಂಕುಸ್ಥಾಪನೆ ನೆರವೇರಿಸುವುದಾಗಿ ಹೇಳಿದರು. 12 ಕೋಟಿ ರೂ. ಅನುದಾನದಲ್ಲಿ ಮತಕ್ಷೇತ್ರದ ವಿವಿಧ ಗ್ರಾಮಗಳಲ್ಲಿ ಗ್ರಾಮೀಣ ರಸ್ತೆಗಳ ನಿರ್ಮಾಣ ಕಾಮಗಾರಿಗಳು ಪ್ರಾರಂಭಗೊಂಡಿದ್ದು, ಕೆಲವೇ ತಿಂಗಳುಗಳಲ್ಲಿ ಪೂರ್ಣಗೊಳ್ಳಲಿವೆ ಎಂದರು.

ಸಮುದಾಯ ಭವನ ನಿರ್ಮಾಣವಾದ ನಂತರ ಅಲ್ಲಿ ಧಾರ್ಮಿಕ ಕಾರ್ಯಕ್ರಮಗಳು, ಸಣ್ಣ ಪ್ರಮಾಣದ ಮಧುವೆ,ಮುಂಜಿ, ಹುಟ್ಟು ಹಬ್ಬಗಳನ್ನು ಆಚರಿಸುವ ಮೂಲಕ ಸಮುದಾಯ ಭವನದ ಸದ್ಬಳಿಕೆ ಮಾಡಿಕೊಳ್ಳಬೇಕೆಂದರು. ಕಾಡಿ ಬೇಡಿ ಸಮುದಾಯ ಭವನ ಕಟ್ಟಿಸಿಕೊಳ್ಳುವುದು, ಕಟ್ಟಿದ ನಂತರ ಕೀಲಿ ಹಾಕಿ ಬಿಡುವುದು ಆಗಬಾರದು ಸರಕಾರ ಕೋಟ್ಯಾಂತರ ರೂ ಅನುದಾನ ನೀಡಿ ಸಮುದಾಯ ಭವನಗಳನ್ನು ನಿರ್ಮಿಸುತ್ತದೆ. ಬಹುತೇಕರು ಅದರ ಸದ್ಬಳಿಕೆ ಮಾಡಿಕೊಳ್ಳುವುದಿಲ್ಲ, ಪ್ರತಿಯೊಬ್ಬರು ಅದರ ವಿನಿಯೋಗ ಮಾಡಿಕೊಳ್ಳುವಂತೆ ಶಾಸಕ ರಾಜು ಕಾಗೆ ಹೇಳಿದರು.

ಧಿವ್ಯ ಸಾನಿಧ್ಯವನ್ನು ಕವಲಗುಡ್ಡ ಸಿದ್ಧಾಶ್ರಮದ ಶ್ರೀ ಅಮರೇಶ್ವರ ಮಹಾರಾಜರು ವಹಿಸಿ ಶಾಸಕ ರಾಜು ಕಾಗೆಯವರು ನಿಮ್ಮೆಲ್ಲರ ಶ್ರೇಯೋಭಿವೃದ್ಧಿಗಾಗಿ ಸಮುದಾಯ ಭವನಗಳು, ರಸ್ತೆ,ಕುಡಿಯುವ ನೀರು, ಶಾಲಾ ಕಟ್ಟಡ, ರೈತರ ಭೂಮಿಗೆ ನೀರು ಹೀಗೆ ಹತ್ತು ಹಲವು ಯೋಜನೆಗಳನ್ನು ಸರಕಾರದಿಂದ ಮಂಜೂರು ಮಾಡಿಸಿಕೊಂಡು ಬಂದಿದ್ದಾರೆ ಅವುಗಳನ್ನು ಸರಿಯಾದ ರೀತಿಯಲ್ಲಿ ವಿನಿಯೋಗಿಸಿಕೊಳ್ಳಿ ಎಂದರು.

ಈ ವೇಳೆ ನೀರಾವರಿ ಇಲಾಖೆಯ ಅಭಿಯಂತರ ಪ್ರವೀಣ ಹುಣಸಿಕಟ್ಟಿ,ಕಾಗವಾಡ ತಾಲೂಕಾ ಪಂಚಾಯತ್ ಇಒ ವೀರಣ್ಣ ವಾಲಿ, ಜೆಜೆಎಂ ಅಭಿಯಂತರ ರವೀಂದ್ರ ಮುರಗಾಲಿ, ಸಹಾಯಕ ಅಭಿಯಂತರ ಮಡಿವಾಳಪ್ಪ ಪಾಟೀಲ,ಮುಖಂಡರಾದ ರಾವಸಾಹೇಬ ಐಹೊಳಿ,ವಿನಾಯಕ ಬಾಗಡಿ, ಗ್ರಾಮ ಪಂಚಾಯತ್ ಅಧ್ಯಕ್ಷ ಬಸನಗೌಡ ಪಾಟೀಲ ಮಾಜಿ ಅಧ್ಯಕ್ಷ ಕೆ.ಆರ್.ಪಾಟೀಲ ಮಲ್ಲಿಕಾರ್ಜುನ ದಳವಾಯಿ, ಗುತ್ತಿಗೆದಾರರಾದ ತಿಪ್ಪಣ್ಣ ಬಜಂತ್ರಿ, ಶಿವಪುತ್ರ ನಾಯಿಕ, ಸಿದ್ದಾರೂಢ ನೇಮಗೌಡರ, ರಾಜು ಮರಡಿ,ವಿನಾಯಕ ಪೂಜಾರಿ ಸೇರಿದಂತೆ ಅನೇಕರು ಇದ್ದರು.ಹೇಳಿದರು.

*****

## ಸೆ.3 ರಂದು ಲೋಕಾಯುಕ್ತ ಜನ ಸಂಪರ್ಕ ಸಭೆ

ಬೆಳಗಾವಿ, : ಬೆಳಗಾವಿ ಲೋಕಾಯುಕ್ತ ಅಧಿಕಾರಿಗಳು ಮೂಡಲಗಿ ತಾಲೂಕಿನ ತಾಲೂಕಾ ಮಟ್ಟದ ಎಲ್ಲ ಅಧಿಕಾರಿಗಳ ಸಮಕ್ಷಮದಲ್ಲಿ ಸೆಪ್ಟೆಂಬರ್ 03, 2025 ರಂದು ಬೆಳಿಗ್ಗೆ 11 ರಿಂದ ಮಧ್ಯಾಹ್ನ 2 ಗಂಟೆಯವರೆಗೆ ಜಿಲ್ಲೆಯ ಮೂಡಲಗಿ ತಾಲೂಕಿನ ತಹಶೀಲ್ದಾರ ಕಛೇರಿ, ಸಭಾ ಭವನದಲ್ಲಿ ಲೋಕಾಯುಕ್ತ ಜನ ಸಂಪರ್ಕ ಸಭೆಯನ್ನು ಆಯೋಜಿಸಲಾಗಿದೆ.

ಸರ್ಕಾರಿ ಕಛೇರಿಯಲ್ಲಿನ ಅಧಿಕಾರಿಗಳು ಸಾರ್ವಜನಿಕರ ಅಧಿಕೃತ ಕೆಲಸಗಳನ್ನು ಮಾಡಿ ಕೊಡುವಲ್ಲಿ ವಿಳಂಬ ನೀತಿ ಅನುಸರಿಸುತ್ತಿದ್ದಲ್ಲಿ, ಅಂತಹ ಅಧಿಕಾರಿಗಳ ವಿರುದ್ಧ ದೂರು ನೀಡಬಹುದಾಗಿದೆ. ಸರ್ಕಾರಿ ಅಧಿಕಾರಿಗಳು ಕೆಲಸ ಮಾಡಿಕೊಡುವಲ್ಲಿ ಹಣಕ್ಕೆ ಬೇಡಿಕೆ ಇಟ್ಟಲ್ಲಿ/ ಒತ್ತಾಯಿಸಿದಲ್ಲಿ ಅಥವಾ ಸರ್ಕಾರಿ ಅಧಿಕಾ-ರಿಯ ಅಕ್ರಮ ಆಸ್ತಿ ಸಂಪಾದನೆ ಬಗ್ಗೆ ಮಾಹಿತಿ ಇದ್ದಲ್ಲಿ, ಲೋಕಾಯುಕ್ತ ಅಧಿಕಾರಿಗಳೊಂದಿಗೆ ನೇರವಾಗಿ/ಗುಪ್ತವಾಗಿ ಮಾಹಿತಿ ನೀಡಿ, ಅರ್ಜಿ ಸಲ್ಲಿಸಲು ಇಚ್ಛಿಸುವವರು ನಿಗದಿತ ನಮೂನೆಯ ಅರ್ಜಿಯೊಂದಿಗೆ ಹಾಜರಿರಬೇಕು.

ಸಾರ್ವಜನಿಕರು ಸದರಿ ಸಭೆಯ ಸದುಪಯೋಗ ಪಡಿಸಿಕೊಳ್ಳಬಹುದಾಗಿದೆ.

ಹೆಚ್ಚಿನ ಮಾಹಿತಿಗಾಗಿ ಕಛೇರಿ ದೂರವಾಣಿ ಸಂಖ್ಯೆ: 0831-2950756, 0831-2421922, ಗಳಿಗೆ ಸಂಪರ್ಕಿಸಬಹುದಾಗಿದೆ ಎಂದು ಕರ್ನಾಟಕ ಲೋಕಾಯುಕ್ತ ಬೆಳಗಾವಿ, ಪೊಲೀಸ್ ಅಧೀಕ್ಷಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಧರ್ಮಸ್ಥಳ ಪ್ರಕರಣ ತಾರ್ಕಿಕ ಅಂತ್ಯದವರೆಗೂ ತನಿಖೆ ಮುಂದುವರಿಕೆ : ಗೃಹ ಸಚಿವ ಡಾ.ಜಿ.ಪರಮೇಶ್ವರ್

ಬೆಂಗಳೂರು, ಧರ್ಮಸ್ಥಳ ಪ್ರಕರಣ ಸಂಬಂಧ ವಿಶೇಷ ತನಿಖಾ ತಂಡದ (ಎಸ್‌ಐಟಿ) ತನಿಖೆಯು ಎಲ್ಲಿಗೆ ಹೋಗುತ್ತದೆ ಎಂದು ಹೇಳಲಾಗುವುದಿಲ್ಲ. ತಾರ್ಕಿಕ ಅಂತ್ಯ ಕಾಣುವವರೆಗೂ ವಿಚಾರಣೆ ಮುಂದುವರೆಯಲಿದೆ ಎಂದು ಗೃಹ ಸಚಿವ ಡಾ.ಜಿ.ಪರಮೇಶ್ವರ್ ತಿಳಿಸಿದ್ದಾರೆ.

ಶನಿವಾರ ನಗರದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿರುವ ಅವರು, ಎಸ್‌ಐಟಿ ಸಂಸ್ಥೆಯ ಮುಖ್ಯಸ್ಥ ಪ್ರಣಬ್ ಮೊಹಾಂತಿ ಅವರು ತಮ್ಮನ್ನು ಭೇಟಿ ಮಾಡಿ, ಪ್ರಕರಣದ ಪ್ರಗತಿಯ ಬಗೆಗೆ ಚರ್ಚಿಸಿದ್ದಾರೆ. ಸಮಾಲೋಚನೆಯ ವಿಚಾರಗಳನ್ನು ಬಹಿರಂಗ ಪಡಿಸಲು ಸಾಧ್ಯವಿಲ್ಲ ಎಂದರು.

ಎಸ್‌ಐಟಿ ತಂಡಕ್ಕೆ ಈಗಾಗಲೇ ತನಿಖೆಯ ಮಾರ್ಗಸೂಚಿಗಳನ್ನು ನೀಡಲಾಗಿದೆ. ಅದರಂತೆ ಅವರು ಕಾರ್ಯನಿರ್ವಹಿಸುತ್ತಿದ್ದಾರೆ. ತನಿಖೆಗೆ ಕಾಲಮಿತಿ ವಿಧಿಸಿಲ್ಲ. ತ್ವ-ರಿತವಾಗಿ ಪ್ರಕ್ರಿಯೆಗಳನ್ನು ನಡೆಸಿ ಎಂದು ಸಲಹೆ ನೀಡಬಹುದು. ಆದರೆ, ಎಲ್ಲವನ್ನು ವೈಜ್ಞಾನಿಕವಾಗಿ ಪರಿಶೀಲಿಸಿ ಅಗತ್ಯ ಕ್ರಮ ಕೈಗೊಳ್ಳಬೇಕಿರುವುದರಿಂದ ಒತ್ತಡ ಹೇರುವುದು ಸರಿಯಲ್ಲ ಎಂದು ಜಿ.ಪರಮೇಶ್ವರ್ ಹೇಳಿದರು.



ಧರ್ಮಸ್ಥಳದಲ್ಲಿ ಉತ್ಖನನ ಮಾಡಿದಾಗ ದೊರೆತ್ತಿರುವ ಹಲವಾರು ಅಂಶಗಳನ್ನು ವಿಧಿ ವಿಜ್ಞಾನ ಪ್ರಯೋಗಾಲಯ(ಎಫ್‌ಎಸ್‌ಎಲ್)ಕ್ಕೆ ಕಳುಹಿಸಲಾಗಿದೆ. ಸಾಕಷ್ಟು ರೀತಿಯ ವಿಶ್ಲೇಷಣೆಗಳು ನಡೆಯಬೇಕಿದೆ. ವರದಿ ಯಾವ ರೀತಿ ಇರುತ್ತದೆ ಎಂದು ನನಗೆ ಗೊತ್ತಿಲ್ಲ. ಅನಗತ್ಯವಾಗಿ ಊಹ-ಪೋಹಗಳಿಗೆ ಅವಕಾಶ ಮಾಡಿಕೊಡುವುದಿಲ್ಲ ಎಂದು ಜಿ.ಪರಮೇಶ್ವರ್ ತಿಳಿಸಿದರು.

ವಿಚಾರಣಾ ಹಂತದಲ್ಲಿ ಬೇರೆ ಬೇರೆ ರೀತಿಯ ಮಾಹಿತಿಗಳು ಸಿಕ್ಕರೆ ಅವುಗಳನ್ನು ಎಸ್‌ಐಟಿ ಅಧಿಕಾರಿಗಳು ತನಿಖೆಗೊಳಪಡಿಸುತ್ತಾರೆ. ರಾಜ್ಯ ಸರಕಾರ ಯಾವುದೇ ರೀತಿಯ ನಿರ್ದೇಶನ ನೀಡುವುದಿಲ್ಲ. ಸೌಜನ್ಯ ಅವರ ತಾಯಿ ದೂರು ನೀಡಿರುವ ಬಗ್ಗೆಯೂ ಎಸ್‌ಐಟಿ ಅವರೇ ಪರಿಶೀಲನೆ ಮಾಡುತ್ತಾರೆ ಎಂದು ಜಿ.ಪರಮೇಶ್ವರ್ ಪ್ರತಿಕ್ರಿಯಿಸಿದರು.

ಬಂಧಿತ ಆರೋಪಿ ಚಿನ್ನಯ್ಯನನ್ನು ಮಹಜರು ನಡೆಸಲು ಬೆಂಗಳೂರಿಗೆ ಕರೆತರುವುದು ಸೇರಿದಂತೆ ಎಲ್ಲ ರೀತಿಯ ಪ್ರಕ್ರಿಯೆಗಳನ್ನು ಎಸ್‌ಐಟಿ ಅಧಿಕಾ-ರಿಗಳೇ ನಿರ್ಧರಿಸುತ್ತಾರೆ. ಆತನಿಗೆ ಆಶ್ರಯ ಕೊಟ್ಟವರನ್ನು ಬಂಧಿಸಬೇಕೆ? ಬೇಡವೇ? ಎಂಬುದು ಕೂಡ ಎಸ್‌ಐಟಿ ಅಧಿಕಾರಿಗಳ ವಿವೇಚನೆಗೆ ಸೇರಿದೆ. ವಿರೋಧ ಪಕ್ಷಗಳು ಹೇಳಿದಂತೆ ತನಿಖೆ ನಡೆಸುವುದಾಗಲೀ, ಕಾಲಮಿತಿ ವಿಧಿಸುವುದಾಗಲೀ ಸಾಧ್ಯವಿಲ್ಲ. ರಾಜಕೀಯಕ್ಕಾಗಿ ಅವರು ಮಾತನಾಡುತ್ತಾರೆ. ಅದಕ್ಕೆ ನಾನು ಪ್ರತಿಕ್ರಿಯಿಸುವುದಿಲ್ಲ ಎಂದು ಜಿ.ಪರಮೇಶ್ವರ್ ತಿಳಿಸಿದರು.

ಎನ್‌ಐಎಗೆ ವಹಿಸುವುದು ಅಸಾಧ್ಯ: 'ತನಿಖೆ ಉತ್ತಮವಾಗಿ ನಡೆಯುತ್ತಿದೆ. ಧರ್ಮಸ್ಥಳದ ವೀರೇಂದ್ರ ಹೆಗ್ಗಡೆ ಸೇರಿದಂತೆ ಎಲ್ಲರೂ ಎಸ್‌ಐಟಿಯನ್ನು ಸ್ವಾಗತ ಮಾಡಿದ್ದಾರೆ. ಈ ಸಂದರ್ಭದಲ್ಲಿ ಎನ್‌ಐಎ ಸಂಸ್ಥೆಗೆ ವಹಿಸಬೇಕು ಎಂದರೆ ಅದು ಅಸಾಧ್ಯ. ನಾವು, ನೀವು ಅಥ-'ವಾ ಬೇರೆಯವರು ಹೇಳಿದಂತೆ ಆಗುವುದಿಲ್ಲ. ಎಸ್‌ಐಟಿಗೆ ನಿಯಮ ಬದ್ಧವಾದ ಕ್ರಮಗಳಿವೆ. ಅದರ ಪ್ರಕಾರವೇ ನಡೆಯುತ್ತದೆ ಎಂದು ಡಾ.ಜಿ.ಪರಮೇಶ್ವರ್ ತಿಳಿಸಿದರು.

## ಅವೈಜ್ಞಾನಿಕ ರಬಕವಿ ಬಸ್ ನಿಲ್ದಾಣ



**ವರದಿ ; ಮಲ್ಲಿಕಾರ್ಜುನ ತುಂಗಳ**

ರಬಕವಿ-ಬನಹಟ್ಟಿ,ಆ30: ರಾಜ್ಯದಲ್ಲಿ ವಿನೂತನ ಬಸ್ ನಿಲ್ದಾಣಗಳಾಗಿ ಮಾದರಿಯಾಗುವ ಬದಲು ತರಾತು-ರಿಯಲ್ಲಿ ನಿರ್ಮಿಸಿರುವ ಬಸ್ ನಿಲ್ದಾಣಗಳು ಇದೀಗ ಸಾರ್ವಜನಿಕರಿಗೆ ತೀವ್ರ ತೊಂದರೆ ಅನುಭವಿಸುವಲ್ಲಿ ಕಾರಣವಾಗಿವೆ.

ರಬಕವಿ ಬಸ್ ನಿಲ್ದಾಣವು ಕಳೆದ ವರ್ಷ ಸುಮಾರು 1.5 ಕೋಟಿ ರೂ.ಗಳ ವೆಚ್ಚದಲ್ಲಿ ನಿರ್ಮಾಣಗೊಂಡು ಸಾರಿಗೆ ಮಂತ್ರಿ ರಾಮಲಿಂಗಾರೆಡ್ಡಿಯವರಿಂದ ಉದ್ಘಾಟನೆಗೊಂಡಿತ್ತು.

ಕಾಟಾಚಾರಕ್ಕೆಂಬಂತೆ ಆಗಷ್ಟೇ ಜನತೆಗೆ ಹಿತವಾಗುವ ರೀತಿಯಲ್ಲಿ ಭಾಸವಾಗುತ್ತಿತ್ತು. ಇದೀಗ ಸಂಪೂರ್ಣ ಅವೈಜ್ಞಾನಿಕವಾಗಿ ನಿರ್ಮಾಣಗೊಂಡಿರುವ ಬಸ್ ನಿಲ್ದಾಣಕ್ಕೆ ಜನರಿಂದ ಹಿಡಿಶಾಪ ಹಾಕುವಲ್ಲಿ ಕಾರಣವಾಗಿದೆ.

ಪ್ರಯಾಣಿಕರಿಗೆ ಶುದ್ಧ ನೀರು ಕುಡಿಯಲು ಸಿಗದೆ ಪಾಚಿಗಟ್ಟಿದ ನೀರೇ ಗತಿಯಾಗಿದೆ. ವಾಹನ ನಿಲುಗಡೆಗೂ ಜಾಗವಿಲ್ಲದೆ ಬಸ್ ನಿಲ್ಲು ಸ್ಥಳದಲ್ಲಿಯೇ ಖಾಸಗಿ ವಾಹನಗಳನ್ನು ನಿಲ್ಲಿಸುತ್ತಾರೆ. ಹೊಸ ನಿಲ್ದಾಣವಾಗಿದ್ದರೂ ಹೀಗೆ ಕೊರತೆಗಳ ಪಟ್ಟಿ ಮಾತ್ರ ಕಡಿಮೆಯಿಲ್ಲ.

ಜಾಗೆ ವ್ಯರ್ಥ: ಬಸ್ ನಿಲ್ದಾಣದ ಅರ್ಧದಷ್ಟು ಪ್ರದೇಶ ನಿರ್ವಹಣೆಗೆ ಸೂಕ್ತವಲ್ಲದ್ದಾಗಿದೆ. ಇದಕ್ಕೆ ಸಂಬಂಧ ತಾಂತ್ರಿಕ ವರ್ಗದ ಅಧಿಕಾರಿಗಳು ಯಾವದೇ ರೀತಿ ಸ್ಪಂದನೆ ಮಾಡುತ್ತಿಲ್ಲ. ರಾಜ್ಯ ಹೆದ್ದಾರಿ ರಸ್ತೆಯಿದ್ದರೂ, ವಿನಾಕಾರಣ ಬಸ್ ನಿಲ್ದಾಣದೊಳಗೊಂದು ರಸ್ತೆ ಮಾಡಿ, ಇದೀಗ ತಾತ್ಕಾಲಿಕ ಮುಚ್ಚಲಾಗಿದೆ.

ಬಸ್‌ಗಳಿಗೆ ಆಗಮನ ಮತ್ತು ನಿರ್ಗಮನಕ್ಕೆ ಪ್ರತ್ಯೇಕ ದಾರಿಗಳಿದ್ದವು, ಇದೀಗ ಅವೆಲ್ಲವುಗಳನ್ನೂ ಮುಚ್ಚಿ ಒಂದೇ ರಸ್ತೆಯಲ್ಲಿ ಎಲ್ಲ ವಾಹನಗಳು ಬಸ್ ನಿಲ್ದಾಣದೊಳಗೆ ಬರುತ್ತಿವೆ. ಇದರಿಂದ ಪ್ರಯಾಣಿಕರಿಗೆ ಯಾವ ಕಡೆಯಿಂದ ಬಸ್ ಬರುತ್ತಿದೆ. ಯಾವ ಪ್ರದೇಶಕ್ಕೆ ತೆರಳುವದೆಂಬ ಕೊಂಚವೂ ಮಾಹಿತಿ ಸಿಗದೆ ಪ್ರತಿ ಬಾರಿ ಸಾರಿಗೆ ನಿಯಂತ್ರಕರ ಭೆಟ್ಟಿ ಸಾಮಾನ್ಯವಾಗಿದೆ.

ಅರ್ಧದಷ್ಟು ಜಾಗೆ ವ್ಯರ್ಥ: ಸುಮಾರು 2 ಎಕರೆ ಪ್ರದೇಶದಲ್ಲಿರುವ ರಬಕವಿ ಬಸ್ ನಿಲ್ದಾಣ ಬಳಕೆಗೆ 1 ಎಕರೆಯಷ್ಟು ಮಾತ್ರವಿದ್ದು, ಇನ್ನುಳಿದ ಪ್ರದೇಶ ಸಂಪೂರ್ಣ ವ್ಯರ್ಥವಾಗುವಲ್ಲಿ ಕಾರಣವಾಗಿದೆ. ಮಳೆಗಾಲದಲ್ಲಂತೂ ಕೆಸರುಗದ್ದೆಯಾಗಿ ಹೋಗುವದು. ರಸ್ತೆಯಿಂದ ತುಂಬಾ ಇಳಿಜಾರಿನಲ್ಲಿರುವ ಕಾರಣ ಮಳೆ ಸಂದರ್ಭ ಬಿದ್ದ ನೀರೆಲ್ಲ ಬಸ್ ನಿಲ್ದಾಣದ ಆವರಣದೊಳಗೇ ಜಮಾವನೆಗೊಂಡು ಹೊಂಡ ನಿರ್ಮಾಣವಾಗುತ್ತಿದೆ.


ಶಕ್ತಿ ಯೋಜನೆ ಜಾರಿಗೆ ಬಂದಾಗಿನಿಂದ ಬಸ್ ನಿಲ್ದಾಣದಲ್ಲಿ ಜನದಟ್ಟನೆ ಹೆಚ್ಚಾಗಿದೆ. ನಿಲ್ದಾಣ ಮಾತ್ರ ಅವೈಜ್ಞಾನಿಕ ಕಟ್ಟಡದಿಂದಾಗಿ ಇಕ್ಕಟ್ಟಾಗಿದ್ದು, ಸಂಬಂಧಿಸಿದ ಅಧಿಕಾರಿಗಳು ಕ್ರಮ ಕೈಗೊಳ್ಳಬೇಕಿದೆ.

## ಕೃಷ್ಣೆಯ ಕೂಗಿಗೆ ಬೆಲೆ ಸಿಗಲಿ : ರೈತರ ಕಣ್ಣೀರಿನ ಕಥೆ ಕೊನೆಯಾಗಲಿ

### ಆಲಮಟ್ಟಿ ಜಲಾಶಯ ಹೆಚ್ಚಿಸಲು ಸರ್ಕಾರ ಕ್ರಮ ವಹಿಸಲಿ-ಕುಲಕರ್ಣಿ

ತಾಳಿಕೋಟೆ, ಆಲಮಟ್ಟಿ ಜಲಾಶಯ ನಿರ್ಮಾಣಕ್ಕಾಗಿ ರೈತರು ಲಕ್ಷಾಂತರ ಏಕರೆ ಭೂಮಿಯನ್ನು ಕಳೆದುಕೊಂಡು ತ್ಯಾಗಮಯಿಯಾಗಿದ್ದಾರೆ ಆದರೆ ಜಲ ಶಯ ನಿರ್ಮಾಣವಾಗಿ 61 ವರ್ಷಗಳು ಘತಿಸಿದರೂ ಕೂಡಾ ಜಲಾಶಯದ ನೀರು ರೈತರಿಗೆ ಉಪಯೋಗಕ್ಕೆ ಬಾರದಿರುವದು ಜನಪ್ರತಿನಿಧಿಗಳ ಇಚ್ಛಾಶಕ್ತಿಯ ಕೊರತೆಯೇ ಕಾರಣವಾಗಿದೆ ಎಂದು ಅಖಂಡ ಕರ್ನಾಟಕ ರೈತ ಸಂಘದ ರಾಜ್ಯ ಪ್ರಧಾನ ಕಾರ್ಯದರ್ಶಿ ಅರವಿಂದ ಕುಲಕರ್ಣಿ ಅವರು ಹೇಳಿದರು.

ಶುಕ್ರವಾರರಂದು ಪಟ್ಟಣದ ಪ್ರವಾಸಿ ಮಂದಿರದಲ್ಲಿ ಕರೆಯಲಾದ ಪತ್ರಿಕಾಗೋಷ್ಠಿಯಲ್ಲಿ ಮಾತನಾಡುತ್ತಿದ್ದ ಅವರು ನ್ಯಾ. ಬ್ರಿಜೇಶಕುಮಾರ ನೇತೃತ್ವದ 2ನೇ ನ್ಯಾಯಾಧೀಕರಣದ ತೀರ್ಪಿನಂತೆ ಆಲಮಟ್ಟಿ ಲಾಲ್‌ಬಹದ್ದೂರ ಶಾಸ್ತ್ರೀ ಜಲಾಶಯದ ನೀರಿನ ಮಟ್ಟವನ್ನು 519.60 ರಿಂದ 524.256 ಮೀ ಗೆ ನೀರು ಸಲ್ಲಿಸಲು ಕ್ರಮ ಕೈಗೊಳ್ಳಬೇಕು ಹಾಗೂ ಈ ನಿಟ್ಟಿನಲ್ಲಿ ಕೇಂದ್ರ ಸರ್ಕಾರವು ಶೀಘ್ರದಲ್ಲಿಯೇ ಅಧಿಸೂಚನೆ ಹೊರಡಿಸಬೇಕೆಂದು ಒತ್ತಾಯಿಸಿದ ಅವರು ಕಾಂಗ್ರೇಸ್ ನಡಿಗೆ ಕೃಷ್ಣೆಯ ಕಡೆಗೆ ಎಂದು ಅಧಿಕಾರಕ್ಕೆ ಬರುವ ಮುಂಚೆ ಪಾದಯಾತ್ರೆಯನ್ನು ಮಾಡಿದ ಈಗೀನ ಮುಖ್ಯಮಂತ್ರಿ ಸಿದ್ದರಾಮಯ್ಯ ಒಳಗೊಂಡು ಅನೇಕ ಮಂತ್ರಿ ಮಹೋದಯರು ಈಗ ಕೃಷ್ಣೆಯನ್ನೂ ಮರೆತಿದ್ದಾರೆಂದು ಆರೋಪಿಸಿದ ಅವರು ರೈತರು ಯಾವುದೇ ಪಕ್ಷಕ್ಕೆ ಸೀಮಿತವಾಗಿಲ್ಲಾ ಅವರು ಅನ್ನ ಹಾಕುವ ಅನ್ನದಾತರಾಗಿದ್ದಾರೆ ಅವರು ಕೇವಲ ಒಂದೇ ವರ್ಷ ನಿಲ್ಲಿಸಿದರೆ ಇಡೀ ದೇಶವೇ ಬುಡಮೇಲು ಆಗಲಿದೆ ಅಂತಹ ಶಕ್ತಿವಂತ ರೈತರಿಗೆ ನೀರನ್ನು ನೀಡದೇ ಮರಗಿಸುತ್ತಾ ಸಾಗಿದರೆ ಆ ಪಾಪ ನಿಮ್ಮನ್ನು ಎಂದಿಗೂ ಸುಮ್ಮನೇ ಬಿಡುವದಿಲ್ಲಾ ಅಧಿಕಾರಕ್ಕೆ ಬರುವ ಮುಂಚೆ ಮಾಡಿದ ವಚನದಂತೆ





ನಡೆದುಕೊಳ್ಳುವ ಕಾರ್ಯ ಜನಪ್ರತಿನಿಧಿಗಳು ಮಾಡಬೇಕೆಂದ ಅವರು ನ್ಯಾ.ಬ್ರಿಜೇಶಕುಮಾರ ನೇತೃತ್ವದ 2ನೇ ನ್ಯಾಯಾಧೀಕರಣ 2010ರಲ್ಲಿ ತೀರ್ಪು ನೀಡಿತು 2013ರಲ್ಲಿ ಸ್ಪಷ್ಟಿಕರಣ ತೀರ್ಪು ನೀಡಿ ಲಾಲ್ ಬಹದ್ದೂರ ಶಾಸ್ತ್ರೀ ಜಲಾಶಯದ ನೀರಿನ ಮಟ್ಟವನ್ನು 524.256ಕ್ಕೆ ನಿಲ್ಲಿಸಲು ಅನುಮತಿ ನೀಡಿದೆ ತೀರ್ಪು ನೀಡಿ 15 ವರ್ಷಗಳು ಘತಿಸಿದರೂ ಇಲ್ಲಿಯವರೆಗೆ ಜಲಾಶಯದ ನೀರಿನ ಮಟ್ಟ ಹೆಚ್ಚಿಸಲು ಸರ್ಕಾರವು ಮುತುವರ್ಜಿ ವಹಿಸಿಲ್ಲಾ ಕೇಂದ್ರ ಸರ್ಕಾರ ಇನ್ನೂ ಅಧಿಸೂಚನೆ ಹೊರಡಿಸಿಲ್ಲಾ ಮಹಾರಾಷ್ಟ್ರ ಸರ್ಕಾರದ ತಕರಾರದ ನೆಪವನ್ನು ತೋ-ರಿಸುತ್ತಾ ಕೇಂದ್ರ ಸರ್ಕಾರವೇ ಇನ್ನೂ ಅಧಿಸೂನೆ ಹೊರಡಿಸಿಲ್ಲಾವೆಂದು ರಾಜ್ಯ ಸರ್ಕಾರವು ಕುಂಟು ನೆಪ ಹೇಳುತ್ತಿದೆ ಎಂದು ಆರೋಪಿಸಿದ ಅವರು ಉತ್ತರ ಕರ್ನಾಟಕದ ಮಹಾತ್ವಾಕಾಂಕ್ಷೀ ಯೋಜನೆ ಹಳಿ ತಪ್ಪಿದ್ದು ವಿಜಯಪುರ-ಬಾಗಲಕೋಟ ಅವಳಿ ಜಿಲ್ಲೆಯ ರೈತರು ಹಿಡಿ ಶಾಪ ಹಾಕುತ್ತಿದ್ದಾರೆ ಆಲಮಟ್ಟಿ ಆಣೆಕಟ್ಟಿನ ಕೃಷ್ಣಾ ನಧಿ ನೀರು ರೈತರ ಕಣ್ಣಿನ ಕಥೆಯಾಗಿದ್ದು ಜನಪ್ರತಿನಿಧಿಗಳ ಹಾಗೂ ಅಧಿಕಾರಿಗಳ ಪಾಲಿಗೆ ಅಕ್ಷಯ ಪಾತ್ರೆಯಾಗಿದೆ ಕೃಷ್ಣಕೊಳ್ಳದಂತಹ ಬೃಹತ್ ಯೋಜನೆಗಳಿಂದಲೇ ಸರ್ಕಾರಗಳು ಬಧುಕುವಂತಾಗಿದ್ದು ಜನಪ್ರತಿನಿಧಿಗಳು ಹಾಗೂ ಅಧಿಕಾರಿಗಳು ಸ್ವಾರ್ಥಕ್ಕೆ ಬಿದ್ದಿದ್ದರಿಂದ ಈ ಯೋಜನೆ ದಶಕಗಳಿಂದ ನೆನೆಗುದಿಗೆಗೆ ಬಿದ್ದು ನಲಗುವಂತಾಗಿದೆ ಎಂದ ಕುಲಕರ್ಣಿ ಅವರು ಸದ್ಯ ಆಲಮಟ್ಟಿ ಜಲಾಶಯ 519.60 ರಿಂದ 524.256 ಮೀ ಗೆ ಹೆಚ್ಚಿಸಲು ಅವಳಿ ಜಿಲ್ಲೆಯ 22 ಹಳ್ಳಿಗಳ ಸ್ಥಳಾಂತರ ಮಾಡಿ ಪುನರ್ವಸತಿ ಕೇಂದ್ರ ನಿರ್ಮಿಸುವದರ ಜೊತೆಗೆ 1 ಲಕ್ಷಕ್ಕೂ ಹೆಚ್ಚು ಭೂ ಸ್ವಾದೀನ ಮಾಡಿಕೊಳ್ಳಬೇಕಿದೆ ಇದಕ್ಕೆ ಸದ್ಯ 1 ಲಕ್ಷ ಕೋಟಿ ರೂ.ಗಳಿಗೂ ಅಧಿಕ ಹಣದ ಅಗತ್ಯವಿದೆ ಇಷ್ಟೊಂದು ಹಣ ಒದಗಿಸುವದು ರಾಜ್ಯ ಸರ್ಕಾರಕ್ಕೆ ಅಸಾಧ್ಯದ ಮಾತು ಈ ಯೋಜನೆಯನ್ನು ಪೂರ್ಣಗೊಳಿಸಲು ಕೃಷ್ಣಾ ಮೇಲ್ದಂಡೆ ಯೋಜನೆಯನ್ನು ರಾಷ್ಟ್ರೀಯ ಯೋಜನೆ ಎಂದು ಘೋಷಿಸಿ ಕೇಂದ್ರ ಸರ್ಕಾರ ತನ್ನ ಸುಪರ್ದಿಗೆ ತೆಗೆದುಕೊಂಡು ಯೋಜನೆಯನ್ನು ಪೂರ್ಣಗೊಳಿಸಬೇಕೆಂದರು. ಈ ಜಲಾಶಯ ಎತ್ತರ ಹೆಚ್ಚಳದಿಂದ 130 ಟಿಎಂಸಿ ನೀರು ಹೆಚ್ಚುವರಿಯಾಗಿ ಲಭಿಸಲಿದ್ದು ಇದರಲ್ಲಿ 80 ಟಿಎಂಸಿ ನೀರು ಅವಳಿ ಜಿಲ್ಲೆಯ ನೀರಾವರಿ ಯೋಜನೆಗಳಿಗೆ ಸಿಗಲಿದೆ ಕೂಡಲೇ ಕೇಂದ್ರ ಮತ್ತು ರಾಜ್ಯ ಸರ್ಕಾರವು ಅಧಿಕಾರಕ್ಕೆ ಬರುವ ಮುಂಚೆ ಮಾಡಿದ ವಾಗ್ದಾನದಂತೆ ನಡೆದುಕೊಂಡು ಜಲಾಶಯ ಹೆಚ್ಚಳಕ್ಕೆ ಕ್ರಮ ವಹಿಸಬೇಕೆಂದು ಒತ್ತಾಯಿಸಿದರು.

ಇನ್ನೋರ್ವ ರೈತ ಮುಖಂಡರಾದ ಗುರುರಾಜ ಪಡಶೆಟ್ಟಿ ಅವರು ಮಾತನಾಡಿ ಆಲಮಟ್ಟಿ ಜಲಾಶಯ ನೀರ್ಮಾಣಕ್ಕಾಗಿ 4.5 ಲಕ್ಷ ಎಕರೆ ಭೂಮಿ ಕಳೆದುಕೊಂಡ ರೈತ-ರಿಗೆ ಕುಡಿಯಲು ನೀರು ಇಲ್ಲದಂತಹ ಸ್ಥಿತಿ ರೈತರಿಗೆ ಬಂದೊದಗಿದೆ 1964 ಮೇ 22 ರಂದು ದಿ.ಮಾಜಿ ಪ್ರಧಾನಿ ಲಾಲಬಹದ್ದೂರ ಶಾಸ್ತ್ರೀಜಿ ಅವರಿಂದ ಗುದ್ದಲಿಪೂಜೆ ಮೂಲಕ ನಿರ್ಮಾಣಗೊಂಡ ಆಲಮಟ್ಟಿ ಜಲಾಶವು ನಿರ್ಮಾಣಗೊಂಡು 61 ವರ್ಷ ಘತಿಸಿದರೂ ನೀರಾವರಿ ಭಾಗ್ಯವೆಂಬುದು ಈ ಅವಳಿ ಜಿಲ್ಲೆಯ ರೈತರಿಗೆ ಸಿಗದಿರುವದು ದುರ್ದೈವದ ಸಂಗತಿಯಾಗಿದೆ ಜಲಾಶಯಕ್ಕಾಗಿ ಭೂಮಿ ಕಳೆದುಕೊಂಡವರು ನಾವಾಗಿದ್ದರೂ ನೀರಾವರಿ ಯೋಜನೆಯ ಲಾಭ ಪಡೆದುಕೊಳ್ಳುತ್ತಿರುವವರು ಅನ್ಯ ಜಿಲ್ಲೆಯವರಾಗಿದ್ದಾರೆ ಕರ್ನಾಟಕದ ಅರ್ದ ಭಾಗದಷ್ಟಿರುವ ಇಸ್ರೇಲ್ ದೇಶವು ನೀರಾವರಿ ಯೋಜನೆಯ ಮೂಲಕ ಬಹುದೊಡ್ಡ ಪ್ರಗತಿಯನ್ನು ಸಾದಿಸಿ ಇಡೀ ವಿಶ್ವದಲ್ಲಿಯೇ ಗುರುತಿಸಿಕೊಂಡಿದೆ ಆದರೆ ನಮ್ಮಲ್ಲಿ ನೀರು ಇದ್ದರೂ ಕುಡಿಯಲು ಬಾರದಂತಿರುವದು ಜನಪ್ರತಿನಿಧಿಗಳ ಇಚ್ಛಾಶಕ್ತಿಯ ಕೊರತೆ ಎಂಬುದು ಎದ್ದು ಕಾಣುತ್ತಿದೆ ಕೂಡಲೇ ಆಲಮಟ್ಟಿ ಜಲಾಶಯವನ್ನು 524.256 ಮೀ ಗೆ ಎತ್ತರಿಸಿ ಅವಳಿ ಜಿಲ್ಲೆಯ ರೈತರಿಗೆ ನೀರೊದಗಿಸುವಂತಹ ಕಾರ್ಯ ಸರ್ಕಾರವು ಮಾಡಬೇಕೆಂದು ಒತ್ತಾಯಿಸಿದರು.

ಈ ಸಮಯದಲ್ಲಿ ರೈತ ಮುಖಂಡರುಗಳಾದ ಆನಂದಗೌಡ ಪಾಟೀಲ, ಅಪ್ಪಣ್ಣಗೌಡ ಬಿರಾದಾರ, ಮಲ್ಲು ತುಪ್ಪದ, ಪ್ರದಾನೆಪ್ಪ ಗುರಿಕಾರ, ಬಸನಗೌಡ ಅಮಲ್ಯಾಳ, ಮಡಿವಾಳಪ್ಪ ಕಲ್ಬುರ್ಗಿ, ಶ್ರೀನಿವಾಸ ಗೊಟಗುಣಕಿ, ರಾಮನಗೌಡ ಹಾದಿಮನಿ, ಬಸನಗೌಡ ಹಳ್ಳಿಪಾಟೀಲ, ಅಶೋಕ ಪಾಟೀಲ, ಬಿ.ಎಸ್.ಸಜ್ಜನ, ಬಸನಗೌಡ ಪಾಟೀಲ, ಮೊದಲಾದವರು ಇದ್ದರು.

## ವಿದ್ಯುತ ಸಮಸ್ಯೆ ಬಗೆಹರಿಸಬೇಕು ಹೆಸ್ಕಾಂ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರ ಆನಂದ ನಾಯಿಕ ಅವರಿಗೆ ಮನವಿ ಸಲ್ಲಿಕೆ



**ರಾಯಬಾಗ:** ಪಟ್ಟಣದಲ್ಲಿ ಆಗುತ್ತಿರುವ ವಿದ್ಯುತ ಸಮಸ್ಯೆ ಬಗೆಹರಿಸಬೇಕು ಮತ್ತು ವಾಣಿಜ್ಯ ಮಳಿಗೆಗಳಿಗೆ ಕನಿಷ್ಠ ದರ ನಿಗದಿಪಡಿಸಬೇಕೆಂದು ಆಗ್ರಹಿಸಿ ಕರ್ನಾಟಕ ರಕ್ಷಣಾ ವೇದಿಕೆ ತಾಲೂಕು ಘಟಕ ಮತ್ತು ಮೆಕ್ಯಾನಿಕಲ್ ಅಸೋಸಿಯೇಶನ್ ವತಿಯಿಂದ ಹೆಸ್ಕಾಂ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರ ಆನಂದ ನಾಯಿಕ ಅವರಿಗೆ ಶುಕ್ರವಾರ ಮನವಿ ಸಲ್ಲಿಸಿದರು.

ಕರವೇ ತಾಲೂಕಾಧ್ಯಕ್ಷ ಅಶೋಕ ಅಂಗಡಿ ಮಾತನಾಡಿ, ರಾಯಬಾಗ ಪಟ್ಟಣದಲ್ಲಿ ಹಲವಾರು ಕಾರ್ಖಾನೆಗಳು, ಗ್ಯಾರೆಜಗಳು, ವೇಲ್ಡಿಂಗ್ ಅಂಗಡಿಗಳು, ಹಾಲಿನ ಡೇರಿಗಳು ಸೇರಿ ಅನೇಕ ಉದ್ಯೋಗಗಳು ವಿದ್ಯುತ ಸಂಪರ್ಕ ಅವಲಂಬಿಸಿದೆ. ಆದರೆ ಹೆಸ್ಕಾಂದವರು ತಾಲೂಕಿನ ಸುತ್ತ ಮುತ್ತಲಿನ ಗ್ರಾಮೀಣ ಪ್ರದೇಶಗಳಲ್ಲಿ ವಿದ್ಯುತ ಸಮಸ್ಯೆಯಾದಲ್ಲಿ ಪಟ್ಟಣದಲ್ಲಿ ಪ್ರತಿ ಗಂಟೆಗೆ, ಅರ್ಧ ಗಂಟೆಗೆ ಪ್ರತಿ ದಿನ 5–6 ಸಲ್ಲ ವಿದ್ಯುತ ಸಂಪರ್ಕ ಕಡಿತಗೊಳಿಸುವುದರಿಂದ ಪಟ್ಟಣದಲ್ಲಿ ನಡೆಸುವ ಉದ್ಯೋಗಗಳ ಮೇಲೆ ಭಾರಿ ಪರಿಣಾಮ ಬೀರಿ, ಆರ್ಥಿಕ ನಷ್ಟ ಅನುಭವಿಸುವಂತೆ ಆಗಿದೆ ಎಂದು ಆರೋಪಿಸಿದರು.

ಹೆಸ್ಕಾಂ ಇಲಾಖೆಯವರು ಶೀಘ್ರ ಪಟ್ಟಣದಲ್ಲಿ ಅಂಡರ್ ಗ್ರೌಂಡ್ ವಿದ್ಯುತ ವ್ಯವಸ್ಥೆ ಕಲ್ಪಿಸಿ ಸಾರ್ವಜನಿಕರಿಗೆ ಮತ್ತು ಉದ್ಯೋಗಿಗಳಿಗೆ ಅನುಕೂಲ ಮಾಡಿಕೊಡಬೇಕು ಮತ್ತು ವಾಣಿಜ್ಯ ಮಳಿಗೆಗಳಿಗೆ ಈಗ ಹೆಚ್ಚಿಸಿರುವ ವಿದ್ಯುತ ದರವನ್ನು ಕಡಿಮೆ ಮಾಡಿ ಕನಿಷ್ಠ ದರವನ್ನು ನಿಗದಿಪಡಿಸಬೇಕೆಂದು ಒತ್ತಾಯಿಸಿದರು. ನಮ್ಮ ಬೇಡಿಕೆಗೆ ಸ್ಪಂದಿಸದಿದ್ದರೆ ಉಗ್ರ ಹೋರಾಟ ನಡೆಸುವುದಾಗಿ ಎಚ್ಚರಿಸಿದರು.

ನಗರ ಘಟಕ ಅಧ್ಯಕ್ಷ ನಾರಾಯಣ ಮೇತ್ರಿ, ಯುವ ಘಟಕದ ಅಧ್ಯಕ್ಷ ರಾಜಶೇಖರ ಗಡ್ಡಿ, ಆನಂದ ಹುದ್ದಾರ, ಸಂಜು ಕೊರವಿ, ಮಹೇಶ ಕೊರವಿ, ರಾಜು ಕುಲಗುಡೆ, ಕಿರಣ ನಾವಿ, ಆದರ್ಶ ಡಬ್ಬನವರ, ರಮೇಶ ಜಾಧವ, ಉಮೇಶ ಮಸಾಲಜಿ, ಪ್ರಭಾಕರ ಕುಲಗುಡೆ, ಇಸ್ಮಾಯಿಲ ದೇಸಾಯಿ, ರಾಜು ಗೆನ್ನನವರ, ವೀರೇಶ ಮುಗಳಖೋಡ ಸೇರಿ ಅನೇಕರು ಇದ್ದರು.

## ಒಳಸಮೀಸಲಾತಿ ವಿರೋಧಿಸಿ ರಾಜ್ಯಾದ್ಯಂತ ಬೃಹತ್ ಹೋರಾಟ: ಮಂಜುನಾಥ ಪಮ್ಮಾರ

**ಬೆಳಗಾವಿ:** ರಾಜ್ಯ ಸರ್ಕಾರ ಜಾ–ರಿಗೆ ತಂದಿರುವ ಒಳಮೀಸಲಾತಿ ಖಂಡಿಸಿ ಇದೇ ಸೆ.4 ರಂದು ಬೆಳಗಾವಿಯಲ್ಲಿ ಬೃಹತ ಪ್ರತಿಭಟನೆ ಮಾಡಲಿದ್ದೇವೆ. ಹಾಗೂ ಸೆ. 10 ರಂದು ಬೆಂಗಳೂರಿನ ಫ್ರೀಡಂ ಪಾರ್ಕ್ ನಲ್ಲಿ ಪ್ರತಿಭಟನೆ ಮಾಡಲಿದ್ದೇವೆ ಎಂದು ರಾಷ್ಟ್ರೀಯ ಗೋರ ಮೇಳಾವಾ ರಾಜ್ಯ ಉಪಾಧ್ಯಕ್ಷ ಮಂಜುನಾಥ ಪಮ್ಮಾರ ಹೇಳಿದರು.

ಇಂದು ಬೆಳಗಾವಿ ನಗರದ ಕನ್ನಡ ಸಾಹಿತ್ಯ ಭವನದಲ್ಲಿ ಮಾಧ್ಯಮಗೋಷ್ಠಿ ನಡೆಸಿ ಮಾತನಾಡಿದ ಅವರು, ಜಾತಿ ಮೀಸಲಾತಿ ಅವೈಜ್ಞಾನಿಕ ವರ್ಗೀಕರಣ ಖಂಡಿಸಿ ಬೃಹತ್ ಸಮಾವೇಶ ನಡೆಯಲಿದೆ. ಬಂಜಾರಾ, ಭೋವಿ, ಕೊರಚ, ಕೊರವ, ಸಮಾಜದಿಂದ ಬೃಹತ್ ಸಮಾವೇಶ ನಡೆಯಲಿದೆ. ಒಳಮೀಸಲಾತಿಯಲ್ಲಿ ದೋಷವಾಗಿದೆ. ದೊಷಪೂರಿತ ದತ್ತಾಂಶ ಪರಿಗಣಿಸಿ ಜಾತಿ



ಮೀಸಲಾತಿ ಅವೈಜ್ಞಾನಿಕವಾಗಿ ವರ್ಗೀಕ–ರಿಸಲಾಗಿದೆ. ಈ ಹಿಂದೆ ಬಿಜೆಪಿ ಸರ್ಕಾರ ಬಂಜಾರಾ, ಕೊರಮ, ಭೋವಿ, ಕೊರಚ ಸಮಾಜಗಳಿಗೆ 4.5 ರಷ್ಟು ಮೀಸಲಾತಿ ಘೋಷಣೆ ಮಾಡಿತ್ತು. ಆದರೆ ಕಾಂಗ್ರೆಸ್ ಸರ್ಕಾರ ಒಟ್ಟು 63 ಸಮುದಾಗಳನ್ನು ಸೇರಿಸಿ 5 ಪರ್ಸಂಟ್ ಮೀಸಲಾತಿ ಘೋಷಣೆ ಮಾಡಿದೆ. ಇದು ಘೋರವಾದ ಅನ್ಯಾಯ. ಮೀಸಲಾತಿ ವರ್ಗೀಕರಣ ಕು–ರಿತು ಸುಪ್ರಿಂ ಕೋರ್ಟ್ ಆದೇಶದಂತೆ ಸೂಕ್ತ ಮಾನದಂಡಗಳನ್ನು ರೂಪಿಸಬೇಕು. ಜಾತಿವಾರು ಸ್ಥಿತಿಗತಿಗಳನ್ನು ಸಮೀಕ್ಷೆ ಹಾಗೂ ಗಣತಿ ನಡೆಸಬೇಕು.

ಇದೇ ನಾಲ್ಕನೇ ತಾರೀಕಿನಂದು ಬೆಳಗಾವಿಯ ಚನ್ನಮ್ಮ ವೃತ್ತದಲ್ಲಿ ಪ್ರತಿಭಟನೆ ಮಾಡಲಿದ್ದೆವೆ. ಅಲ್ಲದೆ ಹತ್ತನೇ ತಾ–ರೀಕಿನಂದು ಬೆಂಗಳೂರಿನ ಫ್ರೀಡಂ ಪಾರ್ಕ್ ನಲ್ಲಿ ಪ್ರತಿಭಟನೆ ಮಾಡಲಿದ್ದೆವೆ. ಸಹೋದರ ಸಮುದಾಯಗಳ ಒಲೈಕೆಗೆ ಸಿದ್ದರಾಮಯ್ಯ ಸರ್ಕಾರ ಹೀಗೆ ಮಾಡಿದೆ. ಸರ್ಕಾರದ ವಿರುದ್ಧ ನಾವು ಪ್ರತಿಭಟನೆ ಮಾಡುತ್ತೆವೆ ಎಂದು ಹೇಳಿದರು.

ಈ ವೇಳೆ ಭೋವಿ ಸಮಾಜದ ಮುಖಂಡ ಸುನೀಲ ಧೊತರೆ, ಬೆಳಗಾವಿ ಮಹಾನಗರ ಬಿಜೆಪಿ ಎಸ್ ಸಿ ಮೋರ್ಚಾ ಜಿಲ್ಲಾಧ್ಯಕ್ಷ ಪ್ರಕಾಶ ರಾಠೋಡ, ಬಂಜಾರ ಸಮಾಜದ ಮುಖಂಡರಾದ ಎಂ ಟಿ ರಾಠೋಡ್, ಬಿಪಿ ಲಮಾಣಿ, ದೇವೆಂದ್ರ ನಾಯಕ, ಸುರೇಶ್ ಲಮಾಣಿ, ರಾಜು ರಾಠೋಡ್, ಅನೀಲ್ ರಾಠೋಡ್, ಗೋವಿಂದ ಲಮಾಣಿ ಲೋಕೇಶ ರಾಠೋಡ್, ಶಿವನಂದ ಚವ್ಹಾನ, ರವಿ ಲಮಾಣಿ ಇದ್ದರು.

## ರಾಧಾ-ಕೃಷ್ಣ ಛಾಯಾ ಚಿತ್ರ ಸ್ಪರ್ಧೆಯಲ್ಲಿ ವಿಜೇತ ಅವಳಿ ಸಹೋದರಿಯರು



ವಿಜಯಪುರ: ಮೈಸೂರಿನ ಅಕ್ಷರ ನಾದ ಕಲೆ, ಸಾಹಿತ್ಯ, ಸಾಂಸ್ಕೃತಿಕ ವೇದಿಕೆ(ರಿ) ವತಿಯಿಂದ ಶ್ರೀ ಕೃಷ್ಣ ಜನ್ಮಾಷ್ಟಮಿ–2025 ರ ನಿಮಿತ್ತ "ಅಕ್ಷರ ನಾದ ಮುದ್ದು ರಾಧಾ–ಕೃಷ್ಣ ಛಾಯಾ ಚಿತ್ರ ಸ್ಪರ್ಧೆ"ಯನ್ನು ದಿ:16 ರಿಂದ 27 ಆಗಸ್ಟ್ 2025 ರವರೆಗೆ ಆನ್ ಲೈನ್ ನಲ್ಲಿ ಆಯೋಜಿಸಲಾಗಿ–ತ್ತು. ಈ ಸ್ಪರ್ಧೆಯಲ್ಲಿ ತಾಲೂಕಿನ ನಾಗಠಾಣ ಗ್ರಾಮದ ಶ್ರೀ ಮಲ್ಲಿಕಾರ್ಜುನ ಹಿರಿಯ ಪ್ರಾಥಮಿಕ ಶಾಲೆಯ 1ನೇ ವರ್ಗದ ಅವಳಿ ವಿದ್ಯಾರ್ಥಿನಿಯರಾದ ಅನುಶ್ರೀ–ಶ್ರೀನಿಧಿ ಬಂಡೆ ಅವರು ಶ್ರೀಕೃಷ್ಣ ವೇಷಧಾರಿಯಾಗಿ ಭಾಗವಹಿಸಿ, ನಿರ್ಣಾಯಕರ ಪ್ರಶಂಸಾ ಪ್ರಮಾಣ ಪತ್ರ ಪಡೆದಿದ್ದಾರೆ ಎಂದು ವೇದಿಕೆಯ ಸಂಸ್ಥಾಪಕ ರಾಜ್ಯಾಧ್ಯಕ್ಷೆ ಡಾ. ಶ್ರುತಿ ಮಧುಸೂದನ್ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ದೀಕ್ಷಾಗೆ ತೆರಳಲು ಆಸಕ್ತ-ರಿಂದ ಅರ್ಜಿ ಅಹ್ವಾನ

ಬೈಲಹೊಂಗಲ –2025–26 ನೇ ಸಾಲಿನಲ್ಲಿ ಮಹಾರಾಷ್ಟ್ರ ನಾಗಪುರದಲ್ಲಿನ ದೀಕ್ಷಾ ಭೂಮಿಗೆ ಹೋಗುವವರಿಗೆ ಬಸ್ ಹಾಗೂ ರೈಲು ಮೂಲಕ ತೆರಳುವವರಿಗೆ ಸಮಾಜ ಕಲ್ಯಾಣ ಇಲಾಖೆಯ ವತಿಯಿಂದ ಪರಿಶಿಷ್ಟ ಜಾತಿಯವರಿಂದ ಅನಲೈನ ಮೂಲಕ ಅರ್ಜಿಗಳನ್ನು ಅಹ್ವಾನ ಮಾಡಲಾಗಿದೆ.ಆ 25 ರಿಂದ್ ಅರ್ಜಿ ಸ್ವೀಕಾರ ಆರಂಭವಾಗಿದ್ದು ಸೆ. 9 ಅರ್ಜಿ ಸಲ್ಲಿಸಲು ಕೊನೆಯ ದಿನವಾಗಿದೆ. ಈಗಾಗಿ ಆಸಕ್ತರು ಹೆಚ್ಚಿನ ಮಾಹಿತಿಗಾಗಿ ತಾಲೂಕ ಸಮಾಜ ಕಲ್ಯಾಣ ಅಧಿಕಾರಿ ಗ್ರೇಡ್ 2 ಮಲ್ಲಿಕಾರ್ಜುನ ಉಳ್ಳೆಗಡ್ಡಿ ಇವರನ್ನು ಸಂಪರ್ಕಿಸುವಂತೆ ಕಚೇ–ರಿಯ ಪ್ರಕಟಣೆ ತಿಳಿಸಿದೆ.

## ವಿಜ್ಞಾನ ಬರವಣಿಗೆ ಪ್ರೋತ್ಸಾಹಿಸಲು ಪ್ರಕಟಿತ ಪುಸ್ತಕಗಳ ಲೇಖಕರಿಂದ ಅರ್ಜಿ ಆಹ್ವಾನ

ಧಾರವಾಡ : ಕರ್ನಾಟಕ ವಿಜ್ಞಾನ ಮತ್ತು ತಂತ್ರಜ್ಞಾನ ಅಕಾಡೆಮಿಯಿಂದ ವಿಜ್ಞಾನ ವಿಷಯಗಳ ಬರವಣಿಗೆಯನ್ನು ಪ್ರೋತ್ಸಾಹಿಸುವ ಸಲುವಾಗಿ ಕೃಷಿ, ವಿಜ್ಞಾನ, ತಂತ್ರಜ್ಞಾನ ಮತ್ತು ವೈದ್ಯಕೀಯ ವಿಷಯಗಳ ಮೇಲೆ ಕನ್ನಡದಲ್ಲಿ ಜನವರಿ 2023 ರಿಂದ ಡಿಸೆಂಬರ್ 2025 ರೊಳಗೆ ಪ್ರಕಟವಾಗಿರುವ ಪುಸ್ತಕಗಳ ಲೇಖಕ–ರಿಂದ ಶ್ರೇಷ್ಠ ಪುಸ್ತಕ ಪ್ರಶಸ್ತಿಗಾಗಿ ಅರ್ಜಿ ಆಹ್ವಾನಿಸಲಾಗಿದೆ.

## ಶ್ರೀ ಸತ್ಯ ನಾರಾಯಣ ಪೂಜೆ ನೆರವೇರಿಸಿದ ಪೋಲೀಸ್ ಇನ್ಸ್ಪೆಕ್ಟರ್ ಎಚ್ ಡಿ ಮುಲ್ಲಾ



**ಘಟಪ್ರಭಾ** : ಬೆಳಗಾವಿಯಲ್ಲಿ ಗಣೇಶ ಮೂರ್ತಿ ಪ್ರತಿಷ್ಠಾಪನೆ ಮಾಡಿ ಸುದ್ದಿ ಮಾಡಿದ ಜಿಲ್ಲಾಧಿಕಾರಿ ಮಹಮ್ಮದ್ ರೋಷನ್ ಅವರು ಒಂದು ಕಡೆಯಾದರೆ ಜಿಲ್ಲೆಯ ಗೋಕಾಕ ತಾಲೂಕಿನ

ಘಟಪ್ರಭಾದ ಪೋಲೀಸ್ ಠಾಣೆಯಲ್ಲಿ ಶ್ರೀ ಸತ್ಯ ನಾರಾಯಣ ಪೂಜೆಯನ್ನು ಶ್ರದ್ದೆ, ಭಕ್ತಿ, ಭಾವದಿಂದ ನೆರವೇರಿಸಿದ ಪೋಲೀಸ್ ಇನ್ಸ್ಪೆಕ್ಟರ್ ಎಚ್ ಡಿ ಮುಲ್ಲಾ, ರಾಷ್ಟ್ರೀಯ ಭಾವೈಕ್ಯತೆಯ ಭಾವನೆ ಬೆಳೆಸುವದರೊಂದಿಗೆ ಘಟಪ್ರಭಾದ ನಾಗರಿಕ ಮೆಚ್ಚುಗೆಗೆ ಪಾತ್ರವಾಗಿದ್ದಾರೆ.

ಘಟಪ್ರಭಾ ಪೋಲೀಸ್ ಠಾಣೆಯಲ್ಲಿ ಶ್ರೀ ಗಣೇಶ ಉತ್ಸವದ ಅಂಗವಾಗಿ ಶ್ರೀ ಸತ್ಯ ನಾರಾಯಣ ಪೂಜೆ ಹಾಗೂ ಅನ್ನ ಸಂತರ್ಪಣೆ ಕಾರ್ಯಕ್ರಮಗಳು ಶುಕ್ರವಾರ ದಿನಾಂಕ 29–08–2025 ರಂದು ಭಕ್ತಿ ಭಾವದಿಂದ ಆತ್ಮೀಯ ವಾತಾವರಣದಲ್ಲಿ ನಡೆದವು. ಕಾರ್ಯಕ್ರಮದಲ್ಲಿ ಗೋಕಾಕ ತಹಶೀಲ್ದಾರ ಮೋಹನ ಭಸ್ಮೆ, ಗ್ರಾಮ ಲೆಕ್ಕಾಧಿಕಾರಿ ಮಲ್ಲಿಕಾರ್ಜುನ ಹಂಚಿನಾಳ, ಸಹಾಯಕರಾದ ಕೃಷ್ಣಮೂರ್ತಿ ದೇಸಾಯಿ, ಪೋಲೀಸ್ ಇನ್ಸ್ಪೆಕ್ಟರ್ ಎಚ್ ಡಿ ಮುಲ್ಲಾ, ಪಿ ಎಸ್ ಐ ಕಣವಿ,ಎ ಎಸ್ ಆಯ್ ಪ್ರಭಾಕರ ಪಾಟೀಲ, ಸಿಬ್ಬಂದಿಗಳಾದ ರಾಜು ಧುಮಾಳೆ, ವಿಠ್ಠಲ ಕೋಳಿ, ಮಠಪತಿ, ಬಿ ಎಸ್ ನಾಯಿಕ, ಹಣಮಂತ ಮಲ್ಲಾಡದ ಸೇರಿದಂತೆ ಘಟಪ್ರಭಾ ಹಾಗೂ ಸುತ್ತಮುತ್ತಲಿನ ಗಣ್ಯ ನಾಗರಿಕರು, ಮುಖಂಡರು ಪತ್ರಕರ್ತರು ಸಮಾಜ ಸೇವಕರು ನೂರಾರು ಸಂಖ್ಯೆಯಲ್ಲಿ ಭಾಗವಹಿಸಿದ್ದರು .

## ಗಣೇಶೋತ್ಸವದಲ್ಲಿ ರಕ್ತದಾನ ಶಿಬಿರ, ಆರೋಗ್ಯ ತಪಾಸಣೆ

**ಮುಂಡರಗಿ;** ಮನುಷ್ಯರಾಗಿ ಜೀವಿಸುವುದಕ್ಕೆ ಪ್ರಾಮುಖ್ಯತೆ ಇದೆ. ನಾವೂ ಬದುಕಿ ಸಮಾಜದಲ್ಲಿ ಉಳಿದವರು ಬದುಕಲು ಪ್ರೇರಣೆಯಾಗಬೇಕು. ಆ ನಿಟ್ಟಿನಲ್ಲಿ ಗಣೇಶೋತ್ಸವದಲ್ಲಿ ರಕ್ತದಾನ ಶಿಬಿರ, ಆರೋಗ್ಯ ತಪಾಸಣೆ ಹಮ್ಮಿಕೊಂಡಿರುವ ಮುಂಡರಗಿ ತಾಲೂಕು ಪಂಚಾಯತ ನಡೆ ಅನುಕರಣೀಯ ಎಂದು ಜಿಲ್ಲಾ ಪಂಚಾಯತ ಉಪಕಾರ್ಯದರ್ಶಿಗಳಾದ ಸಿ.ಆರ್. ಮುಂಡರಗಿ ಅವರು ಹೇಳಿದರು.

ಅವರು ಮುಂಡರಗಿ ತಾಲೂಕು ಪಂಚಾಯತ ಆವರಣದಲ್ಲಿ ಗಣೇಶೋತ್ಸವ ಅಂಗವಾಗಿ ಹಮ್ಮಿಕೊಂಡಿದ್ದ ಉಚಿತ ಆರೋಗ್ಯ ತಪಾಸಣೆ ಹಾಗೂ ರಕ್ತದಾನ ಶಿಬಿರದ ಅಧ್ಯಕ್ಷತೆವಹಿಸಿ ಮಾತನಾಡಿದರು.

ರಕ್ತದಾನವು ಜೀವ ಉಳಿಸುವ ಕಾರ್ಯವಾಗಿದ್ದು, ತುರ್ತು ಸಂದರ್ಭಗಳಲ್ಲಿ ಮತ್ತು ಶಸ್ತ್ರಚಿಕಿತ್ಸೆಗಳ ಸಮಯದಲ್ಲಿ ರಕ್ತದ ಅಗತ್ಯವಿರುವವರಿಗೆ ನೆರವಾಗುತ್ತದೆ. ಒಂದು ಬಾರಿ ರಕ್ತದಾನ ಮಾಡುವ ಮೂಲಕ ನೀವು ಹಲವಾರು ಜನರ ಜೀವ ಉಳಿಸಬಹುದು



ಮತ್ತು ಇದರಿಂದ ದಾನಿಗಳಿಗೂ ಹಲವು ಆರೋಗ್ಯ ಲಾಭಗಳಿವೆ. ಅದೇ ರೀತಿ ಅಂಗಾಂಗ ದಾನಗಳನ್ನು ಮಾಡಲು ಸಹ ನಾವು ಮುಂದಾಗಬೇಕು. ಇದರಿಂದ ನಾವಿಲ್ಲವಾದಾಗಲೂ ಜೀವಿಸಬಹುದು ಎಂದು ಕರೆ ನೀಡಿದರು.

ಇದೇ ವೇಳೆ ರಕ್ತದಾನ ಮಾಡಿದವರಿಗೆ ಪ್ರಮಾಣಪತ್ರಗಳನ್ನು ವಿತರಿಸಲಾಯಿತು.

ಯೋಜನಾ ಅಂದಾಜು ಮತ್ತು ಮೌಲ್ಯಮಾಪನ ಅಧಿಕಾರಿ ಬಿ.ಎಲ್. ಕೊಪ್ಪಳ, ಸಹಾಯಕ ಕಾರ್ಯದರ್ಶಿ ಎಸ್ ಎಸ್ ಕಲ್ಮನಿ, ಮುಂಡರಗಿ ತಾಪಂ ಕಾರ್ಯನಿರ್ವಾಹಕ ಅಧಿಕಾರಿ ವಿಶ್ವನಾಥ ಹೊಸಮನಿ, ತಾಲೂಕಾ ಯೋಜನಾಧಿಕಾರಿ ಪ್ರವೀಣ ಗೋಣೆಮ್ಮನವರ, ಗ್ಯಾರಂಟಿ ಸಮಿತಿ ಸದಸ್ಯ ವಿಶ್ವನಾಥ ಪಾಟೀಲ, ತಾಲೂಕಾ ಆರೋಗ್ಯ ಸುರಕ್ಷತಾ ಸಮಿತಿ ಸದಸ್ಯ ಯಲ್ಲಪ್ಪಗೌಡ ಕರಮುಡಿ ಮುಂತಾದವ–ರಿದ್ದರು.

****

## ಗಣಿತ ಶಿಕ್ಷಕರಾದ ತಾಲೂಕು ಪಂಚಾಯತ ಇಓ ಚಂದ್ರಶೇಖರ ಕಂದಕೂರ



**ಗಜೇಂದ್ರಗಡ:** ತಾಲೂಕು ಪಂಚಾಯತ ಕಾರ್ಯನಿರ್ವಾಹಕ ಅಧಿಕಾರಿಗಳಾದ ಚಂದ್ರಶೇಖರ ಬಿ, ಕಂದಕೂರು ಅವರು ರಾಜೂರು ಗ್ರಾಮದ ಸರ್ಕಾರಿ ಕನ್ನಡ ಪ್ರಾಥಮಿಕ ಶಾಲೆಗೆ ದಿಢೀರ್ ಭೇಟಿ ನೀಡಿ ಶಾಲಾ ಶೈಕ್ಷಣಿಕ ಚಟುವಟಿಕೆಗಳನ್ನು ಪರಿಶೀಲಿಸಿದರು. ಶಾಲೆಯಲ್ಲಿ ಮಕ್ಕಳ ಕಲಿಕಾ ಗುಣಮಟ್ಟವನ್ನು ಹೆಚ್ಚಿಸುವಂತೆ ಶಿಕ್ಷಕರಿಗೆ ತಾಕೀತು ಮಾಡಿದರು.

ರಾಜೂರು ಗ್ರಾಮದ ಸರ್ಕಾರಿ ಕನ್ನಡ ಪ್ರಾಥಮಿಕ ಶಾಲೆಗೆ ಭೇಟಿ ನೀಡಿದ ಇಓ ಅವರು, 7 ನೇ ತರಗತಿಯ ಮಕ್ಕಳಿಗೆ ಗಣಿತ ವಿಷಯದ ಸಂಕಲನ, ವ್ಯವಕಲನ, ಸರಳೀಕರಣ ಮತ್ತು ಏಕೀಕರಣ ಕು–ರಿತು ಪಾಠ ಬೋಧನೆ ಮಾಡಿದರು. ಗಣಿತ ವಿಷಯದಲ್ಲಿ ಶಾಲಾ ಮಕ್ಕಳು ಹೊಂದಿರುವ ಗುಣಮಟ್ಟ ಪರಿಶೀಲಿಸಿದರು. ಖುದ್ದು ಮಕ್ಕಳನ್ನು ಕರೆದು ಬ್ಲಾಕಬೋರ್ಡ್ ನಲ್ಲಿ ಸಂಖ್ಯೆಗಳ ಸಂಕಲನ ಮಾಡುವಂತೆ ತಿಳಿಸಿ ಮಕ್ಕಳಿಗೆ ಇರುವ ಗಣಿತ ವಿಷಯದ ಆಸಕ್ತಿ ಪರಿಶೀಲಿಸಿದರು. ಅಲ್ಲದೆ ಖುದ್ದು ಕೆಲವೊಂದು ಗಣಿತದ ಸಮಸ್ಯೆಗಳನ್ನು ಬ್ಲಾಕಬೋರ್ಡ್ ನಲ್ಲಿ ಬಗೆಹರಿಸಿದ ಇಓ ಕಂದಕೂರು ಅವರು ಮಕ್ಕಳಿಗೆ ಗಣಿತದ ಮೇಷ್ಟ್ರಾಗಿ ಗಮನ ಸೆಳೆದರು.

ಶಾಲೆಯ ಮುಖ್ಯೋಪಾಧ್ಯಾಯರು ಮತ್ತು ಶಿಕ್ಷಕರ ಜೊತೆ ಸಮಾಲೋಚನೆ ನಡೆಸಿದ ಇಓ ಅವರು, ಶಾಲಾ ಯೋಜನೆಯಂತೆ ಕೇವಲ ಪಾಠ ಮುಕ್ತಾಯಗೊಳಿಸುವ ಕಾರ್ಯವನ್ನು ಅಷ್ಟೇ ಮಾಡದೇ ಶಾಲಾ ಶಿಕ್ಷಕರು ಮಕ್ಕಳ ಕಲಿಕಾ ಗುಣಮಟ್ಟಕ್ಕೆ ಅನುಗುಣವಾಗಿ ಪಾಠ ಬೋಧನೆ ಮಾಡಬೇಕು. ವಿಶೇಷ ತರಗತಿ ಆಯೋಜಿಸಿ ಕಲಿಕೆಯಲ್ಲಿ ಹಿಂದುಳಿದ ಮಕ್ಕಳ ಬುದ್ದಿಮಟ್ಟ ಹೆಚ್ಚಿಸವ ಕೆಲಸವನ್ನು ಶಾಲಾ ವಿಷಯ ಶಿಕ್ಷಕರು ಮಾಡಬೇಕೆಂದು ಸೂಚಿಸಿದರು.

ಶಾಲೆಯ ಅಡುಗೆ ಕೋಣೆಗೆ ಭೇಟಿ ನೀಡಿ ಮಕ್ಕಳಿಗೆ ಕೊಡುವ ಆಹಾರದ ಗುಣಮಟ್ಟ ಪರಿಶೀಲಿಸಿದರು. ಆಹಾರದ ಮೆನ್ಯೂವಿನಂತೆ ಪ್ರತಿದಿನ ಸರಿಯಾದ ಸಮಯಕ್ಕೆ ಮಕ್ಕಳಿಗೆ ಆಹಾರ ಸಿದ್ಧಪಡಿಸಬೇಕೆಂದು ಅಡುಗೆ ಸಿಬ್ಬಂದಿ ಅವರಿಗೆ ತಾಕೀತು ಮಾಡಿದರು. ಇದೇ ವೇಳೆ ಶಾಲೆಯ ಮೂಲಭೂತ ಅವಶ್ಯಕತೆಗಳ ಪೂರೈಕೆ ಬಗ್ಗೆ ಶಾಲಾ ಮುಖ್ಯೋಪಾಧ್ಯಾಯರು ಇಓ ಅವರಿಗೆ ಮನವಿ ಮಾಡಿಕೊಂಡರು. ಆದ್ಯತೆ ಮೇರೆಗೆ ಪೂರೈಸುವುದಾಗಿ ಇಓ ಅವರು ಭರವಸೆ ನೀಡಿದರು. ಗ್ರಾಮದ ಗ್ರಂಥಾಲಯಕ್ಕೆ ಭೇಟಿ ನೀಡಿ ಪುಸ್ತಕ ಓದಿಗೆ ಸೂಕ್ತ ವಾತಾವರಣ ನಿರ್ಮಿಸಿರುವ ಕುರಿತು ಪರೀಕ್ಷಿಸಿದರು. ಗ್ರಂಥಾಲಯಕ್ಕೆ ಗ್ರಾಮದ ಸಾರ್ವಜನಿಕರು ಮತ್ತು ಯುವಕರು ಆಸಕ್ತಿಯಿಂದ ಬಂದು ಓದುವ ಹವ್ಯಾಸ ಬೆಳೆಸಿಕೊಳ್ಳುವಂತೆ ವಾತಾವರಣ ನಿರ್ಮಿಸಿ ಅಂತ ಗ್ರಂಥ–ಪಾಲಕರಿಗೆ ಸೂಚಿಸಿದರು.

ಈ ಸಂದರ್ಭದಲ್ಲಿ ರಾಜೂರು ಗ್ರಾಪಂ ಕಾರ್ಯದರ್ಶಿ ರಾಜು ಗಾರಗಿ, ನರೇಗಾ ಸಿಬ್ಬಂದಿ ವರ್ಗ ಮತ್ತು ಗ್ರಾಪಂ ಸಿಬ್ಬಂದಿ ವರ್ಗ ಹಾಜರಿದ್ದರು.

****

## ಪೌಷ್ಟಿಕ ಆಹಾರ ಮಾಹಿತಿ ಶಿಬಿರ

**ಬೆಳವಡಿ.** ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ಬೈಲಹೊಂಗಲ ತಾಲೂಕಿನ ತುರಕರ ಸೀಗೇಹಳ್ಳಿ ಗ್ರಾಮದಲ್ಲಿ ಕನ್ನಡಾಂಬೆ ಜ್ಞಾನವಿಕಾಸ ಕೇಂದ್ರದಲ್ಲಿ ಪೌಷ್ಟಿಕ ಆಹಾರ ಮಾಹಿತಿ ಕಾರ್ಯಕ್ರಮ ಆಯೋಜಿಸಲಾಯಿತು..

ಕಾರ್ಯಕ್ರಮದ ಉದ್ಘಾಟನೆಯನ್ನು ಗ್ರಾಮ ಪಂಚಾಯಿತಿ ಅಧ್ಯಕ್ಷರಾದ ಶ್ರೀಮತಿ ಚೆನ್ನವ್ವ ಯಕ್ಕುನಿ ಯೋಜನಾಧಿಕಾರಿಗಳಾದ ವಿಜಯಕುಮಾರ್ ಸರ್ ಸರಕಾರಿ ಪ್ರೌಢ ಶಾಲೆಯ ಶಿಕ್ಷಕರಾದ ಶಂಕರ್ ಕುಂಬಾರ, ಗಿರಿ ಮಲ್ಲೇಶ್ವರ, ಕಮಿಟಿ ಸದಸ್ಯರಾದ ಮಲ್ಲೇಶಪ್ಪ ಕಂಬಳಿ ತಾಲೂಕಿನ ಜ್ಞಾನವಿಕಾಸಸಮನ್ವೇಧಿಕಾರಿ ಶೈಲಾ ಜಕ್ಕನವರ ವಲಯದ ಮೇಲ್ವಿಚಾರಕರಾದ ಪರಶುರಾಮ್ ಒಕ್ಕೂಟದ ಅಧ್ಯಕ್ಷರಾದ ಮಹಾದೇವಿ ನರಗಟ್ಟಿ ದೀಪ ಬೆಳಗಿಸುವ ಮೂಲಕ



ಕಾರ್ಯಕ್ರಮಕ್ಕೆ ಚಾಲನೆ ನೀಡಿದರು.

ಸರಕಾರಿ ಪ್ರೌಢಶಾಲೆ ಶಿಕ್ಷಕರಾದ ಶಂಕರ ಕುಂಬಾರ ಮಾತನಾಡಿ ಪೌಷ್ಟಿಕ ಆಹಾರ ಸೇವನೆ, ಸಿರಿಧಾನ್ಯಗಳ ಬಳಕೆ, ಸಿರಿಧಾನ್ಯಗಳನ್ನು ಉಪಯೋಗಿಸುವುದರಿಂದ ಆಗುವ ಅನುಕೂಲಗಳ ಬಗ್ಗೆ ಮಾಹಿತಿ ನೀಡಿದರು.*ಪೌಷ್ಟಿಕ ಆಹಾರ ಸೇವನೆ, ನಿತ್ಯ ಜೀವನದಲ್ಲಿ ಸಿರಿಧಾನ್ಯ ಹಸಿರು ತರಕಾರಿ ಸೊಪ್ಪು ಇದರಲ್ಲಿ ಸಿಗುವಂತ ವಿಟಮಿನ್ ಪೌಷ್ಟಿಕವಾಗಿ, ಪರಿಸರ ಮತ್ತು ನೈತಿಕವಾಗಿ ಒಳ್ಳೆಯದು. ಸಿರಿಧಾನ್ಯಗಳ ವಿಧಗಳು, ಅವುಗಳಿಂದ ಆರೋಗ್ಯಕ್ಕೆ ಇರುವ ಪ್ರಯೋಜನಗಳ ಬಗ್ಗೆ ಗರ್ಭಿಣಿಯ–ರಿಗೆ ವಯಸ್ಕರರಿಗೆ ವೃದ್ಧರಿಗೆ ಬಳಕೆ ಮಾಡುವ ಸಿರಿಧಾನ್ಯವು ಪೌಷ್ಟಿಕಾಂಶದ ಧಾನ್ಯಗಳಲ್ಲಿ ಒಂದಾಗಿದೆ, ಏಕೆಂದರೆ ಇದು ಕಬ್ಬಿಣ, ಪ್ರೋಟೀನ್, ಉತ್ಕರ್ಷಣ ನಿರೋಧಕಗಳು, ಆಹಾರದ ಫೈಬರ್, ಕ್ಯಾಲ್ಸಿಯಂ, ಮೆಗ್ನೀಸಿಯಮ್, ಪೊಟ್ಯಾಸಿಯಮ್ ಮತ್ತು ಫೋಲೇಟ್ – ಗರ್ಭಾವಸ್ಥೆಯಲ್ಲಿ ಹೆಚ್ಚು ಅಗತ್ಯವಿರುವ ಎಲ್ಲಾ ಪೋಷಕಾಂಶಗಳಲ್ಲಿ ಸಮೃದ್ಧವಾಗಿದೆ. ಇದರ ಹೆಚ್ಚಿನ ಕಬ್ಬಿಣದ ಅಂಶವು ಹಿಮೋಗ್ಲೋಬಿನ್ ಮಟ್ಟವನ್ನು ಸುಧಾರಿಸುತ್ತದೆ ಎಂದು ಮಾಹಿತಿ ನೀಡಿದರು.*

ತಾಲೂಕಾ ಯೋಜನಾಧಿಕಾ–ರಿಳಾದ ವಿಜಯಕುಮಾರ ಪೌಷ್ಟಿಕ ಆಹಾರ ಕುರಿತು ತರಕಾರಿ ಕಾಳುಗಳು ಮತ್ತು ಉತ್ತಮ ಆಹಾರ ಬಳಕೆ ಯೋಜನೆಯಲ್ಲಿ ನಡೆಯುವ ಕಾರ್ಯಕ್ರಮಗಳ ಬಗ್ಗೆ ಜ್ಞಾನವಿಕಾಸದ್ಲಲಿ ಸಿಗುವ ಸೌಲಭ್ಯ ಪಡೆದುಕೊಳ್ಳುವ ಬಗ್ಗೆ ತಿಳಿಸಿದರು ಪೌಷ್ಟಿಕಾಂಶ ಇರುವ ವಿಟಮಿನ್ ಬರಿತಾ ಪದಾರ್ಥಗಳ ಸೇವನೆ ಮಾಡಲು ಸಲಹೆ ನೀಡಿದರು.

*ಕಾರ್ಯಕ್ರಮದ ನಿರೂಪಣೆ ಮಂಜುಳಾ ಹಿರೇಮಠ,,ಸ್ವಾಗತ ಮಹಾದೇವಿ ಕುರಿ,ವಂದನೆಯನ್ನು ಸೇವಾ ಪ್ರತಿನಿಧಿ ಸವಿತಾ ನೆರವೇ–ರಿಸಿದರು. ಕೇಂದ್ರದ ಸದಸ್ಯರು ಉಪಸ್ಥಿತರಿದ್ದರು.

## 10 ನೇ ವರ್ಷದ ಗಣೇಶ ಚತುರ್ಥಿ ಆಯೋಜಿಸದ ರಸಮಂಜರಿ ಕಾರ್ಯಕ್ರಮ

**ಯರಗಟ್ಟಿ** : ಪಟ್ಟಣದ ಮಹಾಂತೇಶ ನಗರದ ಗಜಾನನ ಯುವಕ ಮಂಡಳಯ 10 ನೇ ವರ್ಷದ ಗಣೇಶ ಚತುರ್ಥಿ ಆಯೋಜಿಸದ ರಸಮಂಜರಿ ಕಾರ್ಯಕ್ರಮವನ್ನು ಬಿಜೆಪಿ ಮುಖಂಡ ಮಡಿವಾಳಪ್ಪ ಬಿದರಗಡ್ಡಿ ಜ್ಯೋತಿ ಬೆಳಗಿಸುವ ಮೂಲಕ ಉದ್ಘಾಟಿಸಿ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅವರು ಸಂಗೀತಕ್ಕೆ ಮನು?ನ ಮನಸ್ಸನ್ನು ಅರಳಿಸುವ ಶಕ್ತಿ ಇದೆ, ಸಂಗೀತವು ಜೀವನಕ್ಕೆ ಸಂಜೀವಿನಿಯಾಗಿದೆ. ಪಾಶ್ಚಾತ್ಯ ಸಂಗೀಥ ಮನಸ್ಸನ್ನು ಕೆಡಿಸಿದರೆ, ನಮ್ಮ ಭಾರತೀಯ ಸಂಗೀತ ಭಕ್ತಿ ಮತ್ತು ಮುಕ್ತಿ ಮಾರ್ಗಕ್ಕೆ ಕೊಂಡೊಯ್ಯುತ್ತದೆ ಎಂದು ತಿಳಿಸಿದರು. ಈ ಸಂದರ್ಭದಲ್ಲಿ ಮಾಜಿ ಜಿ. ಪಂ. ಸದಸ್ಯ ಅಜೀತಕುಮಾರ ದೇಸಾಯಿ, ಮಾಜಿ ಗ್ರಾ ಪಂ. ಸದಸ್ಯ ಈರಣ್ಣಾ ಮಠಪತಿ,



ಮಾಜಿ ಪ. ಪಂ. ಸದಸ್ಯ ವಿಶಾಲಗೌಡ ಪಾಟೀಲ, ಮಹಾಂತೇಶ ಜಕಾತಿ, ಚಂದ್ರಶೇಖರ ಹಾದಿಮನಿ, ಮಾಜಿ ಸೈನಿಕರಾದ ಕುಮಾರ ಹಿರೇಮಠ, ಶಿವಾನಂದ ನಿಜಗುಲಿ, ಯುವ ಮುಖಂಡ ಚೇತನ ಜಕಾತಿ, ತೊರಗಲ್, ಶಿವಾನಂದ ಪಟ್ಟಣಶೆಟ್ಟಿ, ಶಶಿಧರ ರುದ್ರಾಪೂರ, ಶ್ರೀಕಾಂತ ಇಟ್ನಾಳ, ಅಶೋಕ್ ಗಾಣಗಿ, ಶ್ರೀಕಾಂತ ಜಕಾತಿ ಸೇರಿದಂತೆ ಗಜಾನನ ಮಂಡಳಿಯ ಎಲ್ಲ ಸದಸ್ಯರು ಹಿರಿಯರು ಯುವ ಮಿತ್ರರು ಉಪಸ್ಥಿತರಿದ್ದರು.

## ಯುವನಿಧಿ ಫಲಾನುಭವಿಗಳು 'ಕೌಶಲ್ಯ ಕರ್ ಪೋರ್ಟಲ್'ನಲ್ಲಿ ನೋಂದಾಯಿಸಿಕೊಳ್ಳಲು ಸೂಚನೆ -ಜಿಲ್ಲಾಧಿಕಾರಿ

**ಹಾವೇರಿ.** : ಯುವನಿಧಿ ಯೋಜನೆಯಡಿ ನೋಂದಾಯಿಸಿ ಸತತ ಆರು ತಿಂಗಳು ನಿರುದ್ಯೋಗ ಭತ್ಯೆಯನ್ನು ಪಡೆಯುತ್ತಿರುವ ಫಲಾನುಭವಿಗಳು ಕೌಶಲ್ಯ ತರಬೇತಿ ಮತ್ತು ಉದ್ಯಮಶೀಲತಾ ತರಬೇತಿ ಪಡೆಯಲು ಕಡ್ಡಾಯವಾಗಿ ಕೌಶಲ್ಯಕರ್ ಪೋರ್ಟಲ್‌ನಲ್ಲಿ ನೋಂದಾಯಿಸಿಕೊಳ್ಳಬೇಕು ಎಂದು ಜಿಲ್ಲಾಧಿಕಾರಿ ಡಾ.ವಿಜಯಮಹಾಂತೇಶ ದಾನಮ್ಮನವರ ಅವರು ತಿಳಿಸಿದ್ದಾರೆ.

ಯುವನಿಧಿ ಯೋಜನೆಯಡಿ ನೋಂದಾಯಿಸಿಕೊಂಡು ನಿರುದ್ಯೋಗ ಭತ್ಯೆ ಪಡೆಯುತ್ತಿರುವ ಯುವಕ ಮತ್ತು ಯುವತಿಯರು ಯುವನಿಧಿ ಪ್ಲಸ್ ಕಾರ್ಯಕ್ರಮದಡಿ ಕೌಶಲ್ಯ ತರಬೇತಿ ಮತ್ತು ಉದ್ಯಮಶೀಲತಾ ತರಬೇತಿಯನ್ನು ಜಿಟಿಟಿಸಿ, ಸಿಡಾಕ್, ಕರ್ನಾಟಕ ಐಟಿಐ, ಉದ್ಯೋಗ ಸೊಸೈಟಿ, ಕರ್ನಾಟಕ ಜರ್ಮನ್ ಬಹು ಕೌಶಲ್ಯ ಅಭಿವೃದ್ಧಿ ನಿಗಮ, ಮೋಕ್ಷಗೊಂಡ ತರಬೇತಿ ಸಂಸ್ಥೆಗಳ ಮುಖಾಂತರ ಆಯೋಜಿಸಲು ಉದ್ದೇಶಿಸಲಾಗಿದೆ.

ಯುವನಿಧಿ ಫಲಾನುಭವಿಗಳು ಒಂದು ವೇಳೆ ತರಬೇತಿ ಪಡೆಯಲು ಕೌಶಲ್ಯಕರ್ ಪೋರ್ಟಲ್‌ನಲ್ಲಿ ನೋಂದಾಯಿಸಿಕೊಳ್ಳದೆ ಇದ್ದಲ್ಲಿ ಅಂತಹ ಅಭ್ಯರ್ಥಿಗಳಿಗೆ ನಿರುದ್ಯೋಗ ಭತ್ಯೆ ಸ್ಥಗಿತಗೊಳಿಸಲಾಗುವುದು. ಯುವನಿಧಿ ಫಲಾನುಭವಿಗಳು ಯೋಜನೆಯಡಿ ಪಡೆಯುತ್ತಿರುವ ನಿರುದ್ಯೋಗ ಭತ್ಯೆ ಕೌಶಲ್ಯ ತರಬೇತಿ ಮತ್ತು ಉದ್ಯಮಶೀಲತಾ ತರಬೇತಿ ಪಡೆಯಲು



ಕೌಶಲ್ಯಕರ್ ಪೋರ್ಟಲ್‌ನಲ್ಲಿ ನೋಂದಾಯಿಸಿಕೊಂಡು ತರಬೇತಿ ಪಡೆದರೆ ನಿರುದ್ಯೋಗ ಭತ್ಯೆ ತಡೆಹಿಡಿಯಲಾಗುತ್ತದೆಂದು ಭಾವಿಸಿ, ಕೌಶಲ್ಯಕರ್ ಪೋರ್ಟಲ್‌ನಲ್ಲಿ ನೋಂದಾಯಿಸಿಕೊಳ್ಳಲು ಹಿಂಜ–ರಿಯುತ್ತಿರುವುದಾಗಿ ತಿಳಿದು ಬಂದಿರುತ್ತದೆ.

ಆದರೆ ತರಬೇತಿಯನ್ನು ಪಡೆದರೂ ಸರ್ಕಾರವು ನಿಗದಿಪಡಿಸಿರುವ ಅವಧಿಯವರೆಗೆ ನಿರುದ್ಯೋಗ ಭತ್ಯೆಯನ್ನು ಪಡೆಯಲು ಯಾವುದೇ ತೊಂದರೆಗಳು ಇರುವುದಿಲ್ಲ. ಆದ–ರಿಂದ ಎಲ್ಲಾ ಯುವನಿಧಿ ಫಲಾನುಭವಿಗಳು ಕೌಶಲ್ಯ ತರಬೇತಿ ಮತ್ತು ಉದ್ಯಮಶೀಲತೆ ತರಬೇತಿಯನ್ನು ಪಡೆಯಲು ಕೌಶಲ್ಯಕರ್ ಪೋರ್ಟಲ್ (Websitehttps://www.kaushalkar.com/app/registration_verify)ನಲ್ಲಿ ನೋಂದಾಯಿಸಿ ಕೊಳ್ಳುವಂತೆ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಮಹಾತ್ಮ ಗಾಂಧೀಜಿ 156ನೇ ಜಯಂತಿ: ಜಿಲ್ಲಾ - ರಾಜ್ಯ ಮಟ್ಟದ ಬಾಪೂಜಿ ಪ್ರಬಂಧ ಸ್ಪರ್ಧೆ

**ಹಾವೇರಿ.** ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ವತಿಯಿಂದ ಆಚರಿಸುತ್ತಿರುವ ರಾಷ್ಟ್ರಪಿತ ಮಹಾತ್ಮ ಗಾಂಧೀಜಿಯವರ 156ನೇ ಜಯಂತಿಯ ದಿನಾಚರಣೆಯ ಅಂಗವಾಗಿ ವಿದ್ಯಾರ್ಥಿ ಹಾಗೂ ಯುವಜನರಲ್ಲಿ ಮಹಾತ್ಮ ಗಾಂಧೀ-ಜಿಯವರ ಬದುಕು, ಸ್ವಾತಂತ್ರ್ಯ ಚಳುವಳಿ, ಸರಳತೆ, ಅಹಿಂಸಾ ಮಾರ್ಗ, ಅಸ್ಪೃಶ್ಯತೆ ನಿವಾರಣೆಗಾಗಿ ನಡೆಸಿದ ಪ್ರಯೋಗಗಳು ಇತ್ಯಾದಿ ವಿಚಾರಗಳ ಬಗ್ಗೆ ಪ್ರೌಢಶಾಲೆ, ಪದವಿ ಪೂರ್ವ ಹಾಗೂ ಪದವಿ / ಸ್ನಾತಕೋತ್ತರ ವಿದ್ಯಾರ್ಥಿಗಳಿಗೆ ಬಾಪೂಜಿ ಪ್ರಬಂಧ ಸ್ಪರ್ಧೆಯನ್ನು ಜಿಲ್ಲಾ ಮತ್ತು ರಾಜ್ಯ ಮಟ್ಟದಲ್ಲಿ ಹಮ್ಮಿಕೊಳ್ಳಲಾಗುತ್ತಿದೆ.

ವಿವಿಧ ವಿಷಯಗಳ ಕುರಿತು ಪ್ರೌಢಶಾಲೆ, ಪದವಿ ಪೂರ್ವ ಶಿಕ್ಷಣ ಹಾಗೂ ಪದವಿ-ಸ್ನಾತಕೋತ್ತರ ಪದವಿಗಳ ಹಂತದ ವಿದ್ಯಾರ್ಥಿಗಳಿಗೆ ಒಟ್ಟು 3 ವಿಭಾಗಗಳಲ್ಲಿ ಬಾಪೂಜಿ ಪ್ರಬಂಧ ಸ್ಪರ್ಧೆಯನ್ನು ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯಿಂದ ಆಯೋಜಿಸಲು ಉದ್ದೇಶಿಸಲಾಗಿದೆ. ವಿಜೇತರಿಗೆ ರಾಜ್ಯ ಮಟ್ಟದಲ್ಲಿ ಪ್ರಥಮ 31 ಸಾವಿರ ರೂ. ದ್ವಿತೀಯ 21 ಸಾವಿರ ರೂ. ಮತ್ತು ತೃತೀಯ 11 ಸಾವಿರ ರೂ. ಹಾಗೂ ಜಿಲ್ಲಾ ಮಟ್ಟದಲ್ಲಿ ಪ್ರಥಮ 3 ಸಾವಿರ ರೂ. ದ್ವಿತೀಯ 2 ಸಾವಿರ ರೂ ಮತ್ತು ತೃತೀಯ 1 ಸಾವಿರ ರೂ. ಬಹುಮಾನ ನೀಡಲಾಗುವುದು.

ಪ್ರೌಢ ಶಾಲಾ ವಿಭಾಗ : 1) ಸ್ವಚ್ಛತೆಯ ಪಾಠ-ಗಾಂಧೀಜಿ ಸಂದೇಶ, 2) ಮಕ್ಕಳ ಭವಿಷ್ಯ ನಿರ್ಮಾಣದಲ್ಲಿ ಗಾಂಧೀಜಿಯವರ ಪಾತ್ರ ಹಾಗೂ 3) ಗಂಧೀಜಿಯವರ ಸ್ವಾತಂತ್ರ್ಯ ಕನಸು-ನನ್ನ ಕಲ್ಪನೆ ಬಗೆ, ಪ್ರೌಢಶಾಲಾ ವಿಭಾಗದ ವಿದ್ಯಾರ್ಥಿಗಳು ಈ ಮೂರು ವಿಷಯಗಳಲ್ಲಿ ಯಾವುದಾದರೂ ಒಂದು ವಿಷಯ ಕುರಿತು ಸುಮಾರು 700 ರಿಂದ 800 ಪದಗಳಿಗೆ ಮೀರದಂತೆ ಪ್ರಬಂಧ ಬರೆಯಬೇಕು.

ಪದವಿ ಪೂರ್ವ ಶಿಕ್ಷಣ ವಿಭಾಗ : 1) ಅಸ್ಪೃಶ್ಯತೆ ನಿವಾರಣೆಯಲ್ಲಿ ಗಾಂಧೀಜಿ ಹೋರಾಟ, 2) ಇಂದಿನ ಸಮಾಜದಲ್ಲಿ ಸರ್ವೋದಯ ಮತ್ತು ಅಂತ್ಯೋದಯದ ಪ್ರಾಸಂಗೀಕತೆ ಹಾಗೂ 3) ಬದಲಾವಣೆ ನನ್ನಿಂದಲೇ ಆರಂಭ-ಗಾಂಧೀಜಿಯವರ ಪಾಠ ಬಗ್ಗೆ, ಪದವಿ ಪೂರ್ವ ಶಿಕ್ಷಣ ವಿಭಾಗದ ವಿದ್ಯಾರ್ಥಿಗಳು ಈ ಮೂರು ವಿಷಯಗಳಲ್ಲಿ ಯಾವುದಾದರೂ ಒಂದು ವಿಷಯ ಕುರಿತು ಸುಮಾರು 900 ರಿಂದ 1000 ಪದಗಳಿಗೆ ಮೀರದಂತೆ ಪ್ರಬಂಧ ಬರೆಯಬೇಕು.

ಪದವಿ ಹಾಗೂ ಸ್ನಾತಕೋತ್ತರ ಪದವಿ ವಿಭಾಗ : ಗಾಂಧೀಜಿ ಕಂಡ ನ್ಯಾಯಸಮ್ಮತ ರಾಜಕೀಯ ವ್ಯವಸ್ಥೆ, 2) ಗಾಂಧೀಜಿ ಮತ್ತು ಡಾ.ಬಿ.ಆರ್.ಅಂಬೇಡ್ಕರ್-ತತ್ವಗಳ ಹೋಲಿಕೆ ಹಾಗೂ 3) ಮೌಲ್ಯಾಧಾರಿತ ನಾಯಕತ್ವ ಹಾಗೂ ನೈತಿಕ ರಾಜಕಾಣ-ಯುವಕರಿಗೆ ಗಾಂಧೀಜಿಯವರ ಪಾಠ. ಪದವಿ ಹಾಗೂ ಸ್ನಾತಕೋತ್ತರ ಪದವಿ ವಿಭಾಗದ ವಿದ್ಯಾರ್ಥಿಗಳು ಈ ಐದು ವಿಷಯಗಳಲ್ಲಿ ಯಾವುದಾದರೂ ಒಂದು ವಿಷಯ ಕುರಿತು 1,400 ರಿಂದ 1,500 ಪದಗಳಿಗೆ ಮೀರದಂತೆ ಪ್ರಬಂಧ ಬರೆಯಬೇಕು.

ನಿಬಂಧನೆಗಳು : ಪ್ರಬಂಧವು ಸಂಪೂರ್ಣವಾಗಿ ಸ್ವರಚಿತವಾಗಿರಬೇಕು. ಸ್ಪರ್ಧೆ ಏರ್ಪಡಿಸುವ ಸ್ಥಳದಲ್ಲಿಯೇ ಶುದ್ಧ ಕೈಬರಹದಲ್ಲಿ ಪ್ರಬಂಧ ಬರೆಯಬೇಕು. ಆಕರವಾಗಿ ಬಳಸಿದ ಪರಾಮರ್ಶನ / ಆಧಾರ ಗ್ರಂಥಗಳ ವಿವರಗಳನ್ನು ಪ್ರಬಂಧದ ಕೊನೆಯಲ್ಲಿ ನಮೂದಿಸಬೇಕು. ಆದರೆ, ಸ್ಪರ್ಧೆ ಏರ್ಪಡಿಸುವ ಸ್ಥಳದಲ್ಲಿ ಪರಾಮರ್ಶನ / ಆಧಾರ ಗ್ರಂಥಗಳು / ಮೊಬೈಲ್‌ಗಳ ಬಳಕೆಗೆ ಅವಕಾಶವಿರುವುದಿಲ್ಲ. ಪ್ರಬಂಧಕಾರರ ಹೆಸರು, ವಿಳಾಸ ನಮೂದಿಸಿರಬೇಕು. ಪ್ರಬಂಧವು ಈ ಮೊದಲು ಎಲ್ಲಿಯೂ ಪ್ರಕಟವಾಗಿರಬಾರದು. ಆಯ್ದ ಪ್ರಬಂಧಗಳ ಪ್ರಕಟಣೆಯ ಹಕ್ಕನ್ನು ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಹೊಂದಿರುತ್ತದೆ.

ಪ್ರೌಢಶಾಲಾ ವಿಭಾಗದ ಪ್ರಬಂಧಗಳನ್ನು ಶಾಲಾ ಶಿಕ್ಷಣ ಇಲಾಖೆ ಉಪನಿರ್ದೇಶಕರ ಕಚೇರಿಗೆ, ಪದವಿ ಪೂರ್ವ ವಿಭಾಗದ ಪ್ರಬಂಧಗಳನ್ನು ಪದವಿ ಪೂರ್ವ ಶಿಕ್ಷಣ ಇಲಾಖೆ ಉಪನಿರ್ದೇಶಕರಿಗೆ ಹಾಗೂ ಪದವಿ ಹಾಗೂ ಸ್ನಾತಕೋತ್ತರ ಪದವಿ ಭಾಗದ ಪ್ರಬಂಧಗಳನ್ನು ಹಾವೇರಿ ವಿಶ್ವವಿದ್ಯಾಲಯದ ಆಡಳಿತ ವಿಭಾಗಕ್ಕೆ ದಿನಾಂಕ 06-09-2025ರೊಳಗಾಗಿ ಸಲ್ಲಿಸಬೇಕು. ಪ್ರತಿ ವಿಭಾಗದಲ್ಲಿನ ಅತ್ಯುತ್ತಮವಾದ ಮೂರು (3) ಪ್ರಬಂಧಗಳಿಗೆ ಅಕ್ಟೋಬರ್ 02 ರಂದು ಜಿಲ್ಲಾ ಮಟ್ಟದ ಗಾಂಧೀ ಜಯಂತಿ ದಿನಾಚರಣೆ ಸಂದರ್ಭದಲ್ಲಿ ಬಹುಮಾನ ನೀಡಿ ಪ್ರಬಂಧ ರಚನೆಕಾರರಿಗೆ ಗೌರವಿಸಲಾಗುವುದು ಎಂದು ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಸಹಾಯಕ ನಿರ್ದೇಶಕಿ ಶ್ರೀಮತಿ ಭಾರತಿ ಎಚ್. ಅವರು ತಿಳಿಸಿದ್ದಾರೆ.

# ಅಶ್ವಿನಿ ನಗರ ಹಾಗೂ ಇಜಾರಿಲಕಮಾಪೂರನಲ್ಲಿ 'ನಮ್ಮ ಕ್ಲಿನಿಕ್' ಆರಂಭ



**ಹಾವೇರಿ.** : ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯಿಂದ ಪಿ.ಎಂ.-ಎಬಿಎಚ್‌ಐಎಂ ಯೋಜನೆಯಡಿಯಲ್ಲಿ ಶುಕ್ರವಾರ ಹಾವೇರಿ ನಗರದ ಶಿವಾಜಿನಗರ 1 ನೇ ಕ್ರಾಸ್ ನಮ್ಮ ಕ್ಲಿನಿಕ್‌ನ್ನು ಶಾಸಕರು ಹಾಗೂ ವಿಧಾನಸಭೆ ಉಪ ಸಭಾಧ್ಯಕ್ಷರಾದ ರುದ್ರಪ್ಪ ಲಮಾಣಿ ಅವರು ಉದ್ಘಾಟಿಸಿದರು.

ಇಜಾರಿಲಕಮಾಪೂರದಲ್ಲಿ ಶಾಸಕರು ಹಾಗೂ ವಿಧಾನಸಭೆ ಉಪ ಸಭಾಧ್ಯಕ್ಷರಾದ ರುದ್ರಪ್ಪ ಲಮಾಣಿ ಹಾಗೂ ನಗರಸಭೆ ಅಧ್ಯಕ್ಷೆ ಶ್ರೀಮತಿ ಶಶಿಕಲಾ ರಾಮು ಮಾಳಗಿ ಅವರು ಜಂಟಿಯಾಗಿ 'ನಮ್ಮ ಕ್ಲಿನಿಕ್' ಉದ್ಘಾಟಿಸಿದರು.

ನಗರಸಭೆ ಉಪಾಧ್ಯಕ್ಷ ಮಲ್ಲಿಕಾರ್ಜುನ ಸಾತೇನಹಳ್ಳಿ , ತಾಲೂಕು ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರ ಅಧ್ಯಕ್ಷ ಎಮ್.ಎಮ್. ಮೈದೂರ, ನಗರಸಭೆ ಸದಸ್ಯರಾದ ಶ್ರೀಮತಿ ಚೆನ್ನಮ್ಮ ಬ್ಯಾಡಗಿ, ಪೂಜಾ ಹಿರೇಮಠ, ವಿನಯ ಪಾಲನಕರ, ಪ್ರಭಾರ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ. ಎಮ್. ಜಯಾನಂದ, ತಾಲೂಕಾ ಆರೋಗ್ಯಾಧಿಕಾರಿ, ಡಾ.ಪ್ರಭಾಕರ ಎಸ್. ಕುಂದೂರ, ಮೆಡಿಕಲ್ ಕಾಲೇಜು ಆಡಳಿತ ಪರಿಷತ್ ಸದಸ್ಯ ಎಸ್.ಎಫ್ ಸುತಾರ, ಕಾರ್ಯಕ್ರಮ ವ್ಯವಸ್ಥಾಪಕ ರವಿ ಜೆ.ಬಿ, ಪ್ರಭಾರ ಆರೋಗ್ಯ ಶಿಕ್ಷಣಾಧಿಕಾರಿ ಕೃಷ್ಣಪ್ಪ ಕನ್ನಮ್ಮನವರ, ಆರೋಗ್ಯ ನಿರೀಕ್ಷಣಾಧಿಕಾರಿ ಮಾಲತೇಶ ಪುಟ್ಟನಗೌಡರ, ರವಿ ಪುತ್ರಣ್ಣ, ಆರೋಗ್ಯ ಇಲಾಖೆಯ ಸಿಬ್ಬಂದಿಗಳು ಹಾಗೂ ಇತರರು ಉಪಸ್ಥಿತರಿದ್ದರು.

# ಹೆಚ್.ಐ.ವಿ. ಏಡ್ಸ್: ಬೈಕ್ ರ್‍ಯಾಲಿ ಮೂಲಕ ಜಾಗೃತಿ



**ಕೊಪ್ಪಳ** : ಹೆಚ್.ಐ.ವಿ. ಏಡ್ಸ್ ಕುರಿತು ಬೈಕ್ ರ್‍ಯಾಲಿ ಮೂಲಕ ಕೊಪ್ಪಳದಲ್ಲಿ ಶನಿವಾರದಂದು ಸಾರ್ವಜನಿಕರಿಗೆ ಜಾಗೃತಿ ಮೂಡಿಸಲಾಯಿತು.

ಜಿಲ್ಲಾ ಮಟ್ಟದ ತೀವ್ರಗೊಂಡ ಐಇಸಿ ಅಭಿಯಾನ (ಖಟಣಜಟುಜಿಜಜ ಖಇಅ ಅಚಿಟಠಿಚಿರಟಿ) ಅಂಗವಾಗಿ "ಬೈಕ್ ರ್‍ಯಾಲಿ" ಕಾರ್ಯಕಮವನ್ನು ಕರ್ನಾಟಕ ರಾಜ್ಯ ಏಡ್ಸ್ ನಿಯಂತ್ರಣ ಸೊಸೈಟಿ, ಬೆಂಗಳೂರು, ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಏಡ್ಸ್ ತಡೆಗಟ್ಟುವಿಕೆ ಮತ್ತು ನಿಯಂತ್ರಣ ಘಟಕ, ಕೊಪ್ಪಳ ಇವರ ಸಹಯೋಗದಲ್ಲಿ ಹಮ್ಮಿಕೊಳ್ಳಲಾಗಿತ್ತು. ಈ ಬೈಕ್ ರ್‍ಯಾಲಿಗೆ ಜಿಲ್ಲಾ ಏಡ್ಸ್ ನಿಯಂತ್ರಣಾಧಿಕಾರಿ ಡಾ. ಎ. ಶಶಿಧರ ಅವರು ಜಿಲ್ಲಾಡಳಿತ ಭವನದ ಆಚರಣದಲ್ಲಿ ಚಾಲನೆ ನೀಡಿದರು.

ಈ ಸಂದರ್ಭದಲ್ಲಿ ಕೊಪ್ಪಳ ಕೆ. ಎಸ್. ಆಸ್ಪತ್ರೆಯ ನಿರ್ವಾಹಕ ಪ್ರದೀಪ್ ಸೋಮಲಾಪುರ, ಸನಾತನ ಹಿಂದೂ ಮಹಾಮಂಡಳಿ ಕೊಪ್ಪಳದ ಗೌರವ ಅಧ್ಯಕ್ಷರಾದ ಶೇಖರಪ್ಪ ಮುತ್ತೇನವರ್ ಸೇರಿದಂತೆ ವಿವಿಧ ಸಂಸ್ಥೆಯವರು ಹಾಗೂ ಆರೋಗ್ಯ ಇಲಾಖೆ ಸಿಬ್ಬಂದಿ ಉಪಸ್ಥಿತರಿದ್ದರು.

ಬೈಕ್ ರ್‍ಯಾಲಿಯು ಜಿಲ್ಲಾಧಿಕಾರಿಗಳ ಕಾರ್ಯಾಲಯದಿಂದ ಪ್ರಾರಂಭಗೊಂಡು ಗಂಜ್ ಸರ್ಕಲ್, ಅಶೋಕ ಸರ್ಕಲ್, ಬಸ್‌ಸ್ಟ್ಯಾಂಡ್ ಮಾರ್ಗವಾಗಿ ಲೇಬರ್ ಸರ್ಕಲ್ ಮುಖಾಂತರ ಗಡಿಯಾರ ಕಂಬ, ಶ್ರೀ ಗವಿಸಿದ್ದೇಶ್ವರ ಪದವಿ ಮಹಾವಿದ್ಯಾಲಯದಿಂದ ಪುನಃ ಜಿಲ್ಲಾಧಿಕಾರಿಗಳ ಕಾರ್ಯಾಲಯದವರೆಗೆ ನಡೆಯಿತು.

ಈ ಬೈಕ್ ರ್‍ಯಾಲಿಯಲ್ಲಿ 120 ಕ್ಕೂ ಹೆಚ್ಚು ಬೈಕ್ ಸವಾರರು ಬೈಕ್‌ಗಳೊಂದಿಗೆ ಹಾಜರಾಗಿದ್ದರು. ಡ್ಯಾಪ್ಕ್ಯೂ, ಐಸಿಟಿಸಿ, ಎ.ಆರ್.ಟಿ., ಡಿ.ಎಸ್.ಆರ್.ಸಿ. ಎನ್.ಟಿ.ಇ.ಪಿ. ಸಿಬ್ಬಂದಿಗಳು, ಕೊಪ್ಪಳದ ಸ್ನೇಹಾ ಮಹಿಳಾ ಸಂಘ (ಎಫ್.ಎಸ್. ಡಬ್ಲ್ಯೂ ಮತ್ತು ಎಂ.ಎಸ್.ಎಂ.ಟಿಐ), ಚೈತನ್ಯ ನಗರ ಮತ್ತು ಗ್ರಾಮೀಣಾಭಿವೃದ್ಧಿ ಸಂಸ್ಥೆ, ಸಂರಕ್ಷ ಸಂಸ್ಥೆ, ಇನ್ವಾಲ್ವ್ ಲರ್ನಿಂಗ್ ಸಲ್ಯೂಷನ್ ಫೌಂಡೇಷನ್ ಮತ್ತು ಸನಾತನ ಹಿಂದೂ ಮಹಾಮಂಡಳಿಯ ಯುವಕರು, ವಿವಿಧ ಇಲಾಖೆಯ ಸಿಬ್ಬಂದಿಗಳು ಹಾಗೂ ಸಾರ್ವಜನಿಕರು ಭಾಗವಹಿಸಿದ್ದರು.

****

## ಶಿಷ್ಯವೇತನಕ್ಕೆ ಅರ್ಜಿ ಸಲ್ಲಿಸುವಾಗ ಮಾರ್ಗಸೂಚನೆ ಪಾಲನೆಗೆ ಸಲಹೆ

ಹಾವೇರಿ. : ಹಾನಗಲ್ ತಾಲೂಕಿನಲ್ಲಿ ವ್ಯಾಸಂಗಮಾಡುತ್ತಿರುವ ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ಪಂಗಡದ ವಿದ್ಯಾರ್ಥಿಗಳು ಶಿಷ್ಯವೇತನಕ್ಕೆ ಅರ್ಜಿ ಸಲ್ಲಿಸುವಾಗ ಅಗತ್ಯ ಮಾರ್ಗಸೂಚಿಗಳನ್ನು ಪಾಲನೆ ಮಾಡಬೇಕು ಎಂದು ಹಾನಗಲ್ ಸಮಾಜ ಕಲ್ಯಾಣ ಇಲಾಖೆ ಸಹಾಯಕ ನಿರ್ದೇಶಕರು ತಿಳಿಸಿದ್ದಾರೆ.

ಪರಿಶಿಷ್ಟ ಜಾತಿಯ 9 ಮತ್ತು 10ನೇ ತರಗತಿಯ ವಿದ್ಯಾರ್ಥಿಗಳು ಹಾಗೂ ಮೆಟ್ರಿಕ್ ನಂತರದ ಎಲ್ಲ ವಿದ್ಯಾರ್ಥಿಗಳು ಶಿಷ್ಯವೇತನಕ್ಕೆ ಎಸ್‌ಎಸ್‌ಪಿನಲ್ಲಿ ಅರ್ಜಿ ಸಲ್ಲಿಸಲು ಕಡ್ಡಾಯವಾಗಿ ಬಯೋಮೆಟ್ರಿಕ್ ನೀಡಬೇಕಾಗಿದೆ. ಹಾಗಾಗಿ ಎಸ್‌ಎಸ್‌ಪಿ ಐಡಿ ಹಾಗೂ ಆಧಾರ್ ಕಾರ್ಡ್‌ನೊಂದಿಗೆ ತಮ್ಮ ಹತ್ತಿರದ ಗ್ರಾಮ ಒನ್ ಅಥವಾ ಹಾನಗಲ್ ಸಮಾಜ ಕಲ್ಯಾಣ ಇಲಾಖೆ ಕಚೇರಿಗೆ ಕೆಲಸದ ಸಮಯದಲ್ಲಿ ಆಗಮಿಸಿ ಬಯೋಮೆಟ್ರಿಕ್ ನೀಡಬೇಕು ಎಂದು ತಿಳಿಸಿದ್ದಾರೆ.

ವಿದ್ಯಾರ್ಥಿಗಳು ಶಿಷ್ಯವೇತನಕ್ಕೆ ಅರ್ಜಿ ಸಲ್ಲಿಸುವ ಪೂರ್ವದಲ್ಲಿ ತಾವು ಬ್ಯಾಂಕ್ ಖಾತೆ ಹೊಂದಿರುವ ಬ್ಯಾಂಕ್ ಶಾಖೆಗೆ ತೆರಳಿ ಕಡ್ಡಾಯವಾಗಿ ಆದ-ಾರ್ ಶೀಡಿಂಗ್ ಮಾಡಿಸುವುದು ಅವಶ್ಯವಾಗಿದೆ. ಆಧಾರ್ ಶೀಡಿಂಗ್ ಮಾಡಿಸಿದಲ್ಲಿ ಮಾತ್ರ ಶಿಷ್ಯವೇತನ ವಿದ್ಯಾರ್ಥಿ ಖಾತೆಗೆ ಜಮೆಯಾಗುತ್ತದೆ.

ಪರಿಶಿಷ್ಟ ಪಂಗಡದ 9 ರಿಂದ 10ನೇ ತರಗತಿಯ ವಿದ್ಯಾರ್ಥಿಗಳು ಹಾಗೂ ಮೆಟ್ರಿಕ್ ನಂತರದ ವಿದ್ಯಾರ್ಥಿಗಳು ಎನ್.ಎಸ್.ಪಿ.ಓ.ಟಿ.ಆರ್ ಸೃಜನೆ ಮಾಡದಿದ್ದರೆ ಶಿಷ್ಯವೇತನಕ್ಕೆ ಅರ್ಜಿ ಸಲ್ಲಿಸಲು ಬರುವುದಿಲ್ಲ. ಹಾಗಾಗಿ ಎನ್.ಎಸ್.ಪಿ.ಓ.ಟಿ.ಆರ್ ಸೃಜನೆ ಮಾಡಿ ಶಿಷ್ಯವೇತನಕ್ಕೆ ಅರ್ಜಿ ಸಲ್ಲಿಸಬೇಕು. ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ಪಂಗಡದ 1 ರಿಂದ 8ನೇ ತರಗತಿಯ ವಿದ್ಯಾರ್ಥಿಗಳು ಎಸ್‌ಎಸ್‌ಪಿಯಲ್ಲಿ ಅರ್ಜಿ ಸಲ್ಲಿಸಬೇಕು ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಕರ್ನಾಟಕ ಮಹರ್ಷಿ ವಾಲ್ಮೀಕಿ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮ: ವಿವಿಧ ಯೋಜನೆಗಳಿಗೆ ಅರ್ಜಿ ಆಹ್ವಾನ

ಬೆಳಗಾವಿ, : ಕರ್ನಾಟಕ ಮಹರ್ಷಿ ವಾಲ್ಮೀಕಿ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮ, ಬೆಳಗಾವಿ ಜಿಲ್ಲೆ ವತಿಯಿಂದ 2025-26ನೇ ಸಾಲಿಗೆ ಸಹಾಯಧನ ಮತ್ತು ಸಾಲ ಸೌಲಭ್ಯ ಒದಗಿಸಲು ಪರಿಶಿಷ್ಟ ಪಂಗಡ ಸಾಮಾನ್ಯ ನಿರುದ್ಯೋಗಿ ಯುವಕ/ಯುವತಿಯರಿಗಾಗಿ ಅರ್ಹ ಫಲಾಪೇಕ್ಷಿಗಳಿಂದ ಅರ್ಜಿ ಅಹ್ವಾನಿಸಲಾಗಿದೆ. ಸೇವಾ ಸಿಂಧು ಪೋರ್ಟಲ ವಿಳಾಸ **https://sevasindhu.karnataka.gov.in** ನಲ್ಲಿ ಗ್ರಾಮ ಓನ್, ಬೆಳಗಾವಿ ಒನ್, ಅಥವಾ ಕರ್ನಾಟಕಾ ಒನ್ ಕೇಂದ್ರಗಳಲ್ಲಿ ಮಾತ್ರ ಆನ್‌ಲೈನ್ ಮೂಲಕ 17 ಸೆಪ್ಟೆಂಬರ್ 2025ರ ಒಳಗಾಗಿ ಅರ್ಜಿ ಸಲ್ಲಿಸಬಹುದಾಗಿದೆ. ಸ್ವಯಂ ಉದ್ಯೋಗ ನೇರ ಸಾಲ ಯೋಜನೆ, ಉದ್ಯಮ ಶೀಲತಾ ಅಭಿವೃದ್ಧಿ ಹೈನುಗಾರಿಕೆ ಯೋಜನೆ, ಉದ್ಯಮ ಶೀಲತಾ ಅಭಿವೃದ್ಧಿ ಯೋಜನೆ ಇತರ ಉದ್ದೇಶಕ್ಕಾಗಿ, ಉದ್ಯಮ ಶೀಲತಾ ಅಭಿವೃದ್ಧಿ ಸ್ವಾವಲಂಬಿ ಸಾರಥಿ ಯೋಜನೆ, ಮೈಕ್ರೋ ಕ್ರೆಡಿಟ್ (ಪ್ರೇರಣಾ) ಯೋಜನೆ, ಗಂಗಾ ಕಲ್ಯಾಣ ಯೋಜನೆ, ಭೂ ಒಡೆತನ ಯೋಜನೆ (ಭೂ ರಹಿತ ಕೃಷಿ ಕಾರ್ಮಿಕ ಮಹಿಳೆಯರಿಗೆ) ಗಳಿಗೆ ಸಹಾಯಧನ ಮತ್ತು ಸಾಲ ಸೌಲಭ್ಯ ಪಡೆಯಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ ಕಲ್ಯಾಣ ಮಿತ್ರ ಸಹಾಯವಾಣಿ ಸಂಖ್ಯೆ: 9482300400 ಹಾಗೂ ನಿಗಮದ ವೆಬ್‌ಸೈಟ್/ ಜಿಲ್ಲಾ ವ್ಯವಸ್ಥಾಪಕರ ಕಛೇರಿಗೆ ಭೇಟಿ ನೀಡಬಹುದಾಗಿದೆ ಎಂದು ಜಿಲ್ಲಾ ವ್ಯವಸ್ಥಾಪಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಫಲಪುಷ್ಪ ಪ್ರದರ್ಶನ: ಅವಳಿನಗರದಲ್ಲಿ ಉದ್ಯಾನವನ ಸ್ಪರ್ಧೆಗೆ ಅರ್ಜಿ ಆಹ್ವಾನ

**ಧಾರವಾಡ** : ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಮಹಾನಗರ ಪಾಲಿಕೆ, ಕೃಷಿ ಇಲಾಖೆ ಮತ್ತು ಫಲಪುಷ್ಪ ಪ್ರದರ್ಶನ ಸಮಿತಿ ಹಾಗೂ ಸ್ಥಳೀಯ ಸಂಘ ಸಂಸ್ಥೆಗಳ ಸಹಯೋಗದೊಂದಿಗೆ 2025-26 ನೇ ಸಾಲಿನ ಫಲಪುಷ್ಪ ಪ್ರದರ್ಶನ ಅಂಗವಾಗಿ ಅವಳಿ ನಗರಗಳಲ್ಲಿ ಅಕ್ಟೋಬರ್ 3, 2025 ರಿಂದ ಅಕ್ಟೋಬರ್ 06, 2025 ರವರೆಗೆ ಸರ್ಕಾರಿ ಸಂಸ್ಥೆ, ಅರೆ ಸರ್ಕಾರಿ ಸಂಸ್ಥೆ, ಖಾಸಗಿ ಸಂಸ್ಥೆ ಹಾಗೂ ಖಾಸಗಿ ಮನೆ ಉದ್ಯಾನವನಗಳ ಸ್ಪರ್ಧೆಯನ್ನು ಆಯೋಜಿಸಲಾಗಿದೆ.

ಆಸಕ್ತರು ತೋಟಗಾರಿಕೆ ಇಲಾಖೆಯಿಂದ ಅರ್ಜಿ ಪಡೆದು, ಸೆಪ್ಟೆಂಬರ್ 15, 2025 ರೊಳಗಾಗಿ ಹೆಸರನ್ನು ನೊಂದಾಯಿಸಿಕೊಳ್ಳಬಹುದಾಗಿದೆ.

ಉದ್ಯಾನವನ ಸ್ಪರ್ಧೆ ವಿವರ: ಸಾರ್ವಜನಿಕ ಸಂಸ್ಥೆ, ಸರ್ಕಾರಿ ಸಂಸ್ಥೆ, ಖಾಸಗಿ ಸಂಸ್ಥೆ ಮತ್ತು ಕಾರ್ಖಾನೆ ಚಿಕ್ಕ ಉದ್ಯಾನವನ ಅರ್ಧ ಎಕರೆ ವರೆಗೆ, ಮಧ್ಯಮ ಉದ್ಯಾನವನ ಅರ್ಧ ರಿಂದ ಒಂದು ಎಕರೆವರೆಗೆ, ದೊಡ್ಡ ಉದ್ಯಾನವನ ಒಂದು ಎಕರೆಗಿಂತ ಹೆಚ್ಚು ಇದ್ದವರು, ಇದಲ್ಲದೆ ಸರ್ಕಾರಿ ಬಂಗಲೆ, ಖಾಸಗಿ ಸಂಸ್ಥೆ ಬಂಗಲೆ, ಖಾಸಗಿ ಮನೆ, ಉದ್ಯಾನವನಗಳು ಹಾಗೂ ಇನ್ನಿತರೆ ಮನೆಯ ಅಂಗಳ ತೋಟಗಳ ಸ್ಪರ್ಧೆಯನ್ನು ಕೂಡಾ ಏರ್ಪಡಿಸಲಾಗಿದೆ.

ಹೆಚ್ಚಿನ ಮಾಹಿತಿಗಾಗಿ ಇಲಾಖೆಯ ದೂರವಾಣಿ ಸಂಖ್ಯೆ: 0836-2957801 ಗೆ ಸಂಪರ್ಕಿಸಬಹುದು ಎಂದು ತೋಟಗಾರಿಕೆ ಉಪ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಉನ್ನತೀಕರಿಸಿದ ಪ್ರೌಢ ಶಾಲೆ ಮಂಜೂರು: ಸಚಿವೆ ಲಕ್ಷ್ಮೀ ಹೆಬ್ಬಾಳಕರ್ ಗೆ ಸನ್ಮಾನ



**ಬೆಳಗಾವಿ** : ಪ್ರಾಥಮಿಕ ಶಾಲೆಯ ಶತಮಾನೋತ್ಸವದ ಸವಿನೆನಪಿಗಾಗಿ ಬೆಳಗಾವಿ ತಾಲೂಕಿನ ಕುಕಡೊಳ್ಳಿ ಗ್ರಾಮಕ್ಕೆ ಉನ್ನತೀಕರಿಸಿದ ಸರ್ಕಾರಿ ಪ್ರೌಢಶಾಲೆಯನ್ನು ಮಂಜೂರಿ ಮಾಡಿಸಿರುವ ಪ್ರಯುಕ್ತ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆಯ ಸಚಿವೆ ಲಕ್ಷ್ಮಿ ಹೆಬ್ಬಾಳ್ಕರ್ ಅವರನ್ನು ಶಾಲಾಭಿವೃದ್ದಿ ಸಮಿತಿ ವತಿಯಿಂದ ಸನ್ಮಾನಿಸಲಾಯಿತು.

ಶನಿವಾರ ಸಚಿವರ ನಿವಾಸಕ್ಕೆ ಆಗಮಿಸಿದ ಸಮಿತಿಯ ಸದಸ್ಯರು ಸಚಿವರನ್ನು ಹಾಗೂ ವಿಧಾನಪರಿಷತ್ ಸದಸ್ಯ ಚನ್ನರಾಜ ಹಟ್ಟಿಹೊಳಿಯರನ್ನು ಸನ್ಮಾನಿಸಿದರು.

ಎಸ್‌ಡಿಎಂಸಿ ಅಧ್ಯಕ್ಷರಾದ ಮಂಜುನಾಥ ಹುಬ್ಬಳ್ಳಿ ಅವರ ನೇತೃತ್ವದಲ್ಲಿ ಗ್ರಾಮದ ಹಿರಿಯರಾದ ವೀರನಗೌಡ ಪಾಟೀಲ್, ಫಕೀರಪ್ಪ ಕುರುಬರ, ಸಿದ್ದಪ್ಪ ಅಡಿಮನಿ, ರಮೇಶ್ ಮರಕಟ್ಟಿ, ಸಿದ್ದರಾಮ ಲಕಮೋಜಿ, ಪುಂಡ್ಲಿಕ್ ಬೈರೋಜಿ, ಕಲ್ಮೇಶ್ ವಡ್ಡಿನ ಮುಂತಾದವರು ಗ್ರಾಮಸ್ಥರ ಪರವಾಗಿ ಸನ್ಮಾನಿಸಿದರು. ಇದೇ ಸಂದರ್ಭದಲ್ಲಿ ಶಾಲೆಯ ಪ್ರಭಾರಿ ಪ್ರಧಾನ ಗುರುಗಳಾದ ನಾಗಪ್ಪ ಕರವಿನಕೊಪ್ಪ, ಶಿಕ್ಷಕರಾದ ಆರ್ ಬಿ ಕೊಡ್ಲಿ, ಎಸ್ ಆರ್ ಅಂಬಗಿ ಉಪಸ್ಥಿತರಿದ್ದರು.

# ಸಾಂಸ್ಕೃತಿಕ ಶ್ರೀಮಂತಿಕೆ ಹೆಚ್ಚಿಸುವ ಜವಾಬ್ದಾರಿ ರಾಷ್ಟ್ರೀಯ ಟ್ರಸ್ಟಗಳ ಮೇಲಿದೆ

## ಧಾರವಾಡ ಶಿಕ್ಷಣದೊಂದಿಗೆ ಸಂಗೀತ, ಸಾಹಿತ್ಯದ ಕಾಶಿ ಆಗಬೇಕು: ಜಿಲ್ಲಾಧಿಕಾರಿ ದಿವ್ಯ ಪ್ರಭು



**ಧಾರವಾಡ** : ಧಾರವಾಡ ಜಿಲ್ಲೆಯು ಸಂಗೀತ, ಸಾಹಿತ್ಯ, ಚಿತ್ರಕಲೆ ಮತ್ತು ನಾಟಕ, ವೃತ್ತಿ ರಂಗಭೂಮಿ ಕ್ಷೇತ್ರದ ಕಾರ್ಯಕ್ರಮಗಳನ್ನು ಎಲ್ಲ ಟ್ರಸ್ಟ್ ಗಳ ಸಮನ್ವದಿಂದ ಸಂಘಟಿಸುವ ಮೂಲಕ ಜಿಲ್ಲೆಯ ಸಾಂಸ್ಕೃತಿಕ ಶ್ರೀಮಂತಿಕೆಯನ್ನು ಹೆಚ್ಚಿಸುವ ಮಹತ್ವದ ಜವಾಬ್ದಾರಿ ಎಲ್ಲ ರಾಷ್ಟ್ರೀಯ ಟ್ರಸ್ಟ್ ಗಳದ್ದಾಗಿದೆ. ಧಾರವಾಡ ಶಿಕ್ಷಣದೊಂದಿಗೆ ಸಂಗೀತ, ಸಾಹಿತ್ಯದ ಕಾಶಿ ಆಗಬೇಕು ಎಂದು ಜಿಲ್ಲಾಧಿಕಾರಿ ದಿವ್ಯ ಪ್ರಭು ಅವರು ಹೇಳಿದರು.

ಅವರು ಇಂದು (ಆ.29) ಮಧ್ಯಾಹ್ನ ಜಿಲ್ಲಾಧಿಕಾರಿಗಳ ಕಚೇರಿ ನೂತನ ಸಭಾಂಗಣದಲ್ಲಿ ಧಾರವಾಡ ಜಿಲ್ಲೆಯ ರಾಷ್ಟ್ರೀಯ ಸ್ಮಾರಕ ಟ್ರಸ್ಟಗಳಿಗೆ ಸರಕಾರದಿಂದ ನೂತನವಾಗಿ ನೇಮಕವಾಗಿರುವ ಅಧ್ಯಕ್ಷ, ಸದಸ್ಯರಿಗೆ ಜಿಲ್ಲಾಡಳಿತದ ಪರವಾಗಿ ಸತ್ಕರಿಸಿ, ಅಭಿನಂದಿಸಿ ಮಾತನಾಡಿದರು.

ರಾಜ್ಯದ ಇತರ ಜಿಲ್ಲೆಗಳಿಗೆ, ಬೇರೆ ರಾಜ್ಯಗಳಿಗೆ ಹೊಲಿಸಿದರೆ ಧಾರವಾಡ ಜಿಲ್ಲೆ ನಿಜ ಅಥ-ರ್ದಲ್ಲಿ ಇದು ಸಾಂಸ್ಕೃತಿಕ ನಗರಿ ಆಗಿದೆ. ಇಲ್ಲಿ ರಾಷ್ಟ್ರಮಟ್ಟದ ಕೀರ್ತಿಗಳಿಸಿರುವ ಸಂಗೀತ, ಸಾಹಿತ್ಯ, ಚಿತ್ರಕಲೆ, ನಾಟಕ, ವೃತ್ತಿರಂಗಭೂಮಿ ಸಾಧಕರಿದ್ದಾರೆ. ಅವರ ಸಾಧನೆಯ ಸ್ಮರಣೆಗಾಗಿ ಮತ್ತು ಅವರ ಪರಂಪರೆಯನ್ನು ಮುಂದುವರಿಸಲು ರಾಜ್ಯ ಸರಕಾರವು ಅನೇಕ ವರ್ಷಗಳ ಹಿಂದೆ ರಾಷ್ಟ್ರಮಟ್ಟದ ಸ್ಮಾರಕ ಟ್ರಸ್ಟಗಳನ್ನು ರಚಿಸಿ, ಕಾರ್ಯೋನ್ಮುಕವಾಗಿದೆ ಎಂದು ಅವರು ಹೇಳಿದರು.

ಸಂಗೀತ, ಸಾಹಿತ್ಯದ ಪರಂಪರೆಯನ್ನು ಯುವ ಪಿಳಿಗೆಗೆ ಮುಂದುವರಿಸಲು ಟ್ರಸ್ಟಗಳು ವಿಭಿನ್ನ ಕಾರ್ಯಕ್ರಮಗಳನ್ನು ಆಯೋಜಿಸುವ ಮೂಲಕ ಪ್ರೋತ್ಸಾಹಿಸಬೇಕು. ಎಲ್ಲ ಟ್ರಸ್ಟಗಳು ಒಂದೇ ವೇದಿಕೆಯಡಿ ಕೂಡಿ, ವಿಶೇಷವಾದ ಕಾರ್ಯಕ್ರಮಗಳನ್ನು ರೂಪಿಸಬೇಕು. ಜಿಲ್ಲಾಡಳಿತ ಅಗತ್ಯ ನೆರವು ಸಹಕಾರ ನೀಡಲಿದೆ ಎಂದು ಜಿಲ್ಲಾಧಿಕಾರಿಗಳು ತಿಳಿಸಿದರು.

ಜನರಿಗೆ ಮಾನಸಿಕ ನೆಮ್ಮದಿ ನೀಡುವ ಸಂಸ್ಕೃತಿ ಬೆಳೆಸುವ ಕಾರ್ಯವಾಗಬೇಕು. ಈಗಾಗಲೇ ವಿವಿಧ ಟ್ರಸ್ಟಗಳ ಅಗತ್ಯತೆಯ ಮಾಹಿತಿ ಪಡೆಯಲಾಗಿದೆ. ಶೀಘ್ರದಲ್ಲಿ ಕಲಾಭವನ ಸಾರ್ವಜನಿಕ ಬಳಕೆ ಮುಕ್ತಗೊಳಿಸಲು ಕ್ರಮವಹಿಸಲಾಗುತ್ತದೆ. ಕಲಾಭವನ ಆವರಣದಲ್ಲಿ ನಿಲ್ಲುತ್ತಿದ್ದ ತಾಜ್ಯ ಸಂಗ್ರಹ ವಾಹನಗಳನ್ನು ಬೇರೆಡೆ ಸ್ಥಳಾಂತರಿಸಲಾಗಿದೆ ಎಂದು ಅವರು ತಿಳಿಸಿದರು.

ಕಾರ್ಯಕ್ರಮದಲ್ಲಿ ಜಿಲ್ಲಾಧಿಕಾರಿ ದಿವ್ಯಪ್ರಭು, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಗುಂಜನ ಆರ್ಯ ಅವರು ಡಾ. ದ.ರಾ. ಬೇಂದ್ರೆ ರಾಷ್ಟ್ರೀಯ ಸ್ಮಾರಕ ಟ್ರಸ್ಟ ಅಧ್ಯಕ್ಷ ಡಾ. ಸರಜೂ ಕಾಟ್ಕರ್, ಡಾ. ಎಂ.ಎಂ. ಕಲಬುರ್ಗಿ ರಾಷ್ಟ್ರೀಯ ಪ್ರತಿಷ್ಠಾನದ ಅಧ್ಯಕ್ಷ ಡಾ. ವೀರಣ್ಣ ರಾಜೂರ, ಡಾ. ಬಸವರಾಜ ರಾಜಗುರು ರಾಷ್ಟ್ರೀಯ ಟ್ರಸ್ಟನ್ ಅಧ್ಯಕ್ಷ ಪಂಡಿತ ಕೈವಲ್ಯಕುಮಾರ ಗುರವ, ಡಿ.ವ್ಹಿ. ಹಾಲಭಾವಿ ಸ್ಮಾರಕ ಟ್ರಸ್ಟ್ ಅಧ್ಯಕ್ಷ ಬಿ.ಮಾರುತಿ, ರಂಗಾಯಣ ದ ನಿರ್ದೇಶಕ ರಾಜು ತಾಳಿಕೋಟಿ ಹಾಗೂ ವಿವಿಧ ರಾಷ್ಟ್ರೀಯ ಟ್ರಸ್ಟಗಳ ಸಂಸ್ಥಾಪಕ ಅಧ್ಯಕ್ಷರಾದ ಚಂದ್ರಕಾಂತ ಬೆಲ್ಲದ ಅವರನ್ನು ಸತ್ಕರಿಸಿ, ಅಭಿನಂದಿಸಿದರು.


ಅಭಿನಂದನೆ ಸ್ವಿಕರಿಸಿದ ಟ್ರಸ್ಟಗಳ ಅಧ್ಯಕ್ಷರು ಹಾಗೂ ಸದಸ್ಯರಾದ ಹನುಮಾಕ್ಷಿ ಗೋಗಿ, ಡಾ. ಶರಣಮ್ಮ ಗೊರೆಬಾಳ, ನಿಜಗುಣಿ ರಾಜಗುರು ಅವರು ಮಾತನಾಡಿದರು. ಕನ್ನಡ ಮತ್ತು ಸಂಸ್ಕೃತಿ ಇಲಾಖೆಯಯ ಸಹಾಯಕ ನಿರ್ದೇಶಕ ಕುಮಾರ ಬೆಕ್ಕೇರಿ ಅವರು ಸ್ವಾಗತಿಸಿ, ಪ್ರಾಸ್ತಾವಿಕವಾಗಿ ಮಾತನಾಡಿದರು. ವಾರ್ತಾ ಇಲಾಖೆಯ ಸಹಾಯಕ ನಿರ್ದೇಶಕ ಡಾ. ಸುರೇಶ ಹಿರೇಮಠ ವಂದಿಸಿದರು. ಆರತಿ ದೇವಶಿಖಾಮಣಿ ಕಾರ್ಯಕ್ರಮ ನಿರೂಪಿಸಿದರು.

ಅಭಿನಂದನಾ ಕಾರ್ಯಕ್ರಮದಲ್ಲಿ ವಿವಿಧ ಟ್ರಸ್ಟಗಳ ಸದಸ್ಯರು, ಸಂಗೀತಾಸಕ್ತರು, ಸಾಹಿತ್ಯಾಭಿಮಾನಿಗಳು ಇತರರು ಭಾಗವಹಿಸಿದ್ದರು.



**ತಾಳಿಕೋಟೆ : ಪಟ್ಟಣದ ರಾಜವಾಡೆಯ ಶ್ರೀ ಗ್ರಾಮದೇವತೆ ಗಜಾನನ ಮಂಡಳಿಯ ವತಿಯಿಂದ ಪ್ರತಿಷ್ಠಾಪಿಸಲಾದ ಗಣೇಶ ಮೂರ್ತಿಯ ಸ್ಥಳಕ್ಕೆ ಬೆಟ್ಟಿ ನೀಡಿದ ಪಿಎಸ್‌ಐ ಶ್ರೀಮತಿ ಜ್ಯೋತಿ ಖೋತ್ ಅವರಿಗೆ ಸನ್ಮಾನಿಸಿ ಗೌರವಿಸಲಾಯಿತು.**

# ಯುವ ಸಮುದಾಯವು ದುಶ್ಚಟಗಳಿಗೆ ಬಲಿಯಾಗಿ ತಮ್ಮ ಜೀವನ ಹಾಳು ಮಾಡಿಕೊಳ್ಳುತ್ತಿದ್ದಾರೆ : ಶಿವಾಜಿ ನಾಯಕ



**ಜಮಖಂಡಿ** : ಇತ್ತೀಚಿನ ದಿನಗಳಲ್ಲಿ ಯುವ ಸಮುದಾಯವು ದುಶ್ಚಟಗಳಿಗೆ ಬಲಿಯಾಗಿ ತಮ್ಮ ಜೀವನವನ್ನು ಹಾಳು ಮಾಡಿಕೊಳ್ಳುತ್ತಿದ್ದಾರೆ ಎಂದು ಅ.ದಾ. ಯೋ. ಸಹಾಯಕ ನಿರ್ದೇಶಕರಾದ ಶಿವಾಜಿ ನಾಯಕ ಹೇಳಿದರು.

ತಾಲೂಕಿನ ಶ್ರೀ ಕ್ಷೇತ್ರ ಕಡಪಟ್ಟಿಯ ಜೋಡು ಬಸವೇಶ್ವರ ಜಾತ್ರಾ ಮಹೋತ್ಸವದ ನಿಮಿತ್ಯ ಹಮ್ಮಿಕೊಂಡಿದ್ದ ಪ್ರತಿಭಾ ಪುರಸ್ಕಾರ ಹಾಗೂ ಸಾಮಾಜಿಕ ನಾಟಕದ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಹೆಚ್ಚಿನ ಯುವಕರು ಮಾದಕ ವಸ್ತುಗಳಿಗೆ ವ್ಯಸನಿಗಳಾಗುತ್ತಿದ್ದಾರೆ. ಇದಕ್ಕೆ ಹೆಚ್ಚಾಗಿ ಯುವ ಸಮುದಾಯ ಬಲಿಯಾಗುತ್ತಿರುವುದು ಕಳವಳಕಾರಿ ವಿಷಯವಾಗಿದೆ. ಇದರಿಂದ ತಮ್ಮ ಭವಿಷ್ಯವನ್ನು ಹಾಳು ಮಾಡಿಕೊಳ್ಳುತ್ತಿದ್ದಾರೆ. ತಂದೆ ತಾಯಿಗಳು ನಿಮ್ಮ ಮೇಲೆ ಇಟ್ಟಿರುವ ನಿರೀಕ್ಷೆಗಳನ್ನು ಈಡೇರಿಸಿ, ಮದ್ಯಪಾನ, ಧೂಮಪಾನ, ಮಾದಕ ವಸ್ತುಗಳನ್ನು ತ್ಯಜಿಸಿ ಇದರಿಂದ ನಿಮ್ಮ ಭವಿಷ್ಯವು ಉಜ್ವಲವಾಗುವುದು ಎಂದರು.

ಕಡಪಟ್ಟಿ ಗ್ರಾಮದಲ್ಲಿ ಪ್ರತಿಭೆಗಳಿಗೆ ಕೊರತೆ ಇಲ್ಲ ಮನೆಮನೆಗೆ ಒಬ್ಬ ಕಲಾವಿದರಿದ್ದಾರೆ, ಯೋಧರಿದ್ದಾರೆ, ಕ್ರೀಡಾಪಟುಗಳಿದ್ದಾರೆ, ಅನೇಕ ಪ್ರತಿಭಾವಂತ ವಿದ್ಯಾರ್ಥಿಗಳಿದ್ದಾರೆ, ಗಾರೆ ಕೆಲಸ ಮಾಡುವ ಮಗ ಪಿಯುಸಿ ವಿಜ್ಞಾನ ವಿಭಾಗಕ್ಕೆ ಪ್ರತಿಶತ 94 % ಅಂಕ ಪಡೆದಿರುವುದು ಹೆಮ್ಮೆಯ ವಿಷಯವಾಗಿದೆ ಎಂದರು.

**ಪ್ರತಿಭಾ ಪುರಸ್ಕಾರ:** ಶ್ರೀ ನಟರಾಜ ನಾಟ್ಯ ಕಲಾವಿದರ ಸಂಘ ಕಡಪಟ್ಟಿ ಇವರ ಸಹಯೋಗದಲ್ಲಿ ನಡೆದ ಎಸ್ ಎಸ್ ಎಲ್ ಸಿ ಹಾಗೂ ಪಿಯುಸಿಯಲ್ಲಿ 90 ಕ್ಕಿಂತಲೂ ಅಧಿಕ ಅಂಕ ಪಡೆದ ವಿದ್ಯಾರ್ಥಿ, ವಿದ್ಯಾರ್ಥಿನಿಯರಿಗೆ ವೇದಿಕೆ ಮೇಲೆ ಕುರಿಸಿ ಸನ್ಮಾನಿಸಲಾಯಿತು, ಜಾತ್ರಾ ಮಹೋತ್ಸವದ ನಿಮಿತ್ತ ಹಮ್ಮಿಕೊಂಡಿದ್ದ ಕಬಡ್ಡಿಯಲ್ಲಿ ವಿಜೇತರಾದ ನಾಲ್ಕು ತಂಡಗಳಿಗೆ ಸನ್ಮಾನ ಮಾಡಲಾಯಿತು.

**ಗಮನ ಸೆಳೆದ ಯುವ ಪಡೆ : ಶ್ರೀ ಜೋಡು** ಬಸವೇಶ್ವರ ಜಾತ್ರಾ ಮಹೋತ್ಸವದಲ್ಲಿ ಸುಮಾರು 300 ಕ್ಕು ಹೆಚ್ಚು ಯುವಕರು ಆಪರೇಷನ್ ಸಿಂಧೂರ ಹೆಸರಿನ ಟೀ ಶರ್ಟ್ ಧರಿಸಿ ಎಲ್ಲರ ಗಮನ ಸೆಳೆದರು.ಈ ಕಾರ್ಯಕ್ರಮದಲ್ಲಿ ಗಂಗಯ್ಯ ಕಡಕೋಳ, ಚಂದ್ರಶೇಖರ ರಾಮದುರ್ಗ, ರಮೇಶ್ ಇಟ್ಟಿ, ಮಹಾಲಿಂಗ ರಾಮದುರ್ಗ, ಸಂಜಯ ಕಲ್ಯಾಣಿ, ಚಿಕ್ಕಯ್ಯ ಮಠದ, ಬಸವರಾಜ ದಳವಾಯಿ, ಈರಪ್ಪ ಬೆಳಗಲಿ, ಶಂಭುಲಿಂಗಯ್ಯ ಕಡಕೋಳ, ಸಿದ್ದಪ್ಪ ಹಳ್ಳೂರ, ಜಗದೀಶ್ ಧಾರಣಿ, ಮುತ್ತಪ್ಪ ತಳವಾರ, ಪ್ರಜಾಪತಿ ಸುವರ್ಣಖಂಡಿ ,ಚಂದ್ರಕಾಂತ ಬಗರನಾಳ, ಗುರುಪಾದ ಇಟ್ಟಿ, ಬಸವರಾಜ ಇಟ್ಟಿ, ಅಶೋಕ ರಾಮದುರ್ಗ, ಮಂಜುನಾಥ ಸುವರ್ಣಖಂಡಿ, ವರಶಂಕರ ಕಡಪಟ್ಟಿ, ಗುರುಪಾದ ರಾವಳೋಜಿ, ಬಸಪ್ಪ ಕೊಣಪ್ಪನವರ, ಶ್ರೀಕಾಂತ ರಾಮದುರ್ಗ , ಸಿದ್ರಾಮ ಬಗರನಾಳ, ಮಹಾನಿಂಗ ಜಂಬಗಿ, ಜಗದೀಶ ಅಂಗಡಿ, ಲೋಕೇಶ್ ಮಡಿವಾಳರ, ಹನುಮಂತ ಸಂತಿ, ಹನುಮಂತ ಗುಲಗಂಜಿಕೊಪ್ಪ, ರಫೀಕ್ ನದಾಫ್, ಚಂದ್ರಕಾಂತ ರಾವಳೋಜಿ, ಸೇರಿದಂತೆ ಊರಿನ ಪ್ರಮುಖ ಹಿರಿಯರು ಯುವಕರು ಪಾಲ್ಗೊಂಡಿದ್ದರು. ಶಿಕ್ಷಕರಾದ ಶಿವಾನಂದ ಕಲ್ಯಾಣಿ ಹಾಗೂ ಬಸವರಾಜ ಲಕ್ಷ್ಮೇಶ್ವರ ನಿರೂಪಣೆ ಮಾಡಿದರು.

# ಬಾಳಪ್ಪ ಪ್ರಶಸ್ತಿ ಪ್ರದಾನ ದಿ.14 ರಂದು

**ಬೆಳಗಾವಿ** – ಇಂಪು ಸಂಗೀತ ವೇದಿಕೆಯ 24 ನೇ ವರ್ಷದ ಹುಕ್ಕೇರಿ ಬಾಳಪ್ಪ ಪ್ರಶಸ್ತಿಗೆ ಧಾರವಾಡದ ಖ್ಯಾತ ಗಾಯಕಿ ವಿದುಷಿ ಶ್ರೀಮತಿ ಸುಜಾತಾ ಗುರವ ಅವರು ಆಯ್ಕೆಯಾಗಿದ್ದು ಇದೇ ದಿ. 14 ರವಿವಾರ ಸಂಜೆ 5 ಗಂಟೆಗೆ ಟಿಳಕವಾಡಿಯ ಲಾಯಿನ್ಸ್ ಭವನದಲ್ಲಿ ಪ್ರಶಸ್ತಿ ಪ್ರದಾನ ಮತ್ತು ಸ್ವರಸುಧಾ ಕಾರ್ಯಕ್ರಮ ನಡೆಯಲಿದೆ. ಮುಖ್ಯ ಅತಿಥಿಗಳಾಗಿ ಹಿರಿಯ ಸಂಗೀತ ವಿದ್ವಾಂಸರೂ ಗಾಯಕರೂ ಆದ ಪಂ. ನಂದನ ಹೆರ್ಲೆಕರ ಅವರು ಆಗಮಿಸಲಿದ್ದಾರೆ.

ಪ್ರಶಸ್ತಿ ಪ್ರದಾನದ ನಂತರ ವಿದುಷಿ ಸುಜಾತಾ ಗುರವ ಅವರಿಂದ ಹಾಡುಗಾರಿಕೆಯಿದ್ದು ಅಲ್ಲಮಪ್ರಭು ಕಡಕೋಳ ಮತ್ತು ಯೋಗೇಶ ರಾಮದಾಸ ಅವರು ತಬಲಾ , ಹಾರ್ಮೋನಿಯಂ ಸಾಥ್ ನೀಡಲಿದ್ದಾರೆ. ಬೆಂಗಳೂರಿನ ಸಪ್ತಕ ಸಂಗೀತ ಸಂಸ್ಥೆಯ ಸಹಯೋಗದೊಂದಿಗೆ



ಈ ಕಾರ್ಯಕ್ರಮ ನಡೆಯಲಿದೆ. ಸಂಗೀತ ಕಲಾರಸಿಕರಿಗೆ ಕಾರ್ಯಕ್ರಮದ ಸಂಚಾಲಕರಾದ ಎಲ್. ಎಸ್. ಶಾಸ್ತ್ರಿ ಮತ್ತು ಜಿ. ಎಸ್. ಹೆಗಡೆ ಸ್ವಾಗತ ಕೋರಿದ್ದಾರೆ.

# ನಗರದಲ್ಲಿ ಸಂಚಾರಿ ಗಣೇಶ ಮೂರ್ತಿ ವಿಸರ್ಜನಾ ವಾಹನ ವ್ಯವಸ್ಥೆ

**ಹಾವೇರಿ.** ; ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿಯು ಸಾರ್ವಜನಿಕ ಹಿತದೃಷ್ಟಿ ಹಾಗೂ ಪರಿಸರ ರಕ್ಷಣೆಯ ನಿಟ್ಟಿನಲ್ಲಿ ಸಾರ್ವಜನಿಕರ ಸಹಭಾಗಿತ್ವದೊಂದಿಗೆ ಗಣೇಶನ ಮೂರ್ತಿಗಳನ್ನು ಪಟ್ಟಣದ ಹತ್ತಿರವಿರುವ ಕೊಳ, ಕೆರೆ, ಬಾವಿ ಮತ್ತು ನದಿ ಜಲಮೂಲಗಳಲ್ಲಿ ವಿಸರ್ಜಿಸುವುದನ್ನು ನಿಯಂತ್ರಿಸಲು ತಾತ್ಕಾಲಿಕವಾಗಿ "ಸಂಚಾರಿ ಗಣೇಶ ಮೂರ್ತಿ ವಿಸರ್ಜನಾ ವಾಹನವನ್ನು" ಹಾವೇರಿ ನಗರದ ಆಯ್ದ ಪ್ರದೇಶಗಳಲ್ಲಿ ವ್ಯವಸ್ಥೆ ಮಾಡಲಾಗಿದೆ ಎಂದು ಕರಾಮಾನಿಂ ಪರಿಸರ ಅಧಿಕಾರಿ ರಾಜಶೇಖರ ಪುರಾಣಿಕ್ ಅವರು ತಿಳಿಸಿದ್ದಾರೆ. ಗಣೇಶನ ಮೂರ್ತಿಗಳನ್ನು ವಿವಿಧ ಜಲಮೂಲಗಳಲ್ಲಿ ವಿಸರ್ಜಿಸಿ ಅಲ್ಲಿನ ಪರಿಸರ ಹಾಗೂ ಜಲಮೂಲಗಳನ್ನು ಕಲುಷಿತಗೊಳ್ಳುವುದನ್ನು ನಿಯಂತ್ರಿಸಲು "ಸಂಚಾರಿ ಗಣೇಶ ಮೂರ್ತಿ ವಿಸರ್ಜನಾ ವಾಹನ"ದ ವ್ಯವಸ್ಥೆ ಮಾಡಲಾಗಿದೆ. ಸಾರ್ವಜನಿಕರು ಗಣೇಶನ ಮೂರ್ತಿಗಳನ್ನು ಮಂಡಳಿಯು ಆಯೋಜಿಸಿದ ಸಂಚಾರಿ ವಾಹನದ ಉಪಯೋಗವನ್ನು ಪಡೆದು ಅದರಲ್ಲಿಯೇ ಗಣೇಶನ ಮೂರ್ತಿಗಳನ್ನು ವಿಸರ್ಜಿಸಿ ಪರಿಸರ ಮಾಲಿನ್ಯ ತಡೆಗಟ್ಟಲು ಸಹಕರಿಸಲು ಮನವಿ ಮಾಡಿಕೊಂಡಿದ್ದಾರೆ. ಸಂಚಾರಿ ಗಣೇಶ ಮೂರ್ತಿ ವಿಸರ್ಜನಾ ವಾಹನದ ಮಾರ್ಗದ ವಿವರ: ಪಿ. ಡಬ್ಲ್ಯೂ. ಡಿ. ಕ್ವಾರ್ಟರ್ಸ್ (ಎಮ್. ಜಿ. ಬ್ಯಾಂಕ್ ಹತ್ತಿರ) ದಿ. 31-08-2025ರ ಸಾಯಂಕಾಲ 6.00 ರಿಂದ 8.30 ರ ರವರೆಗೆ. ಹಾಗೂ ಪುರದ ಓಣಿ ಮತ್ತು ಏಲಕ್ಕಿ ಓಣಿ (ಜೈನ ದೇವಸ್ಥಾನದ ಹತ್ತಿರ) ರಾತ್ರಿ 8.45 ರಿಂದ 10.00ರ ವರೆಗೆ ವ್ಯವಸ್ಥೆ ಮಾಡಲಾಗಿದೆ.

### ಮಾದನಭಾವಿ ಗ್ರಾಮದಲ್ಲಿ ಜರುಗಿದ ಸಾರ್ವಜನಿಕ ಕುಂದುಕೊರತೆ ಸಭೆ

# ಗ್ರಾಮೀಣ ಸಮಸ್ಯೆಗಳ ಪರಿಹಾರಕ್ಕೆ ಮೊದಲ ಆದ್ಯತೆ; ಸರ್ಕಾರಿ ಯೋಜನೆಗಳನ್ನು ಸದುಪಯೋಗ ಪಡಿಸಿಕೊಳ್ಳಿ: - ಭುವನೇಶ ಪಾಟೀಲ

**ಧಾರವಾಡ** : ಗ್ರಾಮದ ಜನತೆಯ ಸಮಸ್ಯೆಗಳನ್ನು ಆಲಿಸಲು ಮತ್ತು ಅವುಗಳಿಗೆ ಸೂಕ್ತ ಪರಿಹಾರ ಒದಗಿಸಲು ಕುಂದುಕೊರತೆ ಸಭೆಯನ್ನು ಆಯೋಜಿಸಲಾಗಿದೆ. ನೀರಿನ ಸಮಸ್ಯೆ, ರಸ್ತೆ ದುರಸ್ತಿ, ವಿದ್ಯುತ್ ಪೂರೈಕೆ, ನಿವೇಶನ ಸಮಸ್ಯೆಗಳು ಮತ್ತು ಇತರ ಹಲವು ವಿಚಾರಗಳ ಬಗ್ಗೆ ಸಾರ್ವಜನಿಕರು ತಮ್ಮ ಅಹವಾಲುಗಳನ್ನು ಸಲ್ಲಿಸಿದ್ದು, ನಿಯಮಾನುಸಾರ ಎಲ್ಲ ಅಹವಾಲುಗಳನ್ನು ವಿಲೇವಾರಿ ಮಾಡಲಾಗುತ್ತದೆ ಎಂದು ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಭುವನೇಶ ಪಾಟೀಲ ಅವರು ಹೇಳಿದರು. ಅವರು ಇಂದು (ಆ.29) ಧಾರವಾಡ ಜಿಲ್ಲೆಯ ಮಾದನಭಾವಿ ಗ್ರಾಮದ ಶ್ರೀ ವೀರಭದ್ರೇಶ್ವರ ಸಮುದಾಯ ಭವನದಲ್ಲಿ ಗ್ರಾಮದ ಸಾರ್ವಜನಿಕರಿಂದ ಕುಂದು ಕೊರತೆಗಳನ್ನು ಸ್ವೀಕರಿಸಿ, ಸಭೆ ಜರುಗಿಸಿ, ಮಾತನಾಡಿದರು.

ಮಾದನಭಾವಿಯ ಕುಂದುಕೊರತೆ ಸಭೆಯಲ್ಲಿ ಸಾರ್ವಜನಿಕರು ತಮ್ಮ ವಿವಿಧ ಸಮಸ್ಯೆಗಳು ಮತ್ತು ಅಹವಾಲುಗಳನ್ನು ಸಾರ್ವಜನಿಕರು ಸಲ್ಲಿಸಿದರು. ಎಲ್ಲ ಮನವಿಗಳನ್ನು ತಾಳ್ಮೆಯಿಂದ ಆಲಿಸಿ, ಸಂಬಂಧಪಟ್ಟ ಇಲಾಖಾ ಅಧಿಕಾರಿಗಳಿಗೆ ತಕ್ಷಣ ಕ್ರಮ ಕೈಗೊಳ್ಳುವಂತೆ ಸಿಇಓ ಅವರು ಸೂಚನೆ ನೀಡಿದರು.

ಗ್ರಾಮಸ್ಥರು ಸಲ್ಲಿಸಿರುವ ಎಲ್ಲ ಮನವಿಗಳನ್ನು ಗಂಭೀರವಾಗಿ ಪರಿಗಣಿಸಿದ್ದು, ಅವುಗಳ ನಿರ್ವಹಣೆಗೆ ಅಗತ್ಯ ಕ್ರಮಗಳನ್ನು ತೆಗೆದುಕೊಳ್ಳುತ್ತೇವೆ ಎಂದು ಅವರು



ತಿಳಿಸಿದರು.

ಇಂದಿನ ಮಾದನಭಾವಿ ಜನಸಂಪರ್ಕ ಸಭೆಯಲ್ಲಿ ವಿವಿಧ ಇಲಾಖೆಗಳಿಗೆ ಸಂಬಂಧಿಸಿದ ಒಟ್ಟು 42 ಅರ್ಜಿಗಳನ್ನು ಸ್ವೀಕರಿಸಲಾಯಿತು. ಮತ್ತು ಅವುಗಳಲ್ಲಿ ಸುಮಾರು 23 ಅರ್ಜಿಗಳಿಗೆ ಸಂಬಂಧಪಟ್ಟ ಇಲಾಖೆಯಿಂದ ಸ್ಥಳದಲ್ಲಿಯೇ ಇತ್ಯರ್ಥಪಡಿಸಿ, ಪರಿಹರಿಸಿದರು.

ಅಧಿಕಾರಿಗಳು ಸಾರ್ವಜನಿಕರೊಂದಿಗೆ ನೇರವಾಗಿ ಸಂಪರ್ಕ ಸಾಧಿಸುತ್ತಿದ್ದಾರೆ. ಅವರ ಸಮಸ್ಯೆಗಳಿಗೆ ತ್ವರಿತವಾಗಿ ಸ್ಪಂದಿಸಿ ಯಾವುದೇ ಕೆಲಸ ವಿಳಂಬವಾಗದಂತೆ ನೋಡಿಕೊಳ್ಳಲು ಅಧಿಕಾರಿಗಳಿಗೆ ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಭುವನೇಶ ಪಾಟೀಲ ಅವರು ಸೂಚಿಸಿದರು.

ಸಭೆಯಲ್ಲಿ ಸರ್ಕಾರಿ ಯೋಜನೆಗಳ ಕುರಿತು ಗ್ರಾಮಸ್ಥರಿಗೆ ಮಾಹಿತಿ ನೀಡಿದ ಅವರು, ಯೋಜನೆಗಳ ಸದುಪಯೋಗ ಪಡೆದುಕೊಳ್ಳಬೇಕು. ಮುಂಬರುವ ದಿನಗಳಲ್ಲಿ ಇಂತಹ ಸಭೆಗಳನ್ನು ಇನ್ನಷ್ಟು ಪರಿಣಾಮಕಾರಿಯಾಗಿ ನಡೆಸಲು ಯೋಜನೆ ರೂಪಿಸಲಾಗುತ್ತಿದೆ ಎಂದು ಅವರು ತಿಳಿಸಿದರು.

ಗ್ರಾಮೀಣ ನರೇಗಾ ಯೋಜನೆಯ ಸಹಾಯಕ ನಿರ್ದೇಶಕ ಚಂದ್ರು ಪೂಜಾರ ಅವರು ನಿರೂಪಿಸಿದರು.

ಕಾರ್ಯಕ್ರಮದಲ್ಲಿ ಜಿಲ್ಲಾ ಪಂಚಾಯತ ಉಪ ಕಾರ್ಯದರ್ಶಿ ಮಲ್ಲಿಕಾರ್ಜುನ ತೊದಲಬಾವಿ, ಧಾರವಾಡ ತಹಶೀಲ್ದಾರ ಡಾ. ಡಿ.ಎಚ್.ಹೂಗಾರ, ತಾಲೂಕ ಪಂಚಾಯತ ಕಾರ್ಯನಿರ್ವಾಹಕ ಅಧಿಕಾರಿ ಗಂಗಾಧರ ಕಂದಕೂರ, ಕ್ಷೇತ್ರ ಶಿಕ್ಷಣಾಧಿಕಾರಿ ರಾಮಕೃಷ್ಣ ಸದಲಗಿ, ತಾಲೂಕಾ ಆರೋಗ್ಯ ಅಧಿಕಾರಿ ಡಾ. ಕೆ.ಎನ್. ತನುಜಾ, ಪಂಚಾಯತ ರಾಜ್ ಇಂಜನೀಯರಿಂಗ್ ವಿಭಾಗದ ಎಇಇ ಹನುಮಂತಪ್ಪ ತಳವಾರ, ಆರ್‌ಡಬ್ಲ್ಯೂಎಸ್ ಎಇಇ ಶಿಂಧೆ, ತಾಲೂಕಾ ಪಶುವೈದ್ಯಾಧಿಕಾರಿ ಡಾ. ಪ್ರಕಾಶ ಬೆಣ್ಣೂರ, ಕ್ರೇಡಿಲ್ ಎಇಇ ಅನ್ನಪೂರ್ಣಾ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು, ಮಾದನಬಾವಿ ಗ್ರಾಮ ಪಂಚಾಯತ ಅಧ್ಯಕ್ಷ ಸಂತೋಷ ಪಾಟೀಲ, ಮಾದನಬಾವಿ ಪಿಡಿಓ ಎಸ್.ಆರ್. ಬೆಟ್ಟದೂರು, ಉಪಾಧ್ಯಕ್ಷರು ಸದಸ್ಯರು ಹಾಗೂ ಗ್ರಾಮ ಪಂಚಾಯತ್ ಸದಸ್ಯರು, ಸ್ಥಳೀಯ ಮುಖಂಡರು ಹಾಗೂ ಮಾದನಬಾವಿ ಗ್ರಾಮಸ್ಥರು ಉಪಸ್ಥಿತರಿದ್ದರು.

ಸರ್ಕಾರಿ ಶಾಲೆಗಳಿಗೆ ಭೇಟಿ: ಮಾದನಭಾವಿ ಗ್ರಾಮದ ಸಾರ್ವಜನಿಕ ಸಭೆಯ ನಂತರ ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಭುವನೇಶ ಪಾಟೀಲ ಅವರು, ಗ್ರಾಮದ ಸರ್ಕಾರಿ ಪ್ರಾಥಮಿಕ ಹಾಗೂ ಪ್ರೌಢಶಾಲೆಗೆ ಭೇಟಿ ನೀಡಿ, ಆವರಣದಲ್ಲಿ ಉತ್ತಮ ವಾತಾವರಣ, ಶೌಚಾಲಯ, ಕುಡಿಯುವ ನೀರು ಮತ್ತು ಇತರೆ ಮೂಲಭೂತ ಸೌಕರ್ಯಗಳ ಲಭ್ಯತೆಯ ಬಗ್ಗೆ ಖುದ್ದು ಪರಿಶೀಲಿಸಿದರು. ಈ ಸಂದರ್ಭದಲ್ಲಿ ಶಿಕ್ಷಕರು ಮತ್ತು ಶಾಲಾ ಸಿಬ್ಬಂದಿಗಳೊಂದಿಗೆ ಮಾತನಾಡಿ, ಶೈಕ್ಷಣಿಕ ಗುಣಮಟ್ಟವನ್ನು ಹೆಚ್ಚಿಸಲು ಕೈಗೊಳ್ಳಬೇಕಾದ ಕ್ರಮಗಳ ಬಗ್ಗೆ ತಿಳಿಸಿದರು.

ಅಂಗನವಾಡಿ ಕೇಂದ್ರಕ್ಕೆ ಭೇಟಿ ನೀಡಿದ ಅವರು, ಅಂಗನವಾಡಿಯಲ್ಲಿ ತಯಾರಿಸಿದ್ದ ಆಹಾರವನ್ನು ಸೇವಿಸುವ ಮೂಲಕ ಆಹಾರ ಗುಣಮಟ್ಟ ಪರಿಶೀಲಿಸಿದರು. ಪೌಷ್ಟಿಕಾಂಶ ಭರಿತ ಊಟದ ಪ್ರಾಮುಖ್ಯತೆಯನ್ನು ಸಿಬ್ಬಂದಿಗಳಿಗೆ ತಿಳಿಸಿದರು. ಮತ್ತು ಮಕ್ಕಳ ಕಲ್ಲಿಕೆಯ ಬಗ್ಗೆ ಶಿಕ್ಷಕರಿಂದ ಮಾಹಿತಿ ಪಡೆದರು.

# ಗಣೇಶ ಚತುರ್ಥಿ ಹಾಗೂ ಈದ್ ಮಿಲಾದ್ ಹಬ್ಬದ ಪ್ರಯುಕ್ತ ರಾಯಬಾಗ ಪೋಲೀಸರ ಪಥ ಸಂಚಲನ



**ರಾಯಬಾಗ:**ಗಣೇಶ ಚತುರ್ಥಿ ಹಾಗೂ ಈದ್ ಮಿಲಾದ್ ಹಬ್ಬಗಳ ಹಿನ್ನಲೆಯಲ್ಲಿ ಪಟ್ಟಣದಲ್ಲಿ ಸಿಪಿಐ ಬಿ ಎಸ್ ಮಂಟೂರ ಅವರ ನೇತೃತ್ವದಲ್ಲಿ ಶನಿವಾರ ಪೊಲೀಸ್ ಪಥ ಸಂಚಲನ ನಡೆಸಲಾಯಿತು.

ಪಟ್ಟಣದ ಪ್ರಮುಖ ಬೀದಿಗಳಲ್ಲಿ ಪೋಲಿಸರು ಪಥ ಸಂಚಲನ ನಡೆಸಿದರು.

ಬಳಿಕ ಸಿಪಿಐ ಬಿ ಎಸ್ ಮಂಟೂರ ಮಾತನಾಡಿ,ವೈವಿಧ್ಯತೆಯಲ್ಲಿ ಏಕತೆ ನಮ್ಮ ದೇಶದ ಸಂಸ್ಕೃತಿಯಾಗಿದ್ದು, ಜಿಲ್ಲೆಯಲ್ಲಿ ಗಣೇಶ ಹಬ್ಬ ಮತ್ತು ಈದ್ ಮಿಲಾದ್ ಹಬ್ಬ ಸರ್ಹಾದತೆಯ ಸಾಂಕೇತಿಕ ಹಬ್ಬಗಳಾಗಿದ್ದರಿಂದ ಸಾರ್ವಜನಿಕರು ಶಾಂತಯುತವಾಗಿ, ಸೌಹಾರ್ದತೆಯ ಭಾವದಿಂದ ಹಬ್ಬ ಆಚರಿಸುವಂತೆ ಅವರು ಮನವಿ ಮಾಡಿದರು.ಪಿಎಸ್‌ಐ ಪ್ರಕಾಶ ಮಾನೆ, ಪಿಎಸ್‌ಐ ನರಸಿಂಹರಾಜು ಜೆ.ಡಿ,ಹಾಗೂ ಪೊಲೀಸ್ ಸಿಬ್ಬಂದಿ ಪಾಲ್ಗೊಂಡಿದ್ದರು.

### ಖಾಯಂ ಜನತಾ ನ್ಯಾಯಾಲಯದ ಕುರಿತು

# ಕಾನೂನು ಅರಿವು-ನೆರವು ಕಾರ್ಯಕ್ರಮ




**ಧಾರವಾಡ** : ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಖಾಯಂ ಜನತಾ ನ್ಯಾಯಾಲಯ ಹಾಗೂ ಕೆ.ಪಿ.ಇ.ಎಸ್, ಡಾ. ಜಿ.ಎಮ್.ಪಾಟೀಲ, ಕಾನೂನು ಮಹಾವಿದ್ಯಾಲಯ ಧಾರವಾಡ ಇವರ ಸಹಯೋಗದಲ್ಲಿ ಆಗಸ್ಟ್ 29, 2025 ರಂದು ಬೆಳಿಗ್ಗೆ ಖಾಯಂ ಜನತಾ ನ್ಯಾಯಾಲಯದ ಕುರಿತು ಕಾನೂನು ಅರಿವು-ನೆರವು ಕಾರ್ಯಕ್ರಮವನ್ನು ಆಯೋಜಿಸಲಾಗಿತ್ತು.

ಕಾರ್ಯಕ್ರಮಜಲ್ಲಿ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು ಹಾಗೂ ಧಾರವಾಡ ಖಾಯಂ ಜನತಾ ನ್ಯಾಯಾಲಯದ ಅಧ್ಯಕ್ಷ ನಾಗರಾಜಪ್ಪ ಎ.ಕೆ, ಉದ್ಘಾಟಿಸಿ, ಮಾತನಾಡಿದರು. ಸಾರ್ವಜನಿಕ ಉಪಯುಕ್ತತೆಗೆ ಸಂಬಂಧಿಸಿದ ವಿವಾದಗಳನ್ನು ಪರಿಹರಿಸಿಕೊಳ್ಳಲು ಇರುವ ಕಾನೂನುಗಳ ಬಗ್ಗೆ ಖಾಯಂ ಜನತಾ ನ್ಯಾಯಾಲಯವು ಕಾರ್ಯನಿರ್ವಹಿಸುತ್ತಿರುವ ಬಗ್ಗೆ ತಿಳಿಸಿದರು ಹಾಗೂ ಕರ್ನಾಟಕ ರಾಜ್ಯದಲ್ಲಿ ಒಟ್ಟು 06 ಖಾಯಂ ಜನತಾ ನ್ಯಾಯಾಲಯಗಳು ಸ್ಥಾಪನೆಯಾಗಿ ಕಾರ್ಯನಿರ್ವಹಿಸುತ್ತಿದ್ದು, ಧಾರವಾಡ ಖಾಯಂ ಜನತಾ ನ್ಯಾಯಾಲಯವು 07 ಜಿಲ್ಲೆಗಳಾದ ಧಾರವಾಡ, ಬಳ್ಳಾರಿ, ಗದಗ, ಕೊಪ್ಪಳ, ಹಾವೇರಿ, ದಾವಣಗೆರೆ ಮತ್ತು ಉತ್ತರ ಕನ್ನಡ ಜಿಲ್ಲೆಗಳಲ್ಲಿನ ವ್ಯಾಪ್ತಿಯಲ್ಲಿ ಬರುವ ಪ್ರಕರಣಗಳನ್ನು ದಾಖಲು ಮಾಡಿಕೊಂಡು ತೀರ್ಪು ನೀಡುವ ಅಧಿಕಾರ ಹೊಂದಿರುತ್ತದೆ. ಸದರಿ ನ್ಯಾಯಾಲಯದ ಸದುಪಯೋಗವನ್ನು ಸಾರ್ವಜನಿಕರಿಗೆ ಬಳಸಿಕೊಳ್ಳಲು ವಿದ್ಯಾರ್ಥಿಗಳು ಹೆಚ್ಚಿನ ಪ್ರಚಾರ ಮಾಡುವಂತೆ ಕರೆ ನೀಡಿದರು.

ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಗಳಾಗಿ ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಪರಶುರಾಮ ಎಫ್ ದೊಡ್ಡಮನಿ ಅವರು ಭಾಗವಹಿಸಿದ್ದರು. ಕಾರ್ಯಕ್ರಮದ ಅಧ್ಯಕ್ಷತೆಯನ್ನು ಕಾಲೇಜಿನ ಪ್ರಾಚಾರ್ಯ ಸಂಜೀವ ಪಾಟೀಲ ವಹಿಸಿದ್ದರು.

ಕಾರ್ಯಕ್ರಮದಲ್ಲಿ ಡಾ. ಶ್ವೇತಾ ದೇಶಪಾಂಡೆ, ಸಹಾಯಕ ಪ್ರಾಧ್ಯಾಪಕರು ಹಾಗೂ ಕಾಲೇಜಿನ ಭೋದಕ ಹಾಗೂ ಭೋದಕೇತರ ಸಿಬ್ಬಂದಿಗಳು ಮತ್ತು ಕಾನೂನು ಮಹಾವಿದ್ಯಾಲಯದ ವಿದ್ಯಾರ್ಥಿಗಳು ಭಾಗವಹಿಸಿದ್ದರು.

****

# ಆದಿ ಕರ್ಮಯೋಗಿ ಕಾರ್ಯಕ್ರಮ ಉದ್ಘಾಟನೆ



**ಬೆಳಗಾವಿ,** ಕೇಂದ್ರ ಬುಡಕಟ್ಟು ವ್ಯವಹಾರಗಳ ಸಚಿವಾಲಯ (ಒಂಖಿಂ) ರವರು ರಾಷ್ಟ್ರ ಮಟ್ಟದಲ್ಲಿ ಆದಿ ಕರ್ಮಯೋಗಿ **(Aadi Karmyogi- Respom-sive Governance programme)** ಕಾರ್ಯಕ್ರಮವನ್ನು ಜಿಲ್ಲಾ ಪಂಚಾಯತ್ ಯೋಜನಾ ನಿರ್ದೇಶಕರು ಉದ್ಘಾಟಿಸಿದರು.

ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆ ಬೆಳಗಾವಿ ಇವರಿಂದ ಸದರಿ ಕಾರ್ಯಕ್ರಮದಡಿ ತಾಲೂಕು ಮಟ್ಟದ ಮಾಸ್ಟರ್ ತರಬೇತಿ **(Block Master Trainers)** ದಾರರಿಗೆ ಜಿಲ್ಲಾ ಮಟ್ಟದ ಮಾಸ್ಟರ್ ತರಬೇತಿದಾರರಿಂದ **(District Master Trainers)** ದಿನಾಂಕ: 28-08-2025 ರಿಂದ 30-08-2025 ರವರೆಗೆ 03 ದಿನದ ವಸತಿ ಸಹಿತ **District Processing Lab (DPL)** ತರಬೇತಿ ಕಾರ್ಯಕ್ರಮವನ್ನು **All India Institute of Local Self Government 2nd Cross Bhagya nagar Belagavi** ಇಲ್ಲಿ ಹಮ್ಮಿಕೊಳ್ಳಲಾಗಿರುತ್ತದೆ.

# ಜಿಲ್ಲೆಯ ರೈತ - ರೈತ ಮಹಿಳೆಯರಿಂದ ಅರ್ಜಿ ಆಹ್ವಾನ


**ಗದಗ** : ಜಿಲ್ಲೆಯ ಕೃಷಿ ಇಲಾಖೆಯ ಆತ್ಮ ಯೋಜನೆಯಡಿ 2025-26 ನೇ ಸಾಲಿಗೆ ಜಿಲ್ಲಾ ಮತ್ತು ತಾಲೂಕು ಮಟ್ಟದ ಶ್ರೇಷ್ಠ ಕೃಷಿಕ ಪ್ರಶಸ್ತಿಗೆ ಜಿಲ್ಲೆಯ ರೈತ ಮತ್ತು ರೈತ ಮಹಿಳೆಯರಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದ್ದು,
ಆಸಕ್ತ ರೈತರು ಅರ್ಜಿಗಳನ್ನು ತಮ್ಮ ತಾಲ್ಲೂಕಿನ ಸಹಾಯಕ ಕೃಷಿ ನಿರ್ದೇಶಕರ ಕಛೇರಿಯಲ್ಲಿ ಪಡೆದು ದಿನಾಂಕ 18-09-2025 ರೊಳಗಾಗಿ ನಿಗದಿತ ಅರ್ಜಿ ನಮೂನೆಯಲ್ಲಿ ಸಂಪೂರ್ಣ ಮಾಹಿತಿಯನ್ನು ದಾಖಲಾತಿಗಳೊಂದಿಗೆ ಸಂಬಂಧಿಸಿದ ತಾಲ್ಲೂಕು ಸಹಾಯಕ ಕೃಷಿ ನಿರ್ದೇಶಕರ ಕಛೇರಿಯಲ್ಲಿ ಸಲ್ಲಿಸಲು ಜಂಟಿ ಕೃಷಿ ನಿರ್ದೇಶಕರು ಹಾಗೂ ಯೋಜನಾ ನಿರ್ದೇಶಕರು, ಆತ್ಮ ಯೋಜನೆ, ಗದಗರವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.
ಹೆಚ್ಚಿನ ಮಾಹಿತಿಗಾಗಿ ರೈತ ಸಂಪರ್ಕ ಕೇಂದ್ರ ಅಥವಾ ತಾಲ್ಲೂಕಿನ ಸಹಾಯಕ ಕೃಷಿ ನಿರ್ದೇಶಕರ ಕಛೇರಿಯನ್ನು ಸಂಪರ್ಕಿಸಲು ಕೋರಿದೆ.

### ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ

# ಮಹಾತ್ಮ ಗಾಂಧೀಜಿ 156 ನೇ ಜಯಂತಿ ಅಂಗವಾಗಿ ಜಿಲ್ಲಾ - ರಾಜ್ಯಮಟ್ಟದ ಬಾಪೂಜಿ ಪ್ರಬಂಧ ಸ್ಪರ್ಧೆ ಆಯೋಜನೆ

**ಧಾರವಾಡ** : ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯಿಂದ ಆಚರಿಸುತ್ತಿರುವ ರಾಷ್ಟ್ರಪಿತ ಮಹಾತ್ಮ ಗಾಂಧೀಜಿಯವರ 156ನೇ ಜಯಂತಿಯ ದಿನಾಚರಣೆಯ ಅಂಗವಾಗಿ ವಿದ್ಯಾರ್ಥಿ ಹಾಗೂ ಯುವಜನರಲ್ಲಿ ಮಹಾತ್ಮ ಗಾಂಧೀಜಿಯವರ ಬದುಕು. ಸ್ವಾತಂತ್ರ್ಯ ಚಳುವಳಿ. ಸರಳತೆ, ಅಹಿಂಸಾ ಮಾರ್ಗ, ಸಹಬಾಳ್ವೆ, ಅಸ್ಪೃಶ್ಯತೆ ನಿವಾರಣೆಗಾಗಿ ನಡೆಸಿದ ಪ್ರಯೋಗಗಳು ಇತ್ಯಾದಿ ವಿಚಾರಗಳ ಬಗ್ಗೆ ಪ್ರೌಢಶಾಲೆ. ಪದವಿ ಪೂರ್ವ ಹಾಗೂ ಪದವಿ-ಸ್ನಾತಕೋತ್ತರ ವಿದ್ಯಾರ್ಥಿಗಳಿಗೆ ಬಾಪೂಜಿ ಪ್ರಬಂಧ ಸ್ಪರ್ಧೆಯನ್ನು ಜಿಲ್ಲಾ ಮತ್ತು ರಾಜ್ಯ ಮಟ್ಟದಲ್ಲಿ ಹಮ್ಮಿಕೊಳ್ಳಲಾಗುತ್ತಿದೆ.

ವಿವಿಧ ವಿಷಯಗಳ ಕುರಿತು ಪ್ರೌಢಶಾಲೆ. ಪದವಿ ಪೂರ್ವ ಶಿಕ್ಷಣ ಹಾಗೂ ಪದವಿ-ಸ್ನಾತಕೋತ್ತರ ಪದವಿಗಳ ಹಂತದ ವಿದ್ಯಾರ್ಥಿಗಳಿಗೆ ಒಟ್ಟು 3 ವಿಭಾಗಗಳಲ್ಲಿ ಬಾಪೂಜಿ ಪ್ರಬಂಧ ಸ್ಪರ್ಧೆಯನ್ನು ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯಿಂದ ಆಯೋಜಿಸಲು ಉದ್ದೇಶಿಸಿದೆ. ವಿಜೇತರಿಗೆ ರಾಜ್ಯಮಟ್ಟದಲ್ಲಿ ಪ್ರಥಮ ಬಹುಮಾನ 31 ಸಾವಿರ ರೂ. ದ್ವಿತೀಯ ಬಹುಮಾನ 21 ಸಾವಿರ ರೂ. ಮತ್ತು ತೃತೀಯ ಬಹುಮಾನ 11 ಸಾವಿರ ರೂ. ಹಾಗೂ ಜಿಲ್ಲಾಮಟ್ಟದಲ್ಲಿ ಪ್ರಥಮ ಬಹುಮಾನ 3 ಸಾವಿರ ರೂ. ದ್ವಿತೀಯ ಬಹುಮಾನ 2 ಸಾವಿರ ರೂ ಮತ್ತು ತೃತೀಯ ಬಹುಮಾನ 1 ಸಾವಿರ



ರೂ. ಬಹುಮಾನ ನೀಡಲಾಗುವುದು.

ಪ್ರೌಢ ಶಾಲಾ ವಿಭಾಗದಲ್ಲಿ: 1) ಸ್ವಚ್ಚತೆಯ ಪಾಠ - ಗಾಂಧೀಜಿಯವರ ಸಂದೇಶ, 2) ಮಕ್ಕಳ ಭವಿಷ್ಯ ನಿರ್ಮಾಣದಲ್ಲಿ ಗಾಂಧೀಜಿಯವರ ಪಾತ್ರ. 3) ಗಾಂಧೀಜಿಯವರ ಸ್ವಾತಂತ್ರ್ಯದ ಕನಸು - ನನ್ನ ಕಲ್ಪನೆ. ಪ್ರೌಢಶಾಲಾ ವಿಭಾಗದ ವಿದ್ಯಾರ್ಥಿಗಳು ಈ ಮೂರು ವಿಷಯಗಳಲ್ಲಿ ಯಾವುದಾದರೂ ಒಂದು ವಿಷಯ ಕುರಿತು 700 ರಿಂದ 800 ಪದಗಳು ಮೀರದಂತೆ ಪ್ರಬಂಧ ಬರೆಯಬೇಕು.

ಪದವಿ ಪೂರ್ವ ಶಿಕ್ಷಣ ವಿಭಾಗದಲ್ಲಿ: 1) ಅಸ್ಪೃಶ್ಯತೆ ನಿವಾರಣೆಯಲ್ಲಿ ಗಾಂಧೀಜಿಯವರ ಹೋರಾಟ, 2) ಇಂದಿನ ಸಮಾಜದಲ್ಲಿ ಸರ್ವೋದಯ ಮತ್ತು ಅಂತ್ಯೋದಯದ ಪ್ರಾಸಂಗಿಕತೆ, 3) ಬದಲಾವಣೆ ನನ್ನಿಂದಲೇ ಆರಂಭ - ಗಾಂಧೀಜಿಯವರ ಪಾಠ, ಪದವಿ ಪೂರ್ವ ಶಿಕ್ಷಣ ವಿಭಾಗದ ವಿದ್ಯಾರ್ಥಿಗಳು ಈ ಮೂರು ವಿಷಯಗಳಲ್ಲಿ ಯಾವುದಾದರೂ ಒಂದು ವಿಷಯ ಕುರಿತು 900 ರಿಂದ 1000 ಪದಗಳು ಮೀರದಂತೆ ಪ್ರಬಂಧ ಬರೆಯಬೇಕು.

ಪದವಿ ಹಾಗೂ ಸ್ನಾತಕೋತ್ತರ ಪದವಿ ವಿಭಾಗದಲ್ಲಿ: 1) ಗಾಂಧೀಜಿ ಕಂಡ ನ್ಯಾಯಸಮ್ಮತ ರಾಜಕೀಯ ವ್ಯವಸ್ಥೆ, 2) ಗಾಂಧೀಜಿ ಮತ್ತು ಡಾ. ಬಿ.ಆರ್. ಅಂಬೇಡ್ಕರ್ - ತತ್ವಗಳ ಹೋಲಿಕೆ, 3) ಮೌಲ್ಯಾಧಾರಿತ ನಾಯಕತ್ವ ಹಾಗೂ ನೈತಿಕ ರಾಜಕಾರಣ - ಯುವಕರಿಗೆ ಗಾಂಧೀಜಿಯವರ ಪಾಠ. ಪದವಿ ಹಾಗೂ ಸ್ನಾತಕೋತ್ತರ ಪದವಿ ವಿಭಾಗದ ವಿದ್ಯಾರ್ಥಿಗಳು ಈ ಮೂರು ವಿಷಯಗಳಲ್ಲಿ ಯಾವುದಾದರೂ ಒಂದು ವಿಷಯ ಕುರಿತು 1400 ರಿಂದ 1500 ಪದಗಳು ಮೀರದಂತೆ ಪ್ರಬಂಧ ಬರೆಯಬೇಕು.

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯು ಜಿಲ್ಲಾಡಳಿತದ ಸಹಯೋಗದೊಂದಿಗೆ ದಿನಾಂಕ : 06-09-2025 ರೊಳಗಾಗಿ ಸ್ಪರ್ಧೆ ಏರ್ಪಡಿಸಿ ನಂತರ ಮೌಲ್ಯಮಾಪನ ಮಾಡಿ ದಿನಾಂಕ:12-09-2025 ಒಳಗಾಗಿ ವಿಜೇತರ ವಿವರಗಳು ಹಾಗೂ ಪ್ರಬಂಧಗಳನ್ನು ಕೇಂದ್ರ ಕಚೇರಿಗೆ ಕಳುಹಿಸಬೇಕು. ಜಿಲ್ಲಾಮಟ್ಟದ ಪ್ರಥಮ ಬಹುಮಾನ ವಿಜೇತ ಪ್ರಬಂಧಗಳನ್ನು ರಾಜ್ಯಮಟ್ಟದಲ್ಲಿ ಮರುಮೌಲ್ಯಮಾಪನ ಮಾಡಿ. ರಾಜ್ಯಮಟ್ಟದ ಫಲಿತಾಂಶ ಘೋಷಿಸಲಾಗುವುದು.

ಪ್ರತಿ ವಿಭಾಗದಲ್ಲಿನ ಅತ್ಯುತ್ತಮವಾದ ಮೂರು (3) ಪ್ರಬಂಧಗಳಿಗೆ ಅಕ್ಟೋಬರ್ 02 ರಂದು ಜಿಲ್ಲಾ ಮಟ್ಟದ ಗಾಂಧೀ ಜಯಂತಿ ದಿನಾಚರಣೆ ಸಂದರ್ಭದಲ್ಲಿ ಬಹುಮಾನ ನೀಡಿ ಪ್ರಬಂಧ ರಚನೆಕಾರರನ್ನು ಗೌರವಿಸಲಾಗುವುದು.

ನಿಬಂಧನೆಗಳು : ಪ್ರಬಂಧವು ಸಂಪೂರ್ಣವಾಗಿ ಸ್ವರಚಿತವಾಗಿರಬೇಕು. ಸ್ಪರ್ಧೆ ಏರ್ಪಡಿಸುವ ಸ್ಥಳದಲ್ಲಿಯೇ ಶುದ್ಧ ಕೈಬರಹದಲ್ಲಿ ಪ್ರಬಂಧ ಬರೆಯಬೇಕು. ಅಕರವಾಗಿ ಬಳಸಿದ ಪರಾಮರ್ಶನ, ಆದಾರ ಗ್ರಂಥಗಳ ವಿವರಗಳನ್ನು ಪ್ರಬಂಧದ ಕೊನೆಯಲ್ಲಿ ನಮೂದಿಸಬೇಕು. ಆದರೆ, ಸ್ಪರ್ಧೆ ಏರ್ಪಡಿಸುವ ಸ್ಥಳದಲ್ಲಿ ಪರಾಮರ್ಶನ, ಆಧಾರ ಗ್ರಂಥಗಳು, ಮೊಬೈಲ್‌ಗಳ ಬಳಕೆಗೆ ಅವಕಾಶವಿರುವುದಿಲ್ಲ. ಪ್ರಬಂಧಕಾರರ ಹೆಸರು, ವಿಳಾಸ ನಮೂದಿಸಿರಬೇಕು. ಪ್ರಬಂಧವು ಈ ಮೊದಲು ಎಲ್ಲಿಯೂ ಪ್ರಕಟವಾಗಿರಬಾರದು. ಆಯ್ದ ಪ್ರಬಂಧಗಳ ಪ್ರಕಟಣೆಯ ಹಕ್ಕನ್ನು ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಕಾಯ್ದಿರಿಸಿಕೊಂಡಿರುತ್ತದೆ ಎಂದು ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಸಹಾಯಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ದೀಕ್ಷಾಗೆ ತೆರಳಲು ಆಸಕ್ತರಿಂದ ಅರ್ಜಿ ಅಹ್ವಾನ


**ಬೈಲಹೊಂಗಲ** -2025-26 ನೇ ಸಾಲಿನಲ್ಲಿ ಮಹಾರಾಷ್ಟ್ರ ನಾಗಪುರದಲ್ಲಿನ ದೀಕ್ಷಾ ಭೂಮಿಗೆ ಹೋಗುವವರಿಗೆ ಬಸ್ ಹಾಗೂ ರೈಲು ಮೂಲಕ ತೆರಳುವವರಿಗೆ ಸಮಾಜ ಕಲ್ಯಾಣ ಇಲಾಖೆಯ ವತಿಯಿಂದ ಬೈಲಹೊಂಗಲ ಹಾಗೂ ಚೆನ್ನಮ್ಮನ ಕಿತ್ತೂರು ತಾಲೂಕು ವ್ಯಾಪ್ತಿಯ ಪರಿಶಿಷ್ಟ ಜಾತಿಯವರಿಂದ ಅನಲೈನ ಮೂಲಕ ಅರ್ಜಿಗಳನ್ನು ಅಹ್ವಾನ ಮಾಡಲಾಗಿದೆ.ಆ 25 ರಿಂದ್ ಅರ್ಜಿ ಸ್ವೀಕಾರ ಆರಂಭವಾಗಿದ್ದು ಸೆ. 9 ಅರ್ಜಿ ಸಲ್ಲಿಸಲು ಕೊನೆಯ ದಿನವಾಗಿದೆ. ಈಗಾಗಿ ಆಸಕ್ತರು ಹೆಚ್ಚಿನ ಮಾಹಿತಿಗಾಗಿ ತಾಲೂಕ ಸಮಾಜ ಕಲ್ಯಾಣ ಅಧಿಕಾರಿ ಗ್ರೇಡ್ 2 ಮಲ್ಲಿಕಾರ್ಜುನ ಉಳ್ಳೆಗಡ್ಡಿ ಇವರನ್ನು ಸಂಪರ್ಕಿಸುವಂತೆ ಕಚೇರಿಯ ಪ್ರಕಟಣೆ ತಿಳಿಸಿದೆ.

### ನಾಳೆ ವಿವಿಧ ಜಯಂತಿಗಳ ಪೂರ್ವಭಾವಿ ಸಭೆ

**ಧಾರವಾಡ** : ಜಿಲ್ಲಾಡಳಿತ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಯೋಗದಲ್ಲಿ ಸೆಪ್ಟೆಂಬರ್ 07 ರಂದು ಬ್ರಹ್ಮಶ್ರೀ ನಾರಾಯಣಗುರು ಜಯಂತಿಯನ್ನು ಹಾಗೂ ಸೆಪ್ಟೆಂಬರ 17 ರಂದು ಭಗವಾನ ಶ್ರೀ ವಿಶ್ವಕರ್ಮ ಜಯಂತಿಯನ್ನು ಆಯೋಜಿಸುವ ಹಿನ್ನಲೆಯಲ್ಲಿ ಜಯಂತಿಗಳ ಪೂರ್ವಭಾವಿ ಸಭೆಯನ್ನು ಜಿಲ್ಲಾಧಿಕಾರಿಗಳ ಕಚೇರಿ ನೂತನ ಸಭಾಂಗಣದಲ್ಲಿ ಸೆಪ್ಟೆಂಬರ್ 01 ರಂದು ಬೆಳಿಗ್ಗೆ 11 ಗಂಟೆಗೆ ಆಯೋಜಿಸಲಾಗಿದೆ.

ಸದರಿ ಸಭೆಗೆ ಜಿಲ್ಲಾ ಮಟ್ಟದ ಅಧಿಕಾರಿಗಳು ಮತ್ತು ಸಮಾಜದ ಮುಖಂಡರು ಭಾಗವಹಿಸಿ ಸಲಹೆ, ಸೂಚನೆ ನೀಡಲು ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಪ್ರಕಟಣೆಯಲ್ಲಿ ತಿಳಿಸಿದೆ.

### ಅಗಲಿದ ಜೀವ ಉಷಾ ಕುಲಕರ್ಣಿ



**ಮುಧೋಳ:** ಶಿಕ್ಷಕರ ಬಡಾವಣೆ ನಿವಾಸಿ ಸಮಾಜ ಕಲ್ಯಾಣ ಇಲಾಖೆಯ ನಿವೃತ್ತ ಅಧಿಕಾರಿ ಉಷಾ ವೆಂಕಟೇಶ ಕುಲಕರ್ಣಿ (78) ನಿಧನರಾಗಿದ್ದಾರೆ. ಮೃತರು ಪತಿ, ಪುತ್ರಿ, ಇಬ್ಬರು ಪುತ್ರರು ಹಾಗೂ ಅಪಾರ ಬಂಧು-ಬಳಗವನ್ನು ಆಗಲಿದ್ದಾರೆ.

ನ್ಯಾಯವಾದಿ ರಾಮಕೃಷ್ಣ ಕುಲಕರ್ಣಿ ಮೃತರ ಪುತ್ರರಲ್ಲಿ ಒಬ್ಬರು, ಉಷಾ ಇವರ ನಿಧನಕ್ಕೆ ಸಚಿವಆರ್. ಬಿ.ತಿಮ್ಮಾಪೂರ ಸಂಸದ ಗೋವಿಂದ ಕಾರಜೋಳ, ಮಾಜಿ ಸಚಿವ ಮುರುಗೇಶ ನಿರಾಣಿ ಹಾಗೂ ವಿಪ್ರ ಸಮಾಜ ಬಾಂಧವರು ತೀವ್ರ ಶೋಕ ವ್ಯಕ್ತ ಪಡಿಸಿದ್ದಾರೆ.

# ಗಣೇಶೋತ್ಸವವು ಒಗ್ಗಟ್ಟಿನ ಭಲ ತುಂಬಲಿದೆ-ಸಿದ್ದಲಿಂಗಶ್ರೀ

**ತಾಳಿಕೋಟೆ,** ಸ್ವಾತಂತ್ರ್ಯದ ಕಹಳೆ ಮೊಳಗಿಸಲು ಬಾಲ ಗಂಗಾಧರ ತಿಲಕ ಅವರು ಆಚರಣೆಗೆ ತಂದ ಗಣೇಶ ಉತ್ಸವವು ದೇಶಾಭಿಮಾನದ ಜೊತೆಗೆ ಯುವ ಫಿಳಿಗೆಯಲ್ಲಿ ಒಗ್ಗಟ್ಟಿನ ಭಲ ತುಂಬುತ್ತಾ ಸಾಗಿದೆ ಎಂದು ಶ್ರೀ ಖಾಸ್ಗತೇಶ್ವರ ಮಠದ ಬಾಲ ಶಿವಯೋಗಿ ಶ್ರೀ ಸಿದ್ದಲಿಂಗ ದೇವರು ನುಡಿದರು.

ಗುರುವಾರರಂದು ಸ್ಥಳೀಯ ಶ್ರೀ ಖಾಸ್ಗತೇಶ್ವರ ತರುಣ ವತಿಯಿಂದ ವಿದ್ಯಾನಗರ ಬಡಾವಣೆಯಲ್ಲಿ ಪ್ರತಿಷ್ಠಾಪಿಸಲಾದ ಗಣೇಶ ಮೂರ್ತಿ ಪ್ರತಿಷ್ಠಾಪನಾ 8ನೇ ವರ್ಷಿಕೋತ್ಸವ ಸಮಾರಂಭವನ್ನು ಉದ್ಘಾಟಿಸಿ ಕಾರ್ಯಕ್ರಮದ ದಿವ್ಯ ಸಾನಿದ್ಯ ವಹಿಸಿ ಮಾತನಾಡುತ್ತಿದ್ದ ಅವರು ವಿದ್ಯಾನಗರ ಬಡಾವಣೆಯ ಯುವಕರು ಬಹಳೇ ಒಗ್ಗಟ್ಟು ಹೊಂದಿದವರು ಪ್ರೀತಿ ಪ್ರೇಮದಿಂದ ಎಲ್ಲರೂ ನಮ್ಮರೆಂಬ ಭಾವನೆ ಅವರಲ್ಲಿದೆ ಕೂಡಿ ಸೇರಿದರೆ ದಡ ಸೇರಲು ಸಾದ್ಯವೆಂಬುದು ಅರಿವು ಅವರಲ್ಲಿದೆ ಅವರು ಮಾಡುವ ಮಾಡುತ್ತಾ ಸಾಗಿದ ಸೇವಾ ಕಾರ್ಯದಿಂದಲೇ ಅರ್ಥವಾಗುತ್ತದೆ ಎಂದರು. ಒಗ್ಗಟ್ಟು ಅನ್ನುವ ಪದ ಎಲ್ಲರಿಗೂ ಬಡುವದಿಲ್ಲಾ ಅದಕ್ಕೆ ಒಂದು ಶಕ್ತಿಬೇಕೆಂದರು. ನಮ್ಮ ದೇಶದವರು ಪುಣ್ಯವಂತರು ದುಡಿಮೆಯೇ ಜೊತೆಗೆ ಊಟೋಪಚಾರ ಮಾಡುತ್ತಾ ಸಾಗಿದ್ದಾರೆ ಆದರೆ ವಿದೇಶಿಗರು ದುಡಿಯದೇ ಅನ್ನಸಿಗುತ್ತಿಲ್ಲಾವೆಂದು ಅರ್ಥೈಸಿದ ಶ್ರೀಗಳು ದೇಶ ಸಂಸ್ಕೃತಿ, ಹಾಗೂ ವಿದೇಶಿ ಸಂಸ್ಕೃತಿ ವ್ಯತ್ಯಾಸವಿವರಿಸಿ ಸನಾತನ ಧರ್ಮ ಉದ್ದಾರವಾಗಲೆಂಬುದನ್ನು ಶಿವಾಜಿ ಮಹಾರಾಜರು ಮಾಡಿ ತೋರಿಸಿದರು ಅಂತಹ ಸಂಸ್ಕಾರ ಎಲ್ಲರಲ್ಲಿ ಬರಲಿ ದೀಪ ಹಚ್ಚುವ ಕೈಗಳು ಹೆಚ್ಚಾಗಲಿ ಆದರೆ ಬೆಂಕಿ ಹಚ್ಚುವ ಕೈಗಳು ಸಮಾಜಕ್ಕೆ ಬೇಡಾ ನನ್ನೂರು, ನನ್ನವರು ಅನ್ನುವಂತಹ ಅಭಿಮಾನ ಎಲ್ಲರಲ್ಲಿ ಬರಲಿ ಎಂದರು.

ಇನ್ನೋರ್ವ ಕಾರ್ಯಕ್ರಮದಲ್ಲಿ ಮುಖ್ಯವಕ್ತಾರರಾಗಿ ಆಗಮಿಸಿದ ಖ್ಯಾತ ಮಲ್ಲಕಂಬ ಪರಿಣಿತ ಶಿಕ್ಷಕ ಅಮೋಘ ಭಾರತ ಅವರು ಮಾತನಾಡಿ ತಾಯಿ ಮಕ್ಕಳಿಗೆ ಮೊದಲೇ ಚಿಕ್ಕವರಿರುವಾಗಲೇ ಹಾಡಿ ಹರಿಸಿ ಹಾಡುಗಳಲ್ಲಿಯೇ ಅರ್ಥೈಸುವಂತಹ




ವಿಚಾರಗಳನ್ನು ವ್ಯಕ್ತಪಡಿಸುತ್ತಾ ರಾಮಾಯಣ, ಮಹಾಭಾರತ ಅಂತಹ ಕಥೆಗಳನ್ನು ಹೇಳಿ ನಮ್ಮ ಸಂಸ್ಕೃತಿಯನ್ನು ಅನುಸರಿಸಲಿಕ್ಕೆ ತೋರಿಸುತ್ತಾ ಸಾಗಿದ್ದರು ಆದರೆ ಇಂದಿನ ದಿನಮಾನದಲ್ಲಿ ನಾವು ವಿದೇಶಿ ಸಂಸ್ಕಾರದತ್ತ ವಾಲುತ್ತಾ ಸಾಗಿದುದ್ದನ್ನು ನೋಡಿದರೆ ವಿಚಿತ್ರ ಸಂಗತಿಯಾಗಿ ಪರಿಣಮಿಸಲಿಕ್ಕೆ ಹತ್ತಿದೆ ಎಂದು ವಿಷಾದಿಸಿದ ಅವರು ಹಿಂದಿನ ಕಾಲದಲ್ಲಿ ಭೂತಾಯಿಯ ಪೂಜೆಯೊಂದಿಗೆ ಎಲ್ಲ ಕೆಲಸ ಕಾರ್ಯಗಳನ್ನು ಮಾಡುತ್ತಾ ಸಾಗಿದ್ದರು ಅಂತಹದನ್ನು ಲಕ್ಷೀಸಿದ ಬಾಲ ಗಂಗಾಧರ ತಿಲಕರು ಸ್ವಾತಂತ್ರ್ಯೋತ್ಸವ ಕಾರ್ಯಕ್ಕೆ ಅನುಕೂಲವಾಗಲೆಂದು ಉದ್ದೇಶ ಹೊತ್ತು ಗಣೇಶ ಉತ್ಸವವನ್ನು ಹಾಗೂ ಶಿವಾಜಿ ಮಹಾರಾಜರಂತಹ ಉತ್ಸವಗಳನ್ನು ಹೊರ ತಂದು ಒಗ್ಗಟ್ಟೆಂಬುದನ್ನು ಭಹಿರಂಗ ಪ್ರದರ್ಶಿಸಿ ಬ್ರೀಟಿಷರ ವಿರೂದ್ದ ಹೋರಾಟ ನಡೆಸಿ ತೋರಿಸಿಕೊಟ್ಟಂತಹ ತಿಲಕರ ಮಹತ್ವದ ಕಾರ್ಯ ಸಂಸ್ಕಾರಯುತವಾದ ಬಧುಕೇ ಇದು ನಡೆಯಲು ಕಾರಣವಾಯಿತೆಂದು ಹೇಳಿದ ಅಮೋಘ ಭಾರತ ಅವರು ಯುಗಾಧಿ ಹಬ್ಬ, ನಾಗರ ಪಂಚಮಿ, ಈ ಎಲ್ಲ ಹಬ್ಬ ಹರಿದಿನಗಳಿಗೆ ಸನಾತನ ಧರ್ಮ ಒಂದೊಂದು ಅರ್ಥ ಸೂಚಿಸುತ್ತಾ ಸಾಗಿದೆ ಈ ಎಲ್ಲ ಹಬ್ಬಗಳನ್ನು ಮಾಡುವದು ಮಣ್ಣಿನಿಂದಲೇ ಅವು ಆದರ್ಶತನವನ್ನು ಕೊಟ್ಟು ಹೋಗುತ್ತವೆ ಎಂದು ದಸರಾ ದೀಪಾವಳಿ ಹಬ್ಬಗಳ ಅಂತರ 22 ದಿವಸಗಳು ಭಾಕಿ ಇರುತ್ತದೆ ಇದಕ್ಕೆ ಕಾರಣ ರಾಮಾಯಣ ರಾಮನು ರಾವಣನನ್ನು ಸಂಹಾರ ಮಾಡಿದಂತಹ ಅಂತರದ ದಿನವನ್ನು ಸೂಚಿಸುತ್ತದೆ ಎಂದ ಅವರು ವಿದ್ಯಾನಗರ ಬಡಾವಣೆಯ ಯುವಕ ಮಂಡಳಿಯವರು ಗಜಾನನನ್ನು ಪ್ರತಿಷ್ಠಾಪಿಸಿರುವದು ಏಕತೆ ಎಂಬುದು ತೋರಿಸುತ್ತಿರುವದು ಎದ್ದು ಕಾಣುತ್ತಲಿದೆ ಎಂದರು.

ವೇದಿಕೆಯ ಮೇಲೆ ಭಾಜಪ ಮಾಜಿ ಜಿಲ್ಲಾ ಅಧ್ಯಕ್ಷ ಆರ್.ಎಸ್.ಪಾಟೀಲ(ಕೂಚಬಾಳ) ಅವರು ಉಪಸ್ಥಿತರಿದ್ದರು.

ಕುಮಾರಿ ಗೌರಿ ಹಜೇರಿ ಅವರು ಭರತನಾಟ್ಯ ಪ್ರದರ್ಶಿಸಿ ಮೆಚ್ಚುಗೆ ವ್ಯಕ್ತಪಡೆದರು.

ಇದೇ ಸಮಯದಲ್ಲಿ ಶ್ರೀಗಳಿಗೆ ಅಥಿತಿಗಳಿಗೆ ಹಾಗೂ ಗೌರಿ ಹಜೇರಿ ಅವರಿಗೆ ಸನ್ಮಾನಿಸಿ ಗೌರವಿಸಲಾಯಿತು.

ಈ ಸಮಯದಲ್ಲಿ ಜಿ.ಜಿ.ಯರನಾಳ, ಸಾಹೇಬಗೌಡ ಯಾಳಗಿ, ಶರಣಪ್ಪ ಸಜ್ಜನ, ಅಶೋಕ ಸಜ್ಜನ, ಶಿವು ದೇಸಾಯಿ, ಸುಭಾಸ ಮೂಕೀಹಾಳ, ಶಿಕ್ಷಕ ಪತ್ತಾರ ಅವರನ್ನೊಳಗೊಂಡು ವಿದ್ಯಾನಗರ ಬಡಾವಣೆಯ ಹಿರಿಯರು, ಗಣ್ಯಮಾನ್ಯರು, ಹಾಗೂ ಮಾತೆಯರು ಪಾಲ್ಗೊಂಡಿದ್ದರು.

ಸಮರ್ಥ ಸಜ್ಜನ ಸ್ವಾಗತಿಸಿ ನಿರೂಪಿಸಿ ವಂದಿಸಿದರು.

# 11 ಸಾವಿರ ಕರಿಗಡಬು ಚಿನ್ನಿ ಸಕ್ಕರಿ ಸವಿದ ಭಕ್ತ ಸಮೂಹ

**ತಾಳಿಕೋಟೆ,** ಶ್ರೀ ಗ್ರಾಮದೇವತಾ ಗಜಾನನ ಉತ್ಸವ ಯುವಕ ಮಂಡಳಿ(ರಾಜವಾಡೆ ಚಾ ಸಾಮ್ರಾಟ) ಮೂರ್ತಿ ಪ್ರತಿಷ್ಠಾಪನಾ ಈ ಸಮಿತಿಯವರು ಗ್ರಾಮದೇವತಾ ಮಂದಿರದ ಆವರಣದಲ್ಲಿ ಪ್ರತಿಷ್ಠಾಪಿಸಲಾದ ಗಣೇಶ ಉತ್ಸವ ಕುರಿತು ಶುಕ್ರವಾರರಂದು ಗ್ರಾಮದೇವತಾ ಮಂದಿರದ ಆವರಣದಲ್ಲಿ ಮಹಾ ಪ್ರಸಾದ ವ್ಯವಸ್ಥೆ ಮಾಡಿ ಭಕ್ತ ಸಮೂಹಕ್ಕೆ ಉಣಬಡಿಸುವ ಕಾರ್ಯ ಮಾಡಿ ಭಕ್ತಿಭಾವದತ್ತ ಕೊಂಡೊಯ್ದರು.



ಈ ಪ್ರಸಾದ ವ್ಯವಸ್ಥೆ ಕುರಿತು ಗಜಾನನ ಮಂಡಳಿಯವರು ಶ್ರೀ ಖಾಸ್ಗತೇಶ್ವರ ಮಠದ ಸಿದ್ದಲಿಂಗಶ್ರೀಗಳಿಗೆ ಅಹ್ವಾನಿಸಿ ತಮ್ಮ 16ನೇ ವರ್ಷದ ಗಜಾನನ ಉತ್ಸವ ಮಹಾ ಪ್ರಸಾದ ವ್ಯವಸ್ಥೆಗೆ ಚಾಲನೆ ನೀಡಿಸಿ ಭಕ್ತರಿಗಾಗಿ ಪ್ರಸಾದದ ವ್ಯವಸ್ಥೆ ಮಾಡಲಾಗಿದ್ದ ಕ-ರಿಗಡಬು ಚಿನ್ನಿ ಸಕ್ಕರಿ ಹಾಗೂ ಫಲಾವು ಈ ಎಲ್ಲ ವ್ಯವಸ್ಥೆಗೆ ಚಾಲನೆ ನೀಡಿಸಿ ಭಕ್ತಿ ಭಾವ ಮೇರೆದಿದ್ದೇನು ಕಡಿಮೇನಿಲ್ಲಾ. ಪ್ರಸಾದದ ವ್ಯವಸ್ಥೆಗೆ ಚಾಲನೆ ನೀಡಿದ ಶ್ರೀ ಖಾಸ್ಗತೇಶ್ವರ ಮಠದ ಬಾಲ ಶಿವಯೋಗಿ ಶ್ರೀ ಸಿದ್ದಲಿಂಗ ದೇವರು ಮಾತನಾಡಿ 16 ನೇ ವರ್ಷದವರೆಗೂ ಇಲ್ಲಿಯ ಗಜಾನನ ಮಂಡಳಿಯವರು ಒಗ್ಗಟ್ಟು ಏಕತೆ ಎಂಬ ಭಾವನೆ ಮೂಡಿಸುತ್ತಾ ಸಾಗಿದ್ದಾರೆ ಈ ಕಾರಣದಿಂದಲೇ ಈ ಉತ್ಸವ 16ನೇ ವರ್ಷಕ್ಕೆ ಪಾದಾರ್ಪಣೆ ಮಾಡಲು ಅನುಕೂಲವಾಗಿದೆ ಎಂದರು. ಏನೇ ಇರಲಿ ಯುವಕರಲ್ಲಿ ಒಗ್ಗಟ್ಟಿನ ಭಲವೆಂಬುದಿರಲಿ ಒಂದೇ ತಾಯಿಯ ಮಕ್ಕಳೆಂದು ಅಥ-ರ್ೈಸಿಕೊಂಡು ಸಹೋದರ ಭಾವನೆಯನ್ನು ಮೂಡಿಸಿಕೊಂಡು ನಾವೆಲ್ಲರೂ ಒಂದೇ ತಾಯಿ ಮಕ್ಕಳೆಂದು ಅರ್ಥೈಸಿಕೊಂಡು ನಡೆಯಬೇಕು ಹುಟ್ಟು ಸಾವಿನ ನಡುವೆ ನಾವು ಮಾಡಿದ ಎಲ್ಲ ಸೇವಾ ಕಾರ್ಯಗಳಾಗಲಿ ಜನ ಹಿತ ಕಾರ್ಯಗಳಾಗಲಿ ಬೆಳಕಿಗೆ ಬರಬೇಕಾದರೆ ನಾವೆಲ್ಲರೂ ಎಲ್ಲರೊಂದಿಗೆ ಸಹಕಾರ ಮನೋಭಾವನೆಯೊಂದಿಗೆ ನಡೆದರೆ ಸಾದ್ಯವಾಗಲಿದೆ ಒಬ್ಬರಿಗೊಬ್ಬರು ಅನುವು ತನವು ಎಂಬುದು ಹಿಂದಿನ ಹಿರಿಯರ ಮಾತಿನಂತೆ ಹೇಳುತ್ತಾ ಕೇಳುತ್ತಾ ಸಾಗಬೇಕು ಇದರಿಂದ ಒಂದೇ ಕುಟುಂಭದ ಭಾವನೆ ಬರಲಿದೆ ಅಂತಹ ಕಾರ್ಯವನ್ನು ಬಾಲಗಂಗಾಧರ ತಿಲಕ ಅವರು ಮಾಡಿ ತೋರಿಸಿದ್ದರಿಂದಲೇ ಗಣೇಶೋತ್ಸವ ಎಂಬುದು ಮೇರಗು ತರುತ್ತಾ ಸಾಗಿದೆ ಆ ಕಾರ್ಯ ಒಂದು ಭಕ್ತಿದಾಯಕವಾಗಿ ಈ ಹಿಂದಿನಂತೆ ಮುಂದೆ ಸಾಗಲಿ ಎಂದು ಶ್ರೀಗಳು ಶುಭ ಕೋರಿದರು.

ಅನ್ನ ಸಂತರ್ಪಣೆ ಕಾರ್ಯಕ್ಕೆ ಶ್ರೀಗಳು ಚಾಲನೆ ನೀಡಿದ ನಂತರ ಗ್ರಾಮದೇವತಾ ಗಜಾನನ ಮಂಡಳಿಯವರು ಸುಮಾರು 11 ಸಾವಿರಕ್ಕೂ ಮೇಲ್ಪಟ್ಟು ಕ-ರಿಗಡಬು ಚಿನ್ನಿ ಸಕ್ಕರೆಯನ್ನು ಹಾಗೂ ಫಲಾವುವನ್ನು ಮಾಡಿ ಭಕ್ತ ಸಮೂಹಕ್ಕೆ ಆಮಂತ್ರಿಸಿ ಪ್ರಸಾದದ ವ್ಯವಸ್ಥೆ ಕಲ್ಪಿಸಿದುದ್ದನ್ನು ನೋಡಿದರೆ ಸುಮಾರು 3 ಸಾವಿರಕ್ಕೂ ಮೇಲ್ಪಟ್ಟು ಭಕ್ತರು ಕರಿಗಡಬು ಚಿನ್ನಿ ಸಕ್ಕರೆ ಫಲಾವು ಸವಿದು ಈ ಯುವಕ ಮಂಡಳಿಯ ಸೇವಾ ಕಾರ್ಯದ ಕುರಿತು ಗುಣಗಾನ ಮಾಡಿದರು.

ಹಿರಿಯ ಪತ್ರಕರ್ತರಾದ ಜಿ.ಟಿ.ಘೋರ್ಪಡೆ ಅವರು ಮಾತನಾಡಿದರು.

ಈ ಕಾರ್ಯಕ್ರಮದ ನೇತೃತ್ವವನ್ನು ಸಾತ್ವಿಕ ಕುಲಕರ್ಣಿ, ಸತ್ಯರ್ಥ ಕುಲಕರ್ಣಿ, ಅನೀಲ ಬಡಿಗೇರ, ಬಸವರಾಜ ಪಾಟೀಲ, ಆಕಾಶ ಆಲ್ಯಾಳ, ಶಿವು ಪಾಟೀಲ, ಮಾರುತಿ ಕಾಸೇದ, ಮಯಾಂಕಾ ಶಿಂಧೆ, ಶಿವನಗೌಡ ಪಾಟೀಲ, ಮಲ್ಲಿಕಾರ್ಜುನ ಅಂಚೆಸೂರ, ಗೌಡು ಭುಸೇಟ್ಟಿ, ಸಂಗಮೇಶ ಮದರಕಲ್ಲ, ಕಾಶಿನಾಥ ಮೈಲೇಶ್ವರ, ರಾಜು ಯಾಳವಾರ, ಕಿಟ್ಟು ಬಡಿಗೇರ, ವಿರೇಶ ಬಾಗೇವಾಡಿ, ರಣಜಿತ್‌ಸಿಂಹ್ ಘೋರ್ಪಡೆ, ಪ್ರಶಾಂತ ಮೈಲೇಶ್ವರ, ಸಂಜಯ ಮೈಲೇಶ್ವರ, ವಿಜಯಸಿಂಹ್ ಘೋರ್ಪಡೆ, ಮೊದಲಾದವರು ಉಪಸ್ಥಿತರಿದ್ದರು.

# ಮಾದರಿ ಗ್ರಾಮ ಪಂಚಾಯತ್- ಶಾಲೆ- ಪ್ರಾಥಮಿಕ ಆರೋಗ್ಯ ಕೇಂದ್ರ ನಿರ್ಮಾಣ: ಡಾ.ದಿಲೀಷ್ ಶಶಿ



**ಕಾರವಾರ,** : ಉತ್ತರ ಕನ್ನಡ ಜಿಲ್ಲೆಯಲ್ಲಿ ಜಿಲ್ಲಾ ಪಂಚಾಯತ್ ಮೂಲಕ ಗ್ರಾಮ ಪಂಚಾಯತ್, ಶಾಲೆ, ಅಂಗನವಾಡಿ ಮತ್ತು ಪ್ರಾಥಮಿಕ ಆರೋಗ್ಯ ಕೇಂದ್ರವನ್ನು ಮಾದರಿ ಕೇಂದ್ರಗಳನ್ನಾಗಿ ರೂಪಿಸುವ ಗುರಿಯನ್ನು ಹೊಂದಲಾಗಿದೆ ಎಂದು ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಡಾ.ದಿಲೀಷ್ ಶಶಿ ತಿಳಿಸಿದರು.

ಅವರು ಶನಿವಾರ ಜಿಲ್ಲಾ ಪಂಚಾಯತ್‌ನಲ್ಲಿ ನಡೆದ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದರು.

ಜಿಲ್ಲೆಯಲ್ಲಿ ಪ್ರಸ್ತುತ ಇರುವ ಗ್ರಾಮ ಪಂಚಾಯತ್, ಶಾಲೆ ಅಂಗನವಾಡಿ ಮತ್ತು ಪ್ರಾಥಮಿಕ ಆರೋಗ್ಯ ಕೇಂದ್ರಗಳ ನಿರ್ವಹಣೆಗೆ ಈಗಾಗಲೇ ಸರ್ಕಾರದ ರೂಪಿಸಿರುವ ಎಲ್ಲಾ ಮಾರ್ಗಸೂಚಿಗಳನ್ನು ತಪ್ಪದೇ ಪಾಲಿಸಿಕೊಂಡು ಮತ್ತು ಲಭ್ಯವಿರುವ ಸೌಕರ್ಯಗಳನ್ನು ಬಳಸಿಕೊಂಡು ಸಾರ್ವಜನಿಕರಿಗೆ ಉತ್ತಮ ಸೇವೆ ಒದಗಿಸುವ ಮಾದರಿ ಕೇಂದ್ರಗಳನ್ನಾಗಿ ರೂಪಿಸುವ ಗುರಿಯನ್ನು ಹೊಂದಲಾಗಿದೆ ಎಂದರು.

ಹೆಚ್ಚಿನ ಸೌಕರ್ಯಗಳು ಇಲ್ಲ ಹಾಗೂ ಸಿಬ್ಬಂದಿಯ ಕೊರತೆ ಇದೆ ಎನ್ನುವುದು ಅಭಿವೃದ್ಧಿ ಕಾರ್ಯಗಳಿಗೆ ತೊಡಕಾಗಬಾರದು ಇರುವ ಸೌಲಭ್ಯಗಳನ್ನೆ ಬಳಸಿಕೊಂಡು ಸಾರ್ವಜನಿಕರಿಗೆ ಉತ್ತಮ ಸೇವೆಯನ್ನು ನೀಡಬೇಕು, ಸಾರ್ವಜನಿಕರ ಸೇವೆಗಳನ್ನು ಒದಗಿಸುವ ಬಗ್ಗೆ ಅಗತ್ಯವಿರುವ ದಾಖಲೆಗಳ ಕುರಿತ ಚೆಕ್ ಲಿಸ್ಟ್ ತಯಾರಿಸಿಕೊಂಡು ಅದರ ಪ್ರಕಾರ ಕಾರ್ಯನಿರ್ವಹಿಸಿ, ಸಾರ್ವಜನಿಕರ ಕುಂದುಕೊರತೆಗಳಿಗೆ ತಕ್ಷಣ ಸ್ಪಂದಿಸುವ ಗುಣವನ್ನು ಪ್ರತಿಯೊಬ್ಬ ಅಧಿಕಾರಿ ಸಿಬ್ಬಂದಿಗಳು ರೂಡಿಸಿಕೊಂಡು, ಜನಸ್ನೇಹಿಯಾಗಿ ಕಾರ್ಯನಿರ್ವಹಿಸುವಂತೆ ಸೂಚನೆ ನೀಡಲಾಗಿದೆ ಎಂದರು.

ಜಿಲ್ಲೆಯಲ್ಲಿ ಈ ಹಿಂದೆ ಕಾರ್ಯನಿರ್ವಹಿಸಿದ ಅಧಿಕಾರಿಗಳು ಉತ್ತಮವಾಗಿ ಕಾರ್ಯನಿರ್ವಹಿಸಿದ್ದು, ಅವರು ರೂಪಿಸಿರುವ ಯೋಜನೆಗಳನ್ನು ಮುಂದುವರೆಸಿಕೊಂಡು ಹೋಗುವುದರ ಜತೆ ಪ್ರಮುಖ ಇಲಾಖೆಗಳಲ್ಲಿ ಮಾದರಿ ಯೋಜನೆಗಳನ್ನು ಅನುಷ್ಠಾನ ಮಾಡುವ ಮೂಲಕ ಜಿಲ್ಲೆಯಲ್ಲಿ ವಿನೂತನ ರೀತಿಯಲ್ಲಿ ಅಭಿವೃದ್ಧಿ ಕಾರ್ಯಗಳನ್ನು ರೂಪಿಸುವ ಯೋಜನೆಯಿದೆ ಎಂದರು.

ಜಿಲ್ಲಾ ಪಂಚಾಯತ್ ವತಿಯಿಂದ ಕೈಗೊಳ್ಳಲಾಗುತ್ತಿರುವ ಜಲ ಜೀವನ್ ಮಿಷನ್, ಸ್ವಚ್ಛ ಭಾರತ್ ಮಿಷನ್, ನರೇಗಾ ಯೋಜನೆ ಸೇರಿದಂತೆ ಎಲ್ಲಾ ಯೋಜನೆಗಳನ್ನು ಅತ್ಯಂತ ಸಮರ್ಪಕವಾಗಿ ಅನುಷ್ಠಾನಗೊಳಿಸುವ ನಿಟ್ಟಿನಲ್ಲಿ ಕಾರ್ಯ ನಿರ್ವಹಿಸಲಾಗುವುದು ಎಂದರು.

ಈ ಸಂದರ್ಭದಲ್ಲಿ ಜಿಲ್ಲಾ ಪಂಚಾಯತ್ ಉಪ ಕಾರ್ಯದರ್ಶಿ ಅಲ್ಲಾಬಕ್ಷ್, ಪ್ರಕಾಶ ಹಾಲಮ್ಮನವರ, ಮುಖ್ಯ ಯೋಜನಾಧಿಕಾರಿ ಸೋಮಶೇಖರ ಮೆಸ್ತಾ, ಮುಖ್ಯ ಲೆಕ್ಕಾಧಿಕಾರಿ ಆನಂದಸಾ ಹಬೀಬ್, ಯೋಜನಾ ನಿರ್ದೇಶಕ ಕರೀಂ ಅಸದಿ ಮತ್ತಿತರರು ಇದ್ದರು.

# ರೈತರು ಕೃಷಿಯೊಂದಿಗೆ ಆಹಾರ ಸಂಸ್ಕರಣಾ ಉದ್ದಿಮೆ ಆರಂಭಿಸಿ-ಡಾ.ಆನಂದ.ಕೆ

**ವಿಜಯಪುರ** : ಕೃಷಿ ಚಟುವಟಿಕೆಯೊಂದಿಗೆ ರೈತರು ಆಹಾರ ಸಂಸ್ಕರಣಾ ಉದ್ದಿಮೆ ಆರಂಭಿಸಲು ಆಸಕ್ತಿ ವಹಿಸಬೇಕು ಎಂದು ಜಿಲ್ಲಾಧಿಕಾರಿ ಡಾ. ಆನಂದ.ಕೆ ಹೇಳಿದರು.




ಶುಕ್ರವಾರ ನಗರದ ಜಿಲ್ಲಾ ಪಂಚಾಯತ ಸಭಾಂಗಣದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ, ಕೃಷಿ ಇಲಾಖೆ, ಹಾಗೂ ಕೆಪೆಕ್ ಸಂಸ್ಥೆ ಬೆಂಗಳೂರು ಇವರ ಸಂಯುಕ್ತಾಶ್ರಯದಲ್ಲಿ ಪ್ರಧಾನ ಮಂತ್ರಿಗಳ ಕಿರು ಆಹಾರ ಸಂಸ್ಕರಣಾ ಉದ್ದಿಮೆಗಳ ನಿಯಮಬದ್ಧಗೊಳಿಸುವಿಕೆಯ ಯೋಜನೆ ಕುರಿತು ಜಿಲ್ಲಾ ಮಟ್ಟದ ಕಾರ್ಯಾಗಾರವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಜಿಲ್ಲೆಯಲ್ಲಿ ಸ್ವಸಹಾಯ ಗುಂಪು ಚಟುವಟಿ-ಕೆಗಳ ಕಾರ್ಯವ್ಯಾಪ್ತಿ ವಿಸ್ತರಿಸುವ ದೃಷ್ಟಿಯಿಂದ ಸಣ್ಣ ಉದ್ದಿಮೆ ಆಹಾರ ಸಂಸ್ಕರಣಾ ಘಟಕಗಳನ್ನು ಸ್ಥಾಪಿಸುವ ಮೂಲಕ ಸಿಗುವ ಸಾಲ-ಸೌಲಭ್ಯ ಪಡೆದುಕೊಂಡು ಪ್ರಗತಿ ಸಾಧಿಸುವಂತೆ ತಿಳಿಸಿದ ಅವರು, ಈ ಬಗ್ಗೆ ಸಂಬಂಧಿಸಿದ ಇಲಾಖೆಗಳು ಪೂರಕ ಮಾಹಿತಿ ಒದಗಿಸುವಂತೆ ಬ್ಯಾಂಕಗಳು ಅರ್ಹರಿಗೆ ಸಾಲ ಸೌಲಭ್ಯ ಒದಗಿಸಿ ಈ ಯೋಜನೆಯ ಲಾಭ ಅರ್ಹರಿಗೆ ತಲುಪಿಸುವಂತೆ ಅವರು ಹೇಳಿದರು. ಜಿಲ್ಲೆಯಲ್ಲಿ ದ್ರಾಕ್ಷಿ, ದಾಳಿಂಬೆ, ಲಿಂಬೆ, ಬಿಳಿಜೋಳ ಹಾಗೂ ವಾಣಿಜ್ಯ ಬೆಳೆಗಳು ಸೆರಿದಂತೆ ತೋಟಗಾರಿಕೆ ಬೆಳೆಗಳನ್ನು ಬೆಳೆಯಲಾಗುತ್ತದೆ. ರೈತರು ತಮ್ಮ ವ್ಯವಸಾಯದೊಂದಿಗೆ ಕಿರು ಆಹಾರ ಧಾನ್ಯ ಘಟಕಗಳ ಉದ್ದಿಮೆಗಳನ್ನು ಸ್ಥಾಪಿಸುವ ಮೂಲಕ ಉದ್ದಿಮೆದಾರರಾಗಿ ತಾವುಗಳು ಆರ್ಥಿಕವಾಗಿ ಸ್ವಾವಲಂಬನೆ ಸಾಧಿಸಿದ ಅಭಿವೃದ್ಧಿ ಹೊಂದಲು ಸಾಧ್ಯವಿದ್ದು, ಈ ಕುರಿತು ಚಿಂತನೆ ಅಗತ್ಯ ಎಂದು ಅವರು ಹೇಳಿದರು.

ಪ್ರಧಾನ ಮಂತ್ರಿಗಳ ಕಿರು ಆಹಾರ ಸಂಸ್ಕರಣಾ ಉದ್ದಿಮೆಗಳ ಔಪಚಾರೀಕರಣ ಯೋಜನೆ ಒಂದು ಉತ್ತಮ ಯೋಜನೆಯಾಗಿದೆ. ಫಲಾನುಭವಿಗಳಿಗೆ ಜಿಲ್ಲೆಯ ರೈತರು, ಸ್ವಸಹಾಯ ಗುಂಪುಗಳು, ವೈಯಕ್ತಿಕ ಉದ್ದಿಮೆದಾರರು, ಮಾಲಿಕತ್ವ ಸಂಸ್ಥೆಗಳು, ಪಾಲುದಾರಿಕೆ ಸಂಸ್ಥೆಗಳು, ಖಾಸಗಿ ಸಂಸ್ಥೆಗಳು, ರೈತ ಉತ್ಪಾದಕ ಸಂಸ್ಥೆಗಳು, ಸರ್ಕಾರೇತರ ಸಂಸ್ಥೆಗಳು ಈ ಯೋಜನೆಯ ಸದುಪಯೋಗ ಪಡಿಸಿಕೊಳ್ಳಬೇಕು ಇದರಿಂದ ರೈತರಿಗೂ, ಬ್ಯಾಂಕುಗಳಿಗೂ ಹಾಗೂ ಮಹಿಳಾ ಸಂಘಗಳಿಗೂ ಅನುಕೂಲವಾಗಲಿದೆ ಎಂದು ಅವರು ತಿಳಿಸಿದರು.

ಬೆಂಗಳೂರಿನ ಕೆಪೆಕ್ ಸಂಸ್ಥೆಯ ವ್ಯವಸ್ಥಾಪಕ ನಿರ್ದೇಶಕರಾದ ಸಿ.ಎನ್.ಶಿವಪ್ರಕಾಶ ಮಾತನಾಡಿ 18 ವರ್ಷ ಮೇಲ್ಪಟ್ಟವರು ಈ ಯೋಜನೆಯ ವ್ಯಾಪ್ತಿಗೆ ಬರಲಿದ್ದಾರೆ. ಈ ಯೋಜನೆಗೆ ಯಾವುದೇ ವಿದ್ಯಾರ್ಹತೆ ಅವಶ್ಯಕತೆ ಇಲ್ಲ. ತಾವು ಬೆಳೆದ ಬೆಳೆಗಳನ್ನು ಸಂಸ್ಕರಿಸಿ ವಿವಿಧ ಬಗೆಯ ಉತ್ಪನ್ನಗಳನ್ನು ತಯಾರಿಸಿ ಒಂದು ಉದ್ದಿಮೆಯಾಗಿ ಮಾರ್ಪಡಿಸಿದಲ್ಲಿ ಹೆಚ್ಚು ಲಾಭ ಪಡೆಯಬಹುದು. ರಾಜ್ಯದ ಪ್ರತಿಯೊಂದು ಜಿಲ್ಲೆಗಳಲ್ಲಿ ಸಿರಿಧಾನ್ಯ, ಎಣ್ಣೆಗಾಣ, ಬೆಲ್ಲದ ಘಟಕಗಳು, ಮಸಾಲೆ ಪದಾರ್ಥಗಳಂತಹ 3 ರಿಂದ 4 ಕಿರು ಆಹಾರ ಸಂಸ್ಕರಣೆಗಳ ಘಟಕಗಳನ್ನು ಸ್ಥಾಪಿಸುವುದರಿಂದ ಉದ್ಯೋಗ ಲಭಿಸಲಿವೆ. ಆದ್ದರಿಂದ, ಪ್ರಧಾನ ಮಂತ್ರಿಗಳ ಕಿರು ಆಹಾರ ಸಂಸ್ಕರಣಾ ಉದ್ದಿಮೆಗಳ ಔಪಚಾ-ರೀಕರಣ ಯೋಜನೆ ಕುರಿತು ಜನರಿಗೆ ಜಾಗೃತಿ ಮೂಡಿಸಬೇಕು ಹಾಗೂ ಪ್ರತಿಯೊಬ್ಬರಿಗೂ ಈ ಯೋಜನೆ ಮಾಹಿತಿ ಲಭಿಸುವಂತಾಗಬೇಕು ಎಂದು ಅವರು ಹೇಳಿದರು.

ಕೃಷಿ ಮಹಾವಿದ್ಯಾಲಯದ ಆಹಾರ ವಿಜ್ಞಾನ ಮತ್ತು ಪೋಷಣೆ ವಿಭಾಗದ ಮುಖ್ಯಸ್ಥರು ಹಾಗೂ ಪ್ರಾಧ್ಯಾಪಕರಾದ ಡಾ. ಕಾಶಿಬಾಯಿ ಖ್ಯಾಡಗಿ ಮಾತನಾಡಿ, ಜಿಲ್ಲೆಯ ಇಂಡಿ ತಾಲೂಕಿನಾದ್ಯಂತ ರೈತರು ಹೆಚ್ಚು ಲಿಂಬೆ ಕೃಷಿ ಚಟುವಟಿ-ಕೆಗಳಲ್ಲಿ ತೊಡಗಿಕೊಂಡಿದ್ದು ಲಿಂಬೆಯಿಂದ ಪರ್ಯಾಯವಾಗಿ ಜ್ಯೂಸ್, ಉಪ್ಪಿನಕಾಯಿ ಉಪಉತ್ಪದಾನೆಗಳಲ್ಲಿ ತೊಡಗಿದಲ್ಲಿ ಹೆಚ್ಚು ಆದಾಯ ಮೂಲವಾಗಬಲ್ಲದು ಲಿಂಬೆ ಸಿಪ್ಪೆಗಳಲ್ಲಿ ವೈಜ್ಞಾನಿಕವಾಗಿ ಔಷಧೀಯ ಗುಣ ಹೊಂದಿದ್ದು ಅದರಿಂದ ವಿವಿಧ ಬಗೆಯ ಕ್ಯಾಂಡಿ, ಸ್ವೀಟ ಕ್ಯಾಂಡಿ ಹಾಗೂ ಪೌಡರಗಳನ್ನು ತಯಾರಿಸಬಹುದಾಗಿದೆ. ಇದರಿಂದ ಪೌಷ್ಟಿಕತೆ ಹೆಚ್ಚುತ್ತದೆ ಹಾಗೂ ಮೌಲ್ಯವರ್ಧಿತ ಗುಣಗಳನ್ನು ಹೊಂದಿದೆ. ಯಾವುದೇ ಉತ್ಪನ್ನಗಳನ್ನು ತಯಾ-ರಿಸುವಲ್ಲಿ ಸ್ವಚ್ಚತೆಗೆ ಹೆಚ್ಚು ಗಮನ ನೀಡಬೇಕು ಎಂದು ಅವರು ತಿಳಿಸಿದರು.

ಕೃಷಿ ಇಲಾಖೆಯ ಜಂಟಿ ನಿರ್ದೇಶಕರಾದ ಶಿವನಗೌಡ ಪಾಟೀಲ ಮಾತನಾಡಿ ಪ್ರಧಾನ ಮಂತ್ರಿಗಳ ಕಿರು ಆಹಾರ ಸಂಸ್ಕರಣಾ ಉದ್ದಿಮೆಗಳ ಔಪಚಾರೀಕರಣ ಯೋಜನೆ ಸ್ವಂತ ಉದ್ಯೋಗ ಹೊಂದಲು ಬಹಳ ಅನುಕೂಲವಾಗಲಿದೆ. ರೈತರು ಬೆಳೆದಂತಹ ವಸ್ತುಗಳನ್ನು ಮೌಲ್ಯವರ್ಧನೆ ಮಾಡಿ ಮಾರಾಟ ಮಾಡಿದಲ್ಲಿ ಒಳ್ಳೆಯ ಲಾಭ ಸಿಗಲಿದೆ. ರೈತರು, ಮಹಿಳಾ ಸ್ವಸಹಾಯ ಗುಂಪುಗಳು, ಉದ್ದಿಮೆದಾರರು ಹೆಚ್ಚು ಪಾಲ್ಗೊಳ್ಳುವುದರೊಂದಿಗೆ ಈ ಯೋಜನೆಯ ಲಾಭವನ್ನು ಪಡೆದುಕೊಳ್ಳುವಂತೆ ಅವರು ತಿಳಿಸಿದರು.

ಕಾರ್ಯಕ್ರಮದ ಮುಂಚೆ ಜಿಲ್ಲಾಧಿಕಾರಿ ಡಾ.ಆನಂದ.ಕೆ ಅವರು ವಿವಿಧ ಬಗೆಯ ಆಹಾರ ಉತ್ಪನ್ನಗಳ ಮಳಿಗೆಯನ್ನು ವೀಕ್ಷಿಸಿದರು. ಕಾರ್ಯಾಗಾರದಲ್ಲಿ ಕೆಪೆಕ್ ಸಂಸ್ಥೆ ಸಮಾಲೋಚಕರಾದ ವಿಘ್ನೇಶ ಗಾಯತೊಂಡೆ ಯೋಜನೆಗಳ ಕುರಿತು ಮಾಹಿತಿ ನೀಡಿದರು. ಜಿಲ್ಲಾ ಅಗ್ರಣೀಯ ಬ್ಯಾಂಕ ವ್ಯವಸ್ಥಾಪಕರಾದ ಬಿ.ಸಿದ್ದಯ್ಯ ಯೋಜನೆಯಡಿ ಸಾಲ ಸೌಲಭ್ಯಗಳ ಅವಕಾಶಗಳ ಕುರಿತು ವಿವರಣೆ ನೀಡಿದರು. ಉಪ ಕೃಷಿ ನಿರ್ದೇಶಕ ಚಂದ್ರಕಾಂತ ಪವಾರ ಸ್ವಾಗತಿಸಿದರು.

ಉಪ ಕೃಷಿ ನಿರ್ದೇಶಕರಾದ ಶರಣಗೌಡ ರಂಗನಗೌಡ ವಂದಿಸಿದರು. ಜಿಲ್ಲೆಯ ವಿವಿಧ ಗ್ರಾಮಗಳ ಉದ್ದಿಮೆದಾರರು, ಸ್ವಸಹಾಯ ಗುಂಪಿನ ಸದಸ್ಯರು, ಕೃಷಿ ಇಲಾಖೆಯ ಅಧಿಕಾ-ರಿಗಳು ಹಾಗೂ ಇತರರು ಉಪಸ್ಥಿತರಿದ್ದರು.

# ಅಧಿಕಾರಕ್ಕಾಗಿ ಮಾತ್ರ ರಾಜಕಾರಣ ಮಾಡಬಾರದು: ಸಚಿವ ತಿಮ್ಮಾಪುರ




**ಮುಧೋಳ:** ಕವಿಚಕ್ರವರ್ತಿ ರನ್ನ ಕ್ರೀಡಾಂಗಣ 1989. ರಲ್ಲಿ ಪ್ರಥಮ ಬಾರಿ ಶಾಸಕನಾಗಿದ್ದಾಗ ಮಂಜೂರಾಗಿತ್ತು. 20.ವರ್ಷದ ಸಾರ್ವಜನಿಕರ ಬೇಡಿಯಾಗಿದ್ದ ವಾಕಿಂಗ್ ಟ್ರ್ಯಾಕ್ ಹಾಗು ಬ್ಯಾಡ್ಮಿಂಟನ್ ಒಳಾಂಗಣ ಕ್ರೀಡಾಂಗಣ ಮುಂದಿನ ತಿಂಗಳು ಪೂರ್ಣಗೊಂಡು ಇದರಿಂದ ವಾಯುವಿಹಾರ ಮತ್ತು ಕ್ರೀಡಾ ಪಟುಗಳಿಗೆ ಅನುಕೂಲ ಆಗಲಿದೆ. ಎಂದು ಅಬಕಾರಿ ಸಚಿವ ಆರ್.ಬಿ. ತಿಮ್ಮಾಪುರ ಹೇಳಿದರು.

ಶನಿವಾರ ಕವಿಚಕ್ರವರ್ತಿ ರನ್ನ ಕ್ರೀಡಾಂಗಣದಲ್ಲಿ ಯುವ ಸಬಲಿಕರಣ ಮತ್ತು ಕ್ರೀಡಾ ಇಲಾಖೆ ಬಾಗಲಕೋಟೆ, ಜಿಲ್ಲಾ ಮತ್ತು ತಾಲೂಕ ಆಡಳಿತ, ತಾ.ಪಂ. ಸಹಯೋಗದಲ್ಲಿ ಕ್ರೀಡಾ ಇಲಾಖೆ ವತಿಯಿಂದ ಮಂಜೂರಾದ ಅಂ-ದಾಜು ರೂ.22.84. ಲಕ್ಷ ವೆಚ್ಚದಲ್ಲಿ ಪುರುಷ ಹಾಗು ಮಹಿಳೆಯರಿಗಾಗಿ ಹೊರಾಂಗಣ ಜಿಮ್ ಸಾಮಗ್ರಿಗಳನ್ನು ಅಳವಡಿಸುವ ಕಾಮಗಾರಿಗೆ ಭೂಮಿ ಪೂಜೆ ಸಲ್ಲಿಸಿ ಅವರು ಮಾತನಾಡಿದರು. ಕೇವಲ ಅಧಿಕಾರಗೋಸ್ಕರ ರಾಜಕಾರಣ ಮಾಡದೇ, ನ್ಯಾಯಯುತ, ಕ್ಷೇತ್ರ ಅಭಿವೃದ್ಧಿಪರವಾದ ರಾಜಕಾರಣ ಇರಬೇಕು, ಅಭಿವೃದ್ಧಿ ವಿಷಯದಲ್ಲಿ ಯಾರಿಗೂ ಅನ್ಯಾಯವಾಗದಂತೆಯೂ ನೋಡಿಕೊಳ್ಳಬೇಕಾಗುತ್ತದೆ ಎಂದರು.

ತಾಲೂಕಿನ ಲೋಕಾಪೂರ ಪಟ್ಟಣದಲ್ಲೂ ಕ್ರೀಡಾಂಗಣ-ಕ್ಕಾಗಿ 5-6.ಎಕರೆ ಜಮೀನು, 2.ಮಾಧ್ಯಮಿಕ ಶಾಲೆಗಳ ಮಂಜೂರಾತಿ ಸಹ ದೊರೆತಿದೆ. ಈ ಬಾರಿ ತಾಲೂಕಿನ ಬಹುತೇಕ ಕೆರೆಗಳು ತುಂಬಿವೆ, ನಗರದ 5.ಎಕರೆ ಹೊಂದಿರುವ ಸಿದ್ರಾಮೇಶ್ವ ಕೆರೆ ಅಭಿವೃದ್ಧಿ ಶೀಘ್ರದಲ್ಲಿ ಕೈಗೊಳ್ಳಲಾಗುವದು, ನೂತನ ಬೈ-ಪಾಸ್ ರಸ್ತೆ ಕಾಮಗಾರಿ ಭರದಿಂದ ಸಾಗಿದೆ ಶೀಘ್ರದಲ್ಲಿ ಉದ್ಘಾಟನೆ ಮಾಡಲಾಗುವದು ತಿಮ್ಮಾಪುರ ಹೇಳಿದರು.

ನಗರಸಭೆ ಅಧ್ಯಕ್ಷೆ ಸುನಂದಾ ತೇಲಿ, ಎಪಿಎಂಸಿ. ಅಧ್ಯಕ್ಷ ಸಂಗಪ್ಪ ಇಮ್ಮನ್ನವರ, ಪಕ್ಷದ ಅಧ್ಯಕ್ಷ ಸದುಗೌಡ ಪಾಟೀಲ, ನಗರ ಅಧ್ಯಕ್ಷ ರಾಘು ಮೊಕಾಶಿ, ಲೋಕಾಪುರ ಮಂಡಳ ಅಧ್ಯಕ್ಷ ಅಶೋಕ ಕಿವಡಿ, ಮುಖಂಡ ಡಾ.ಶಿವಾನಂದ ಉದಪುಡಿ, ದಾನೇಶ ತಡಸಲೂರ, ಉದಯ ಫಡತಾರೆ, ಡಾ.ವ್ಹಿ.ಎನ್. ನಾಯಕ, ಡಾ.ಮಸಳಿ, ಶಿವು ಮುಳ್ಳೂರ, ನಬಿ ಜಹಾಗಿರದಾರ, ಎಂ.ಆರ್. ಅಮ್ಮಲಜೇರಿ, ಅಪ್ಪು ಘೊರ್ಪಡೆ, ವಾಯ್.ಎಂ. ಚಾಂದ, ಕೃಷ್ಣಾ ಮಾದರ, ರಾಜಮಾ ಬೇಪಾರಿ, ಸುನಂದಾ ಕಾಂಬಳೆ, ಶ್ರೀಮತಿ ಭಾರತಿ, ಪೌರಾಯುಕ್ತ ಗೋಪಾಲ ಕಾಸೆ, ತಾಪಂ. ಕಾ.ನಿ. ಅಧಿಕಾರಿ ಮಲ್ಲಿಕಾರ್ಜುನ ಅಂಬಿಗೇರ, ಎಇಇ. ಚನ್ನಬಸವ ಮಾಚನೂರ, ಕ್ರೀಡಾ ಇಲಾಖಾಧಿಕಾರಿ ಜಿ.ಸಿ. ಡೋಗನೂರ, ಶಂಕರಲಿಂಗ ಗೋಗಿ ಇತರರಿದ್ದರು.

***

# ಸೌಹಾರ್ದತೆಯ ಪ್ರತಿಕವೇ ಗಣೇಶ ಹಬ್ಬ: ಶಿವರಂಜನ ಬೋಳನ್ನವರ



**ಬೈಲಹೊಂಗಲ-** ದೇಶದ ಐಕ್ಯತೆ ಹಾಗೂ ಸೌಹಾರ್ದತೆಗೆ ಗಣೇಶ ಹಬ್ಬ ಪ್ರತೀಕವಾಗಿದೆ ಎಂದು ಚಿತ್ರ ನಟ ಶಿವರಂಜನಗೂಳ್ಳನವರು ಹೇಳಿದರು.

ನಗರದ ಕುಲಕರ್ಣಿ ಗಲ್ಲಿಯಲ್ಲಿ ವರಸಿದ್ಧಿ ವಿನಾಯಕ ಗೆಳೆಯರ ಬಳಗದ ವತಿಯಿಂದ ಆಯೋಜಿಸಲಾಗಿದ್ದ ಮಹಾಪೂಜೆಯಲ್ಲಿ ಭಾಗವಹಿಸಿ ಸನ್ಮಾನ ಸ್ವೀಕರಿಸಿ ಅವರು ಮಾತನಾಡಿ ಭಾರತ ದೇಶವು ಭಾವೈಕ್ಯತೆಯ ನಾಡು, ವಿಭಿನ್ನ ಬಗೆಯ ಆಚಾರ ವಿಚಾರಗಳ ಬೀಡು, ವಿವಿಧತೆಯಲ್ಲಿ ಏಕತೆಯನ್ನು ಸಾರುವಲ್ಲಿ ಗಣೇಶ ಹಬ್ಬವು ಒಂದಾಗಿದೆ.

ಕಳೆದ 5 ವರ್ಷಗಳಿಂದ ವರಸಿದ್ಧಿ ವಿನಾಯಕ ಗೆಳೆಯರ ಬಳಗದವರು ಲೋಕ ಕಲ್ಯಾಣಾರ್ಥವಾಗಿ ವಿವಿಧ ಬಗೆಯ ಧಾರ್ಮಿಕ ಕಾರ್ಯಕ್ರಮಗಳ ಆಯೋಜನೆ ಮಾಡುವುದರ 4ನೇ ದಿನದಂದು ಮಹಾಪೂಜೆ ಹಾಗೂ ಅನ್ನ ಸಂತರ್ಪಣೆ ಮಾಡುತ್ತಾ ಬಂದಿರುವುದು ವಿಶೇಷವಾಗಿದೆ ಎಂದು ಬನ್ನಿಸಿದರು.

ಸಾನಿಧ್ಯ ವಹಿಸಿದ್ದ ವೇ.ಮೂ. ಮಹಾಂತಯ್ಯ ತೆಗ್ಗಿನಮಠ ಶಾಸ್ತ್ರಿಗಳು ಮಾತನಾಡಿ

ಕಳೆದ 5 ವರ್ಷಗಳಿಂದ ಈ ಭಾಗದ ಎಲ್ಲ ವರ್ಗದ ಜನರನ್ನೊಳಗೊಂಡು ಸೌಹಾರ್ದತೆ ಯನ್ನು ಸಾರುವ ನಿಟ್ಟಿನಲ್ಲಿ ವರಸಿದ್ಧಿ ವಿನಾಯಕ ಗೆಳೆಯರ ಬಳಗವು ಕಾರ್ಯ ನಿರ್ವಹಿಸುತ್ತಾ ಬಂದಿದ್ದು ಶ್ಲಾಘನೀಯ ಎಂದರು.

ವೇ.ಮೂ. ವೇ.ಮೂ. ಸದಾಶಿವಯ್ಯ ಪತ್ರಿಮಠ ಶಾಸ್ತ್ರಿಗಳು ಪೂಜಾ ಕೈಂಕರ್ಯ ನೆರವೇರಿಸಿದರು.

ಈ ಸಂದರ್ಭದಲ್ಲಿ ವೇ. ಮೂ.ಮೃತ್ಯುಂ-ಜಯ ಯರಗುದ್ದಿಮಠ, ಮುಖಂಡರಾದ ಪಾಂಡಪ್ಪ ಇಂಚಲ, ಸೋಮಪ್ಪ ವಾಲಿ, ಶಿವಪ್ಪ ಲಿಂಬೆನ್ನವರ, ಬಸಪ್ಪ ಹುಲ್ಲಪ್ಪನವರ,ಸೋಮನಾಥ ಸೊಪ್ಪಿಮಠ,ವಿಠ್ಠಲ ಹಂಪಹೊಳಿ,ಪತ್ರಕರ್ತ ಈಶ್ವರ ಶಿಲ್ಲೇದಾರ, ಕುತುಬು ರುದ್ರಾಪುರ,ಮಹಾಂತೇಶ ಪಾಟೀಲ,ಈರಯ್ಯ ತೆಗ್ಗಿನಮಠ ಶ್ರೀಕಾರ ತೆಗ್ಗಿನಮಠ,ವಿಶ್ವನಾಥ ಹೊಸಮಠ,ಬಸವರಾಜ ಗೀರನವರ,ಆನಂದ ಲಿಂಬೆನ್ನವರ,ಶಂಕರ ಪಿರಗೋಜಿ,ವಿನೋದ ಗಿರೆನ್ನವರ,ಬಸವರಾಜ ಬೇವಿನಕೊಪ್ಪ,ಸಚಿನ ಬೆಳಗಾವಿ,ಶ್ರೀಶೈಲ ಹುಬ್ಬಳ್ಳಿ ವರಸಿದ್ಧಿ ವಿನಾಯಕ ಗೆಳೆಯರ ಬಳಗ ಸೇರಿದಂತೆ ಹಳೇಊರು ಭಾಗದ ಅಪಾರ ಜನತೆ ವರಸಿದ್ಧಿ ವಿನಾಯಕನ ದರುಶನ ಪಡೆದು ಪ್ರಸಾದ ಸವಿದು ಧನ್ಯತಾ ಭಾವ ಹೊಂದಿದರು.

# ಕೃಷಿಯಲ್ಲಿ ಹಲವಾರು ತಾಂತ್ರಿಕತೆಗಳು ಬರುತ್ತಿರುವುದರಿಂದ ಅವುಗಳ ಜ್ಞಾನ ಅವಶ್ಯಕ- ಕುಲಪತಿ ಡಾ.ಪಿ.ಎಲ್ ಪಾಟೀಲ

**ಕೊಪ್ಪಳ** ಕೃಷಿ ಪರಿಕರ ಮಾರಾಟಗಳಲ್ಲಿ ದಿನನಿತ್ಯ ಹಲವಾರು ತಾಂತ್ರಿಕತೆಗಳು ಬರುತ್ತಿರುವುದರಿಂದ ಅವುಗಳನ್ನು ಹೇಗೆ ಬಳಸಬೇಕು ಎಂಬ ಜ್ಞಾನವನ್ನು ತಿಳಿದುಕೊಂಡು ಅದನ್ನ ರೈತರಿಗೆ ತಲುಪಿಸಬೇಕು ಎಂದು ಧಾರವಾಡ ಕೃಷಿ ವಿಶ್ವವಿದ್ಯಾಲಯದ ಕುಲಪತಿ ಡಾ. ಪಿ.ಎಲ್. ಪಾಟೀಲ ಹೇಳಿದರು.

ಅವರು ಶುಕ್ರವಾರ ಕೊಪ್ಪಳ ಜಿಲ್ಲಾ ಪಂಚಾಯತ ಜೆ. ಎಚ್. ಪಟೇಲ್ ಸಭಾಂಗಣದಲ್ಲಿ ಮ್ಯಾನೇಜ ಹೈದರಾಬಾದ. ಸಮೇತಿ (ಉತ್ತರ). ಕೃಷಿ ವಿಶ್ವವಿದ್ಯಾಲಯ ಧಾರವಾಡ ಮತ್ತು ರಾಯಚೂರ. ಕೃಷಿ ಇಲಾಖೆ ಕೊಪ್ಪಳ. ಕೃಷಿ ತಂತ್ರಜ್ಞರ ಸಂಸ್ಥೆ ಕೊಪ್ಪಳ ಮತ್ತು ಜಿಲ್ಲಾ ಕೃಷಿ ತರಬೇತಿ ಕೇಂದ್ರ ಗಂಗಾವತಿ ಇವರ ಸಂಯುಕ್ತಾಶ್ರಯದಲ್ಲಿ ಕೃಷಿ ಪರಿಕರ ಮಾರಾಟಗಾರರಿಗೆ ಕೃಷಿ ವಿಸ್ತರಣಾ ಸೇವೆಗಳ ಡಿಪ್ಲೊಮಾ ಕೋರ್ಸ್‌ನ ಉದ್ಘಾಟನಾ ಸಮಾರಂಭವನ್ನು ನೆರವೇರಿಸಿ ಮಾತನಾಡಿದರು.



ಕೃಷಿ ಪರಿಕರಗಳ ಮಾರಾಟಗಾರರು ತಮಗೆ ನೀಡುವ 48 ವಾರಗಳ ತರಬೇತಿಯಲ್ಲಿ ಎಲ್ಲರೂ ಶಿಸ್ತು. ಸಂಯಮ ಜೊತೆಗೆ ಉತ್ಸಾಹದಿಂದ ಕಲಿಯಬೇಕು. ಇಂದು ವೈಜ್ಞಾನಿಕ ಕೃಷಿಯ ಕಾಲ ಆಗಿರುವುದರಿಂದ ಕೃಷಿ ಪರಿಕರಗಳ ಬಗ್ಗೆ ಮಾರಾಟ ಮಾಡಿದರೆ ಸಾಲದು ಅವುಗಳ ಬಗ್ಗೆ ಸಮಗ್ರವಾಗಿ ತಿಳಿದುಕೊಳ್ಳಬೇಕಿದೆ. ಎಲ್ಲಾ ಪ್ರದೇಶದಲ್ಲಿ ಹವಾಮಾನ ಒಂದೇ ತರಹ ಇರುವುದಿಲ್ಲ. ನಮ್ಮ ಸುತ್ತಮುತ್ತಲಿನ ಪರಿಸರ ಮತ್ತು ಜೀವಿಗಳ ಬಗ್ಗೆ ಜ್ಞಾನ ಹೊಂದಿರುವುದು ಬಹಳ ಮುಖ್ಯ ಹಾಗಾಗಿ ನಿಮ್ಮ ಮಕ್ಕಳಿಗೆ ಜೀವ ವಿಜ್ಞಾನದ ಬಗ್ಗೆ ತಿಳುವಳಿಕೆ ನೀಡಿ ಎಂದರು.

ಕೃಷಿಯನ್ನು ವೈಜಾನಿಕವಾಗಿ ಮಾಡಿದಾಗ ಮಾತ್ರ ಉದ್ದಿಮೆಯನ್ನಾಗಿ ಮಾಡಬಹುದು. ಸೋಲಾರ ಅಳವಡಿಸಿಕೊಳ್ಳಲು ರೈತ-ರಿಗೆ ತಿಳಿಸಬೇಕು. ಮಣ್ಣು ಮತ್ತು ನೀರಿನ ಸಂರಕ್ಷಣೆಗೆ ಒತ್ತು ನೀಡಬೇಕು. ಕನಿಷ್ಠ 2 ವರ್ಷಗಳಿಗೊಮ್ಮೆ ಮಣ್ಣಿನ ಪರೀಕ್ಷೆಯನ್ನು ರೈತರು ಮಾಡಿಸಬೇಕು. ಹತ್ತಿ. ತೊಗರಿ. ಸೂರ್ಯಕಾಂತಿ ಕಟಗಿಗಳನ್ನು ಸುಡದೆ ಅವುಗಳನ್ನು ಕೊಳೆಸಿ ಗೊಬ್ಬರ ಮಾಡವುದರ ಜೊತೆಗೆ ಸಮಗ್ರ ಕೃಷಿಗೆ ರೈತರು ಒತ್ತು ನೀಡಬೇಕೆಂದು ಹೇಳಿದರು.

ಕೊಪ್ಪಳ ಜಿಲ್ಲೆಯಲ್ಲಿ ಹಲವಾರು ಪ್ರಗತಿಪರ ರೈತರಿದ್ದು ಇಲ್ಲಿ ಹಲವಾರು ರೀತಿಯ ಬೆಳೆಗಳನ್ನು ಬೆಳೆಯಲಾಗುತ್ತದೆ. ನಿಸರ್ಗದ ಸಂಪನ್ಮೂಲಗಳಾದ ಮಣ್ಣು ಮತ್ತು ನೀರಿನ ರಕ್ಷಣೆ ಮಾಡಬೇಕು. 48 ದಿನಗಳ ಕಡಿಮೆ ಅವಧಿಯ ತರಬೇತಿಯಲ್ಲಿ ಕೃಷಿ. ತೋಟಗಾರಿಕೆ. ಹೈನುಗಾರಿಕೆ ಬಗ್ಗೆ ಹೆಚ್ಚಿನ ಜ್ಞಾನ ನೀಡುತ್ತಿರುವುದರಿಂದ ಎಲ್ಲದರ ಬಗ್ಗೆ ಸಮಗ್ರವಾಗಿ ತಿಳಿದುಕೊಳ್ಳಬೇಕೆಂದರು.

ಸಮೇತಿ -ಉತ್ತರ ಕೃಷಿ ವಿಶ್ವವಿದ್ಯಾಲಯ ಧಾರವಾಡದ ಪ್ರಾಧ್ಯಾಪಕರು ಹಾಗೂ ರಾಜ್ಯ ನೋಡಲ್ ಅಧಿಕಾರಿಗಳಾದ ಡಾ. ಎಸ್. ಎನ್. ಜಾಧವ್ ಮಾತನಾಡಿ 48 ವಾರಗಳ ತರಬೇತಿಯಲ್ಲಿ 8 ನೇ ವಾರ 15 ನೇ ವಾರ ಹೀಗೆ ಮೂರು ಪರೀಕ್ಷೆಗಳನ್ನು ನಡೆಸಿ 48 ವಾರಗಳ ನಂತರ ಅಂತಿಮ ಪರೀಕ್ಷೆ ನಡೆಸಲಾಗುತ್ತದೆ. ತರಬೇತಿ ಅವಧಿಯಲ್ಲಿ ಚೆನ್ನಾಗಿ ಕಲಿಯಬೇಕು ಕಲಿಕೆ ಎಂಬುದು ನಿರಂತರ. ತರಬೇತಿ ಮುಗಿಸಿದವರಿಗೆ ಪ್ರಮಾಣ ಪತ್ರಗಳನ್ನು ನೀಡಲಾಗುತ್ತದೆ ಅವುಗಳಿಂದ ತಾವು ಕೃಷಿ ಪರಿಕರ ಅಂಗಡಿಗಳನ್ನು ತೆರೆಯಬಹುದು. ಇದರಿಂದ ಗ್ರಾಮೀಣ ಭಾಗದಲ್ಲಿ ಕೃಷಿ ಪರಿಕರಗಳ ಅಂಗಡಿಗಳು ಹೆಚ್ಚಾದಂತೆ ರೈತರಿಗೂ ಅನುಕೂಲವಾಗಲಿದೆ ಎಂದು ಹೇಳಿದರು.

ಇದೇ ಸಂದರ್ಭದಲ್ಲಿ ಸೆಪ್ಟೆಂಬರ್ 13 ರಿಂದ 16 ರವರೆಗೆ ಧಾರವಾಡ ಕೃಷಿ ವಿಶ್ವವಿದ್ಯಾಲಯದಲ್ಲಿ ನಡೆಯಲಿರುವ ಕೃಷಿ ಮೇಳ-2025 ರ ಕರಪತ್ರಗಳನ್ನು ಬಿಡುಗಡೆಗೊಳಿಸಲಾಯಿತು.

ಕಾರ್ಯಕ್ರಮದಲ್ಲಿ ಜಿಲ್ಲಾಧಿಕಾರಿ ಸುರೇಶ ಬಿ. ಇಟ್ನಾಳ. ಧಾರವಾಡ ಕೃಷಿ ವಿಶ್ವವಿದ್ಯಾಲಯದ ವಿಸ್ತರಣಾ ನಿರ್ದೇಶಕರಾದ ಡಾ. ಎಮ್. ವಿ. ಮಂಜುನಾಥ. ಕೊಪ್ಪಳ ಕೃಷಿ ಇಲಾಖೆಯ ಜಂಟಿ ನಿರ್ದೇಶಕರಾದ ರುದ್ರೇಶಪ್ಪ ಟಿ.ಎಸ್. ಕೃಷಿ ತಂತ್ರಜ್ಞರ ಸಂಸ್ಥೆ ಕೊಪ್ಪಳ ಉಪಾಧ್ಯಕ್ಷರಾದ ವೀರಣ್ಣ ಕಮತರ ಸೇರಿದಂತೆ ಇತರೆ ಕೃಷಿ ಇಲಾಖೆಯ ಅಧಿಕಾರಿ ಮತ್ತು ಸಿಬ್ಬಂದಿಗಳು ಹಾಗೂ ಡಿಪ್ಲೊಮಾ ತರಬೇತಿ ಪಡೆಯುತ್ತಿರುವ ಅಭ್ಯರ್ಥಿಗಳು ಉಪಸ್ಥಿತರಿದ್ದರು.

# ಆಂತರಿಕ ದೂರು ಸಮಿತಿ ಆದೇಶದ ಪ್ರತಿ ಸಲ್ಲಿಸಲು ಮನವಿ

**ಬೆಳಗಾವಿ,** ಕೆಲಸದ ಸ್ಥಳದಲ್ಲಿ ಮಹಿಳೆಯರ ಮೇಲೆ ಲೈಂಗಿಕ ಕಿರುಕುಳ (ತಡೆಗಟ್ಟುವಿಕೆ, ನಿಷೇಧಿಸುವಿಕೆ ಮತ್ತು ನಿವಾರಿಸುವಿಕೆ) ಕಾಯ್ದೆ 2013 ರ ಅನುಷ್ಠಾನಕ್ಕಾಗಿ ಸರ್ವೋಚ್ಚ ನ್ಯಾಯಾಲಯ ನೀಡಿರುವ ನಿರ್ದೇಶನಗಳಂತೆ ಕಾಯ್ದೆ ಅನ್ವಯಿಸುವ 10 ಮತ್ತು 10 ಕ್ಕಿಂತ ಹೆಚ್ಚಿನ ಕಾರ್ಮಿಕರು ಸಂಸ್ಥೆಯಲ್ಲಿ ಕೆಲಸ ನಿರ್ವಹಿಸುತ್ತಿದ್ದರೆ ಅಂತಹ ಸಂಸ್ಥೆಗಳಲ್ಲಿ ಪ್ರತಿ ಸಂಸ್ಥೆಯ ಮಾಲೀಕರು ತಮ್ಮ ಸಂಸ್ಥೆಯಲ್ಲಿ ಆಂತರಿಕ ದೂರು ಸಮಿತಿಯನ್ನು ರಚಿಸುವುದು ಕಡ್ಡಾಯವಾಗಿದೆ.

ಜಿಲ್ಲೆಯಲ್ಲಿ ಹಲವು ಸಂಸ್ಥೆಗಳು ಇದುವರೆಗೂ ಆಂತರಿಕ ಸಮಿತಿಯನ್ನು ರಚಿಸದೇ ಮತ್ತು ರಚಿಸಿರುವ ಬಗ್ಗೆ ಮಾಹಿತಿ ನೀಡದಿರುವುದು ಕಂಡುಬಂದಿದ್ದು, ಸರ್ವೋಚ್ಚ ನ್ಯಾಯಾಲಯವು ನೀಡಿರುವ ನಿರ್ದೇಶನದಂತೆ ಆಂತರಿಕ ಸಮಿತಿಯನ್ನು ರಚಿಸದ ಎಲ್ಲಾ ಸಂಸ್ಥೆಗಳು ಈ ಕೂಡಲೇ ಆಂತರಿಕ ದೂರು ಸಮಿತಿಯನ್ನು ರಚನೆ ಮಾಡಿ, ಸಮಿತಿ ರಚಿಸಿದ ಆದೇಶದ ಪ್ರತಿಯನ್ನು ಬೆಳಗಾವಿಯ ಜಿಲ್ಲಾಧಿಕಾರಿಗಳ ಕಚೇರಿಗೆ ಕೂಡಲೇ ಸಲ್ಲಿಸಬೇಕು. ಜೊತೆಗೆ ಕಾರ್ಮಿಕ ಅಧಿಕಾರಿಗಳ ಕಛೇರಿ, ಕಾರ್ಮಿಕ ಭವನ, ಐ.ಟಿ.ಐ. ಆವರಣ, ಮಜಗಾಂವ ರಸ್ತೆ, ಉದ್ಯಮಬಾಗ್, ಬೆಳಗಾವಿ-590008 ಕಛೇರಿಗೆ ಸಲ್ಲಿಸಬೇಕೆಂದು ಎಂದು ಜಿಲ್ಲಾ ಕಾರ್ಮಿಕ ಅಧಿಕಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಕೇಂದ್ರ ವಾರ್ತಾ ಇಲಾಖೆ ಬೆಳಗಾವಿ: ಮಹಾತ್ಮ ಗಾಂಧೀ ಸೇವಾ ಪ್ರಶಸ್ತಿ ಕರ್ನಾಟಕ ಆಯ್ಕೆಗೆ ಅರ್ಜಿ ಆಹ್ವಾನ

**ಬೆಂಗಳೂರು** : ರಾಜ್ಯ ಸರ್ಕಾರವು ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯಲ್ಲಿ ಸ್ಥಾಪಿಸಿರುವ ಐದು ಲಕ್ಷ ರೂಪಾಯಿ ನಗದನ್ನು ಒಳಗೊಂಡ ಮಹಾತ್ಮಗಾಂಧೀ ಸೇವಾ ಪ್ರಶಸ್ತಿ-ಕರ್ನಾಟಕ ಗೆ ಪ್ರಸಕ್ತ ಸಾಲಿಗೆ ಅರ್ಹ ಸಾಧಕರನ್ನು ಅಥವಾ ಸಂಘ ಸಂಸ್ಥೆಗಳನ್ನು ಆಯ್ಕೆ ಮಾಡಲು ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ಸಾರ್ವಜನಿಕ ಜೀವನದಲ್ಲಿ ಮಹಾತ್ಮಗಾಂಧೀಜಿಯವರ ಆದ-ರ್ಶಗಳನ್ನು ಅಳವಡಿಸಿಕೊಂಡು ಜೀವನ ನಡೆಸುತ್ತಿರುವ ಕನಿಷ್ಠ 60 ವರ್ಷಗಳಾಗಿರುವ ವ್ಯಕ್ತಿಗಳು ಅಥ-ವಾ 25 ವರ್ಷಗಳು ತುಂಬಿರುವ ಸೇವಾ ಸಂಸ್ಥೆಗಳನ್ನು ಈ ಪ್ರಶಸ್ತಿಗೆ ಪರಿಗಣಿಸಲಾಗುವುದು.

ಮಹಾತ್ಮ ಗಾಂಧೀಜಿಯವರು ಪ್ರಚುರುಪಡಿಸಿದ ಜನಪರ ಕಾರ್ಯಕ್ರಮಗಳಾದ "ಅಸ್ಪೃಶ್ಯತೆ ನಿವಾರಣೆ". "ಅಹಿಂಸೆ", "ಮಹಿಳಾ ಸಬಲೀಕರಣ", "ಗ್ರಾಮೀಣ ನೈರ್ಮಲ್ಯ", "ಮದ್ಯಪಾನ ವಿರೋಧಿ ನೀತಿ", "ಖಾದಿ ಮತ್ತು ಸ್ವದೇಶಿವಸ್ತು ಬಳಕೆ", "ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದವರ ಏಳಿಗೆ", ಈ ಕ್ಷೇತ್ರಗಳಲ್ಲಿ ಸ್ವಯಂ ಪ್ರೇರಣೆಯಿಂದ ತೊಡಗಿರುವ ವ್ಯಕ್ತಿಗಳು ಅಥವಾ ಸಂಸ್ಥೆಗಳು ಈ ಪ್ರಶಸ್ತಿಗೆ ಅರ್ಜಿ ಸಲ್ಲಿಸಬಹುದು. ಸಂಘ ಸಂಸ್ಥೆಗಳು ಅಥವಾ ವ್ಯಕ್ತಿಗಳು ಶಿಫಾರಸ್ಸನ್ನು ಕೂಡ ಮಾಡಬಹುದಾಗಿದೆ.

ಅರ್ಜಿಗಳನ್ನು 2025 ನೇ ಸೆಪ್ಟೆಂಬರ್ 19 ರ ಒಳಗಾಗಿ ಆಯುಕ್ತರು, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ, ವಾರ್ತಾ ಸೌಧ. ನಂ. 17. ಭಗವಾನ್ ಮಹಾವೀರ ರಸ್ತೆ (ಇನ್ಫೆಂಟ್ರಿ ರಸ್ತೆ), ಬೆಂಗಳೂರು - 560 001 ಅಥವಾ ಇ - ಮೇಲ್ ವಿಳಾಸ ɔnformationdip-rawards@gmail.com ಹಾಗೂ ಖುದ್ದಾಗಿ ಇಲಾಖೆಗೆ ಕಳುಹಿಸಬಹುದಾಗಿದೆ ಎಂದು ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಆಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಭಾರತ ವಿಶ್ವದೆದುರು ತಲೆ ಎತ್ತಿ ನಿಲ್ಲುವಂತೆ ಮಾಡಿದ್ದು ರೈತರು: ಸಚಿವೆ ಲಕ್ಷ್ಮೀ ಹೆಬ್ಬಾಳಕರ್

# ಕಬ್ಬು ಬೆಳೆ ಕುರಿತ ವಿಚಾರ ಸಂಕಿರಣ

**ಬೆಳಗಾವಿ :** ಬ್ರಿಟೀಶರು ಬಿಟ್ಟು ಹೋಗುವಾಗ ಅತ್ಯಂತ ಧಯನೀಯ ಸ್ಥಿತಿಯಲ್ಲಿದ್ದ ದೇಶ ಇಂದು ವಿಶ್ವದ ಎದುರು ತಲೆ ಎತ್ತಿ ನಿಲ್ಲುವಂತೆ ಮಾಡಿದ್ದು ನಮ್ಮ ರೈತರು ಎಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಸಚಿವೆ ಲಕ್ಷ್ಮೀ ಹೆಬ್ಬಾಳಕರ್ ಹೇಳಿದ್ದಾರೆ.

ಬೆಳಗಾವಿಯಲ್ಲಿ ಶನಿವಾರ ನ್ಯೂಸ್ ಫರ್ಸ್ಟ್ ಕನ್ನಡ ವಾಹಿನಿ ಆಯೋಜಿಸಿದ್ದ ಕಬ್ಬು ಬೆಳೆಗಾರರ ವಿಚಾರಸಂಕಿರಣದಲ್ಲಿ ಅವರು ಮಾತನಾಡುತ್ತಿದ್ದರು. ಸ್ವತಂತ್ರ್ಯ ಸಿಗುವ ವೇಳೆ ದೇಶದಲ್ಲಿ ಕಿತ್ತು ತಿನ್ನುವ ಬಡತನವಿತ್ತು. ಬ್ರಿಟೀಶರು ನಮ್ಮದೇಶವನ್ನು, ನಮ್ಮ ಭೂಮಿಯನ್ನು ಹಾಳು ಮಾಡಿ ಹೋಗಿದ್ದರು. ಅಂತಹ ನೆಲದಲ್ಲಿ ಬಿತ್ತಿ, ಬೆಳೆದು ದೇಶವನ್ನು ಇಂದು ಈ ಸ್ಥಿತಿಗೆ ತಂದವರು ನಮ್ಮ ರೈತರು ಎಂದು ಅವರು ಹೇಳಿದರು.

ರೈತರಿಗೆ ವಾರದ ರಜೆ ಇಲ್ಲ. ನಿವೃತ್ತಿ ವೇತನವಿಲ್ಲ. ಸಮಾಜದ ನಿಜವಾದ ಚಿಂತಕರಾಗಿರುವ ಅವರು ತಮ್ಮ ಬೆವರು ಸುರಿಸಿ ದೇಶಕಟ್ಟುವವರು ಎಂದು ಲಕ್ಷ್ಮೀ ಹೆಬ್ಬಾಳಕರ್ ಪ್ರಶಂಸಿಸಿದರು.

ನ್ಯೂಸ್ ಫರ್ಸ್ಟ್ ಚಾನೆಲ್ ಸಾಮಾಜಿಕ ಬದ್ಧತೆಯಿಂದ ಇಂತಹ ಅತ್ಯಂತ ಅಗತ್ಯವಾದ ವಿಷಯದ ಕುರಿತು ವಿಚಾರಸಂಕಿರಣ ಆಯೋಜಿಸಿರುವುದಕ್ಕೆ ನಾನು ಅವರಿಗೆ



ಧನ್ಯವಾದಗಳನ್ನು ಸಲ್ಲಿಸುತ್ತೇನೆ. ಪ್ರಗತಿಪರ ರೈತರನ್ನು ಸೃಷ್ಟಿಸಲು ಇಂತಹ ವೇದಿಕೆ ನೆರವಾಗಲಿದೆ. ಬೆಳಗಾವಿ ಕಬ್ಬು ಬೆಳೆಯ ದೃಷ್ಟಿಯಿಂದ ಅತ್ಯಂತ ಪ್ರಮುಖವಾದ ಜಿಲ್ಲೆ, ಹಾಗಾಗಿಯೇ ಜಿಲ್ಲೆಯಲ್ಲಿ 28ಕ್ಕೂ ಹೆಚ್ಚು ಸಕ್ಕರೆ ಕಾರ್ಖಾನೆಗಳು ಕಾರ್ಯನಿರ್ವಹಿಸುತ್ತಿವೆ. ರೈತರು ಆಧುನಿಕ ತಂತ್ರಜ್ಞಾನ ಬಳಸಿಕೊಂಡು ಕಬ್ಬಿನ ಜೊತೆಗೆ ಉಪಬೆಳೆ ಬೆಳೆದು ತಮ್ಮ ಆರ್ಥಿಕ ಸ್ಥಿತಿಯನ್ನು ಸುಭದ್ರಗೊಳಿಸಲು ಮುಂದಾಗಬೇಕು ಎಂದು ಅವರು ಕರೆ ನೀಡಿದರು.

ಲೋಕೋಪಯೋಗಿ ಸಚಿವರೂ, ಬೆಳಗಾವಿ ಜಿಲ್ಲಾ ಉಸ್ತುವಾರಿ ಸಚಿವರೂ ಆಗಿರುವ ಸತೀಶ್ ಜಾರಕಿಹೊಳಿ ಕಾರ್ಯಕ್ರಮ ಉದ್ಘಾಟಿಸಿದರು. ನ್ಯೂಸ್ ಫರ್ಸ್ಟ್ ಸಿಇಒ ಎಸ್.ರವಿಕುಮಾರ, ಗೋದಾವರಿ ಶುಗರ್ಸ್ ಎಕ್ಸಿಕ್ಯೂಟಿವ್ ಡೈರೆಕ್ಟರ್ ಬಾಲಚಂದ್ರ ಭಕ್ಷಿ, ವಿಧಾನ ಪರಿಷತ್ ಸದಸ್ಯ ಚನ್ನರಾಜ ಹಟ್ಟಿಹೊಳಿ, ಕೃಷಿ ವಿಜ್ಞಾನಿಗಳು, ರೈತ ಮುಖಂಡರು ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು.

### ಗೋವಿಂದೇಗೌಡ್ರು- ಹೊರಟ್ಟಿಯವರು ಶಿಕ್ಷಣ ಕ್ಷೇತ್ರದಲ್ಲಿ ಕ್ರಾಂತಿ ಮಾಡಿದ್ದಾರೆ

# ಅಲ್ಪ ಸಂಖ್ಯಾತ ಬಡ ಮಕ್ಕಳಿಗೂ ಗುಣಮಟ್ಟದ ಶಿಕ್ಷಣ : ಶಾಸಕ ರಾಜು ಕಾಗೆ

**ಮೋಳೆ ;** ಗೋಂವಿಂದೇಗೌಡರು ಹಾಗೂ ಬಸವರಾಜ ಹೊರಟ್ಟಿ ಅವರು ಶಿಕ್ಷಣ ಸಚಿವರಾಗಿದ್ದ ಸಂದರ್ಭದಲ್ಲಿ ಶಿಕ್ಷಣ ಕ್ಷೇತ್ರದಲ್ಲಿ ಕ್ರಾಂತಿಯನ್ನೇ ಮಾಡಿದರು ಎಂದು ವಾಯುವ್ಯ ಕರ್ನಾಟಕ ರಸ್ತೆ ನಿಗಮದ ಅಧ್ಯಕ್ಷರು ಹಾಗೂ ಶಾಸಕ ರಾಜು ಕಾಗೆ ಹೇಳಿದರು.

ಅವರು ಶನಿವಾರ ಐನಾಪುರ ಪಟ್ಟಣದಲ್ಲಿ 12.15 ಕೋಟಿ ರೂ ವೆಚ್ಚದಲ್ಲಿ ಅಲ್ಪಸಂಖ್ಯಾತರ ಮುರಾರ್ಜಿ ದೇಸಾಯಿ ವಸತಿ ಶಾಲೆಯ ನೂತನ ಕಟ್ಟಡದ ಶಂಕುಸ್ಥಾಪನೆ ನೆರವೇರಿಸಿ ಅವರು ಮಾತನಾಡುತ್ತಿದ್ದರು. ಗೋಂದಿಗೇಗೌಡರು ಶಿಕ್ಷಣ ಸಚಿವರಾಗಿದ್ದ ಸಂದರ್ಭದಲ್ಲಿ ಏಕ ಕಾಲಕ್ಕೆ 1 ಲಕ್ಷ 20 ಸಾವಿರ ಶಿಕ್ಷಕರನ್ನು ನೇಮಕ ಮಾಡುವ ಮೂಲಕ ಕ್ರಾಂತಿಯನ್ನ ಮಾಡಿದರೆ, ಬಸವರಾಜ ಹೊರಟ್ಟಿಯವರು ಶಿಕ್ಷಣ ಸಚಿವರಾಗಿದ್ದಾಗ ರಾಜ್ಯದ ಮೂಲ ಮೂಲೆಗಳಿಗೆ ಸರಕಾರಿ ಫ್ರೌಢ ಶಾಲೆಗಳನ್ನು ಮಂಜೂರು ಮಾಡುವ ಮೂಲಕ ಶಿಕ್ಷಣ ಕ್ಷೇತ್ರದಲ್ಲಿ ಕ್ರಾಂತಿಯನ್ನೇ ಮಾಡಿದ್ದರು. ಅವರ ಈ ಧಿಟ್ಟ ನಿರ್ದಾರ ರಾಜ್ಯ ಅಷ್ಟೇ ಅಲ್ಲ, ಇಡೀ ದೇಶ ಮೆಚ್ಚುವಂತ ಕಾರ್ಯ ಮಾಡಿದ್ದಾರೆ. ಇದೊಂದು ಇತಿಹಾಸ ಎಂದರು. ಮಾಜಿ ಸಚಿವೆ ಲೀಲಾದೇವಿ



ಪ್ರಸಾದ ಅವರು ಅಥಣಿ ಶಾಸಕರಾಗಿದ್ದ ಸಂದರ್ಭದಲ್ಲಿ ಶಿವನೂರ ಗ್ರಾಮಕ್ಕೆ ಒಂದು ಫ್ರೌಢ ಶಾಲೆಯನ್ನು ಮಂಜೂರು ಮಾಡಿದ್ದಕ್ಕೆ ಅಥಣಿ ತಾಲೂಕಿಗೆ ಒಂದು ಫ್ರೌಢ ಶಾಲೆ ಮಂಜೂರು ಮಾಡಿಸಿದ್ದಾರೆ ಎಂದು ಎಲ್ಲ ಪತ್ರಿಕೆಗಳಲ್ಲಿ ಬಂತು. ನಾನು ಶಾಸಕನಾಗಿದ್ದ ಸಂದರ್ಭದಲ್ಲಿ ಬಸವರಾಜ ಹೊರಟ್ಟಿಯರು ನನ್ನ ಕ್ಷೇತ್ರಕ್ಕೆ 16 ಫ್ರೌಢ ಶಾಲೆಗಳನ್ನು ಮಂಜೂರು ಮಾಡಿದರು.ಆ ಇಬ್ಬರು ಮಹನೀಯರನ್ನು ನಾನು ಈಗಲೂ ನೆನೆಯುತ್ತೇನೆ ಎಂದರು. ಮಠಾಧೀಶರು ಹಾಗೂ ಖಾಸಗಿ ಶಿಕ್ಷಣ ಸಂಸ್ಥೆಯವರು ಆ ಸಂದರ್ಭದಲ್ಲಿ ಶಿಕ್ಷಣ ಸಂಸ್ಥೆಗಳನ್ನು ತೆರೆಯದೇ ಹೋಗಿದ್ದರೆ. ಶೇ 90 ರಷ್ಟು ಜನರು ಅನಕ್ಷರಸ್ಥರಾಗುತ್ತಿದ್ದರು. ಲಿಂಗಾಯತ ಮಠಾಧೀಶರುಗಳಾದ ಕೊಪ್ಪಳದ ಗವಿಸಿದ್ದೇಶ್ವರ ಶ್ರೀಗಳು, ತುಮಕೂರು ಸಿದ್ದಗಂಗಾ ಶ್ರೀಗಳು ಸೇರಿದಂತೆ ಅನೇಕ ಪೂಜ್ಯರು ಕೇವಲ ಧರ್ಮ ಪ್ರಚಾರವನ್ನು ಮಾಡದೇ, ಬದಲಾಗಿ ಉಚಿತ ಊಟ, ವಸತಿ ಕೊಟ್ಟು ಬಡ ಮಕ್ಕಳಿಗೆ ಉಚಿತ ಶಿಕ್ಷಣ ನೀಡಿರುವ ಫಲವಾಗಿ ಇಂದು ನಮ್ಮಂತ ಎಷ್ಟೋ ಜನರು ಸುಶೀಕ್ಷಿತರಾಗಿದ್ದಾರೆ ಎಂದರು.

ನಾವು ಈಗ ಸರಕಾರದ ವತಿಯಿಂದ ಎಲ್ಲ ಸೌಲಭ್ಯಗಳನ್ನು ಕೊಡುತ್ತಿದೆವೆ. ಐನಾಪುರ ಪಟ್ಟಣದಲ್ಲಿ ಮುರಾರ್ಜಿ ವಸತಿ ಶಾಲೆಯನ್ನು ಮಂಜೂರು ಮಾಡುವ ಮೂಲಕ ಇಂದು 12.15 ಕೋಟಿ ರೂ ವೆಚ್ಚ ಮಾಡಿ ಸುಸಜ್ಜಿತ ವಸತಿ ಶಾಲೆನ್ನು ನಿರ್ಮಿಸುತ್ತಿದ್ದೇವೆ. ಅಲ್ಪಸಂಖ್ಯಾತ ಬಡ ಮಕ್ಕಳು ಅದರ ಸದುಪಯೋಗ ಪಡೆದುಕೊಳ್ಳುವಂತೆ ಕರೆ ನೀಡಿದರು.

ಈ ವೇಳೆ ಪಟ್ಟಣ ಪಂಚಾಯತ್ ಸದಸ್ಯರಾದ ಪ್ರವೀಣ ಗಾಣಿಗೇರ, ಅರುಣ ಗಾಣಿಗೇರ, ಸಂಜಯ ಬಿರಡಿ, ಮುಖಂಡರಾದ ವಿನಾಯಕ ಬಾಗಡಿ,ಸುರೇಶ ಗಾಣಿಗೇರ, ನವೀಣ ಗಾಣಿಗೇರ, ಪ್ರಕಾಶ ಕೋರ್ಬು, ಸುನೀಲ ಅವಟಿ, ಡಾ.ಅರವಿಂದರಾವ್ ಕಾರ್ಚಿ, ರವೀಂದ್ರ ಬಣಜವಾಡ, ಪಾಯಪ್ಪ ಕುಡವಕ್ಕಲಗಿ,ಪ್ರಮೋದ ಲಿಂಬಿಕಾಯಿ,ಅನೀಲ ಸತ್ತಿ,ಇಸಾಕ ರಾವತ್, ಅಸ್ಫಕ ಮುಲ್ಲಾ, ಮೆಹಬೂಬ ಜಮಾದಾರ, ಅಪ್ಪಾಸಾಬ ಲಿಂಬಿಕಾಯಿ, ಗಜಾನನ ಪಾಟೀಲ,ಸುರೇಶ ಅಡಿಸೇರಿ, ಕುಮಾರ ಜಯಕರ, ಅಧಿಕಾರಿಗಳಾಧ ವೀರಣ್ಣ ವಾಲಿ, ಪ್ರಾಚಾರ್ಯ ಯಲ್ಲಪ್ಪ ಕೊಂಗಂಡಿ, ಗುತ್ತಿಗೆದಾರ ವಾಸುದೇವ ಸೇರಿದಂತೆ ಅನೇಕರು ಇದ್ದರು.

### ವಿದ್ಯಾರ್ಥಿಗಳ ಆತ್ಮ ಹತ್ಯೆ ತಡೆ, ಮಾನಸಿಕ ಆರೋಗ್ಯ ಕಾಳಜಿಗಾಗಿ ಜಿಲ್ಲಾ ಮಟ್ಟದ ಮೇಲ್ವಿಚಾರಣಾ ಸಮಿತಿ ಸಭೆ

# ಮಕ್ಕಳ ಆತ್ಮಸ್ಥೈರ್ಯ ವೃದ್ಧಿಗೆ ಕ್ರಮಕ್ಕಾಗಿ ಡಿಸಿ ಸಿ.ಎನ್. ಶ್ರೀಧರ್ ಸೂಚನೆ



**ಗದಗ :** ವಿದ್ಯಾರ್ಥಿಗಳ ಆತ್ಮಹತ್ಯೆ ಪ್ರಕರಣಗಳ ತಡೆಗಟ್ಟುವಿಕೆ ಹಾಗೂ ಮಾನಸಿಕ ಆರೋಗ್ಯ ಕಾಳಜಿ ಕ್ರಮಗಳನ್ನು ಜಾರಿಗೆ ತರಲು ಜಿಲ್ಲಾ ಮಟ್ಟದ ಮೇಲ್ವಿಚಾರಣಾ ಸಮಿತಿ ಸಭೆಯು ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್ ಅವರ ಅಧ್ಯಕ್ಷತೆಯಲ್ಲಿ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಶುಕ್ರವಾರ ಜರುಗಿತು. ಜಿಲ್ಲಾಧಿಕಾರಿ ಸಿ.ಎನ್.ಶ್ರೀಧರ್ ಅವರು ಮಾತನಾಡಿ ಎಲ್ಲ ಸರ್ಕಾರಿ ಮತ್ತು ಖಾಸಗಿ ಶಿಕ್ಷಣ ಸಂಸ್ಥೆಗಳು ಹಾಗೂ ತರಬೇತಿ ಕೇಂದ್ರಗಳಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳ ಮಾನಸಿಕ ಮತ್ತು ದೈಹಿಕ ಯೋಗಕ್ಷೇಮ ಹಾಗೂ ಮಕ್ಕಳ ಸುರಕ್ಷತೆ ಖಚಿತಪಡಿಸುವುದು ಹಾಗೂ ವಿದ್ಯಾರ್ಥಿಗಳ ಆರೋಗ್ಯ ವೃದ್ಧಿಗಾಗಿ ನಿರಂತರ ಸಮೀಕ್ಷೆ ಹಾಗೂ ಪರಿಶಿಲನೆ ನಡೆಸುವುದು ಸಮಿತಿಯ ಉದ್ದೇಶವಾಗಿದೆ ಎಂದರು.

ವಿದ್ಯಾರ್ಥಿಗಳು ಕೆಲವೊಂದು ಸಂದಿಗ್ದ ಸಂದರ್ಭಗಳಲ್ಲಿ ಪರಿಸ್ಥಿತಿ ಎದುರಿಸಲಾಗದೇ ಖಿನ್ನತೆಗೊಳಗಾಗಿ ಆತ್ಮಹತ್ಯೆ ಮಾಡಿಕೊಂಡು ತಮ್ಮ ಅಮೂಲ್ಯ ಬದುಕನ್ನು ಕಳೆದುಕೊಳ್ಳುತ್ತಿದ್ದಾರೆ. ಅವರಲ್ಲಿ ಆತ್ಮಸ್ಥೈರ್ಯ ತುಂಬಲು ಶಿಕ್ಷಣ ಸಂಸ್ಥೆಗಳಲ್ಲಿ ಸಿಬ್ಬಂದಿಗಳಿಗೆ ಮಾನಸಿಕ ಆರೋಗ್ಯದ ಕುರಿತು ತರಬೇತಿ ಏರ್ಪಡಿಸಬೇಕು. ವಿದ್ಯಾರ್ಥಿಗಳ ಪಾಲಕರೂ ಸಹಿತ ತಮ್ಮ ಮಕ್ಕಳೊಂದಿಗೆ ಸಮಯ ಕಳೆಯುವುದು ಇಂದಿನ ಅವಶ್ಯಕತೆಯಾಗಿದೆ ಎಂದು ಹೇಳಿದರು. ಎಲ್ಲ ಶಿಕ್ಷಣ ಸಂಸ್ಥೆಗಳು ವಿಶೇಷವಾಗಿ ತರಬೇತಿ ಸಂಸ್ಥೆಗಳು, ಮಾನಸಿಕ ಆರೋಗ್ಯ ಸೇವೆಗಳು, ಸ್ಥಳೀಯ ಆಸ್ಪತ್ರೆಗಳು ಹಾಗೂ ಆತ್ಮಹತ್ಯೆ ತಡೆಗಟ್ಟುವಿಕೆ ಸಹಾಯವಾಣಿಗಳ ತ್ವರಿತ ಸೇವೆ ಪಡೆಯಲು ಅಗತ್ಯ ಕ್ರಮಗಳನ್ನು ಕೈಗೊಳ್ಳಬೇಕು. ಟೆಲಿಮಾನಸ್ ಮತ್ತು ಇತರೆ ರಾಷ್ಟ್ರೀಯ ಸಹಾಯವಾಣಿ ಸಂಖ್ಯೆಗಳ ಮಾಹಿತಿಯನ್ನು ಹಾಸ್ಟೆಲ್‌ಗಳು, ತರಗತಿ ಕೊಠಡಿಗಳು, ಸಾಮಾನ್ಯ ಸ್ಥಳಗಳು ಮತ್ತು ವೆಬ್‌ಸೈಟ್‌ಗಳಲ್ಲಿ ಸ್ಪಷ್ಟವಾಗಿ ಪ್ರದರ್ಶಿಸಬೇಕು ಎಂದು ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್ ತಿಳಿಸಿದರು.

ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆಯ ಉಪನಿರ್ದೇಶಕ ಆರ್.ಎಸ್. ಬುರುಡಿ ಅವರು ಮಾತನಾಡಿ ಶಾಲೆಗಳಲ್ಲಿ ಮಕ್ಕಳ ಸಲಹಾ ಪೆಟ್ಟಿಗೆಗಳನ್ನು ಮಾಡಬೇಕು. ಮಕ್ಕಳ ಸುರಕ್ಷತಾ ಸಮಿತಿ ರಚನೆ ಮಾಡಬೇಕು ಎಂದು ತಿಳಿಸಿದರು.

ಸಭೆಯಲ್ಲಿ ಡಿವೈಎಸ್‌ಪಿ ಮಹಾಂತೇಶ ಸಜ್ಜನರ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ಎಸ್.ಎಸ್.ನೀಲಗುಂದ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಅಧಿಕಾರಿ ಮೆಹಬೂಬ ತುಂಬರಮಟ್ಟಿ, ಜಿಮ್ಸ್‌ದ ಮನೋರೋಗ ತಜ್ಞರು ಹಾಗೂ ಉಪವೈದ್ಯಕೀಯ ಅಧೀಕ್ಷಕರು ಡಾ.ಸೋಮಶೇಖರ ಬಿಜ್ಜಳ, ಮಕ್ಕಳ ರಕ್ಷಣಾ ಘಟಕದ ಅಧಿಕಾರಿ ರಫೀಕಾ ಹಳ್ಳೂರ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕಿ ಶ್ರೀಮತಿ ಪದ್ಮಾವತಿ ಜಿ, ಸಮಾಜ ಕಲ್ಯಾಣ ಇಲಾಖೆ ಉಪನಿರ್ದೇಶಕಿ ಶ್ರೀಮತಿ ನಂದಾ ಹಣಬರಟ್ಟಿ ವಿವಿಧ ಇಲಾಖೆಯ ಅಧಿಕಾರಿಗಳು ಹಾಜರಿದ್ದರು.

# 10 ಗಸ್ತು ಮೊಟಾರ್ ಸೈಕಲ್‌ಗಳಿಗೆ ಶಾಸಕ ಮೇಟಿ ಚಾಲನೆ





ಬಾಗಲಕೋಟೆ: : ಕಾನೂನು ಸುವ್ಯವಸ್ಥೆ ಕಾಪಾಡುವ ದೃಷ್ಟಿಯಿಂದ ರಾತ್ರಿ ಗಸ್ತು ಕರ್ತವ್ಯಕ್ಕಾಗಿ ಪೊಲೀಸ್ ಇಲಾಖೆಗೆ ನೀಡದಾದ 10 ಗಸ್ತು ಮೋಟಾರ್ ಸೈಕಲ್‌ಗಳಿಗೆ ಬಾಗಲಕೋಟೆ ಶಾಸಕ ಹಾಗೂ ಬಿಟಿಡಿಎ ಅಧ್ಯಕ್ಷರಾದ ಎಚ್.ವಾಯ್.ಮೇಟಿ ಶನಿವಾರ ಚಾಲನೆ ನೀಡಿದರು.

ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳ ಕಚೇರಿಯಲ್ಲಿ ಜರುಗಿದ ಪೊಲೀಸ್ ಇಲಾಖೆಗೆ ಹಸ್ತಾಂತರಿಸಲಾದ ಗಸ್ತು ವಾಹನಗಳಿಗೆ ಚಾಲನೆ ನೀಡಿ ಮಾತನಾಡಿದ ಅವರು ರಾತ್ರಿ ಗಸ್ತು ಹಾಗೂ ಸಾರ್ವಜನಿಕರ ತುರ್ತು ಸೇವೆಗಾಗಿ ಅನುಕೂಲವಾಗುವ ದೃಷ್ಟಿಯಿಂದ ಸ್ಥಳೀಯ ಅಭಿವೃದ್ಧಿ ಅನುದಾಯದಡಿ 10 ಮೋಟಾರ ಸೈಕಲ್‌ಗಳನ್ನು ನೀಡಲಾಗಿದೆ. ಇವುಗಳ ಸದುಪಯೋಗವಾಗಬೇಕೆಂದು ತಿಳಿಸಿದರು. ಹಿಂದೆ ತುರ್ತು ಸೇವೆಗಾಗಿ 3 ಬುಲೆರೋ ಜೀಪುಗಳನ್ನು ಸಹ ಪೊಲೀಸ್ ಇಲಾಖೆಗೆ ನೀಡಿರುವುದಾಗಿ ತಿಳಿಸಿದರು.

ಕಾರ್ಯಕ್ರಮದಲ್ಲಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಸಿದ್ದಾರ್ಥ ಗೋಯಲ್, ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ಮಹಾಂತೇಶ್ವರ ಜಿದ್ದಿ, ಡಿಎಸ್‌ಪಿ ಪ್ರಭು ಪಾಟೀಲ, ಆರ್.ಪಿ.ಐ ಸದಾಶಿವ ವನಂಜಕರ ಸೇರಿದಂತೆ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿಯ ತಾಲೂಕಾ ಅಧ್ಯಕ್ಷ ಎಸ್.ಎನ್.ರಾಂಪೂರ, ದ್ಯಾಮಣ್ಣ ಗಾಳಿ ಹಾಗೂ ಇತರರು ಉಪಸ್ಥಿತರಿದ್ದರು.

## ಬೀದಿ ದೀಪ-ಉದ್ಯಾನವನದಲ್ಲಿ ಅಲಂಕಾರಿಕ ದೀಪ ಉದ್ಘಾಟಿಸಿದ ಸಚಿವ ಶಿವಾನಂದ ಪಾಟೀಲ




ಬಸವನಬಾಗೇವಾಡಿ, : ಪಟ್ಟಣದ ಡಾ.ಬಿ.ಆರ್. ಅಂಬೇಡ್ಕರ ವೃತದಿಂದ ಅರಳಿಕಟ್ಟೆಯವರೆಗೆ ಅಳವಡಿಸಲಾಗಿರುವ ಬೀದಿ ದೀಪ ಹಾಗೂ ವೀರಭದ್ರೇಶ್ವರ ನಗರದಲ್ಲಿರುವ ಬೃಹತ್ ಉದ್ಯಾನವನದಲ್ಲಿ ಅಳವಡಿಸಲಾಗಿರುವ ಅಲಂಕಾರಿಕ ದೀಪಗಳನ್ನು ಜವಳಿ, ಕಬ್ಬು ಅಭಿವೃದ್ಧಿ ಮತ್ತು ಸಕ್ಕರೆ ಹಾಗೂ ಕೃಷಿ ಮಾರುಕಟ್ಟೆ ಸಚಿವ ಶಿವಾನಂದ ಪಾಟೀಲ ಮಂಗಳವಾರ ಸಂಜೆ ಉದ್ಘಾಟಿಸಿದರು.

ನಂತರ ಮಾತನಾಡಿದ ಅವರು, ಪುರಸಭೆಯ ಸನ್ 2023-24 ನೇ ಸಾಲಿನ ಎಸ್.ಎಫ್.ಸಿ ವಿಶೇಷ ಯೋಜನೆಯಡಿಯಲ್ಲಿ ವೀರಭದ್ರೇಶ್ವರ ಉದ್ಯಾನವನದಲ್ಲಿ ರೂ.20 ಲಕ್ಷ ವೆಚ್ಚದಲ್ಲಿ ಅಲಂಕಾರಿಕ ವಿದ್ಯುತ್ ದೀಪದ ಕಂಬಗಳನ್ನು ಹಾಗೂ ತೆಲಗಿ ರಸ್ತೆಯಲ್ಲಿರುವ ಡಾ.ಬಿ.ಆರ್. ಅಂಬೇಡ್ಕರ ವೃತ್ತದಿಂದ ವಿಜಯಪುರ ರಸ್ತೆಯಲ್ಲಿರುವ ಅರಳಿಕಟ್ಟೆಯವರೆಗೂ ಪುರಸಭೆಯ ಸನ್ 2023-24 ನೇ ಸಾಲಿನ ಎಸ್.ಎಫ್.ಸಿ ವಿಶೇಷ ಯೋಜನೆಯ ಅಡಿಯಲ್ಲಿ ರೂ. 50 ಲಕ್ಷ ವೆಚ್ಚದಲ್ಲಿ ಬೀದಿ ದೀಪಗಳ ಕಂಬಗಳನ್ನು ಅಳವಡಿಸಲಾಗಿದೆ. ವಿಜಯಪುರ ರಸ್ತೆಯ ಕೂಡರಸ್ತೆಯಲ್ಲಿ ಅರಳಿಕಟ್ಟೆಯಿಂದ ತೆಲಗಿ ರಸ್ತೆಯಲ್ಲಿರುವ ಡಾ.ಬಿ.ಆರ್.ಅಂಬೇಡ್ಕರ ವೃತ್ತದವರೆಗೂ ಉತ್ತಮವಾದ ರಸ್ತೆ ನಿರ್ಮಾಣ ಮಾಡಲಾಗಿದೆ. ಈ ರಸ್ತೆಯಲ್ಲಿ ಸರಿಯಾದ ಬೀದಿ ದೀಪದ ವ್ಯವಸ್ಥೆ ಇಲ್ಲದೇ ಇರುವದರಿಂದಾಗಿ ಈ ಭಾಗದಲ್ಲಿ ಉತ್ತಮವಾದ ಬೀದಿ ದೀಪಗಳನ್ನು ಅಳವಡಿಸಲಾಗಿದೆ. ಇದರಿಂದಾಗಿ ಈ ರಸ್ತೆಯಲ್ಲಿ ಸಂಚರಿಸುವ ಜನರಿಗೆ ಸದುಪಯೋಗವಾಗಲಿದೆ. ಈ ರಸ್ತೆಯು ಬೈಪಾಸ್ ಸಹ ಆಗಿದೆ. ಜನತೆ ಇದರ ಸದುಪಯೋಗ ಪಡೆದುಕೊಳ್ಳಬೇಕೆಂದ ಅವರು ಪಟ್ಟಣದಲ್ಲಿ ಸಾಕಷ್ಟು ಅಭಿವೃದ್ಧಿ ಕಾಮಗಾರಿಗಳನ್ನು ಕೈಗೊಳ್ಳುವ ಮೂಲಕ ಪಟ್ಟಣವು ಅಭಿವೃದ್ಧಿ ಪಥದತ್ತ ಸಾಗಿದೆ ಎಂದರು.

ಈ ಸಂದರ್ಭದಲ್ಲಿ ಪುರಸಭೆ ಅಧ್ಯಕ್ಷೆ ಜಗದೇವಿ ಗುಂಡಳ್ಳಿ, ಮುಖಂಡರಾದ ಈರಣ್ಣ ಪಟ್ಟಣಶೆಟ್ಟಿ, ಲೋಕನಾಥ ಅಗರವಾಲ, ಸಂಗಮೇಶ ಓಲೇಕಾರ, ಶಂಕರಗೌಡ ಬಿರಾದಾರ, ಶೇಖರ ಗೋಳಸಂಗಿ, ರವಿಗೌಡ ಚಿಕ್ಕೊಂಡ,ರವಿ ರಾಠೋಡ, ತಹಸೀಲ್ದಾರ ವೈ.ಎಸ್.ಸೋಮನಕಟ್ಟಿ, ಪುರಸಭೆ ಮುಖ್ಯಾಧಿಕಾರಿ ವಿದ್ಯಾಧರ ಕಲಾದಗಿ, ಜಿಪಂ ಎಇಇ ವಿಲಾಸ ರಾಠೋಡ, ಪುರಸಭೆ ಅಭಿಯಂತರರಾದ ಮಹಾದೇವ ಜಂಬಗಿ, ಸಂತೋಷ ಗಿಡ್ಡಸನ್ನವರ ಇತರರು ಇದ್ದರು.

## ವಿವಿಧ ಕಾರ್ಯಕ್ರಮಗಳಲ್ಲಿ ಪಾಲ್ಗೊಂಡ ಮೇಲ್ಮನೆ ಸದಸ್ಯ ಚನ್ನರಾಜ ಹಟ್ಟಿಹೊಳಿ



**ಹಿರೇಬಾಗೇವಾಡಿ :** ಶನಿವಾರ ಬೆಂಡಿಗೇರಿ ಗ್ರಾಮಕ್ಕೆ ಆಗಮಿಸಿದ ವಿಧಾನ ಪರಿಷತ್ ಸದಸ್ಯ ಚನ್ನರಾಜ ಹಟ್ಟಿಹೊಳಿ, ಹಲವು ಕಾರ್ಯಕ್ರಮಗಳಲ್ಲಿ ಪಾಲ್ಗೊಂಡರು.

ಬೆಂಡಿಗೇರಿ ಗ್ರಾಮದಲ್ಲಿ ಸುಮಾರು 50 ಲಕ್ಷ ರೂ,ಗಳ ವೆಚ್ಚದಲ್ಲಿ ನಿರ್ಮಾಣದ ಹಂತದಲ್ಲಿರುವ ಶ್ರೀ ವಿಠ್ಠಲ ರುಕ್ಮಾಯಿ ಮಂದಿರದ ಕಟ್ಟಡ ಕಾಮಗಾರಿಯ ಪ್ರಗತಿ ಪರಿಶೀಲನೆ ನಡೆಸಿದ ಚನ್ನರಾಜ, ಮೊದಲನೇ ಕಂತಿನಲ್ಲಿ ಬಿಡುಗಡೆಗೊಂಡ 20 ಲಕ್ಷ ರೂ,ಗಳ ಚೆಕ್ ನ್ನು ಈಗಾಗಲೇ ಮಂದಿರ ಕಮಿಟಿಯವರಿಗೆ ಹಸ್ತಾಂತರಿಸಲಾಗಿದೆ. ಕಾಮಗಾರಿ ಪ್ರಗತಿಯಾದಂತೆ ಉಳಿದ ಹಣವನ್ನೂ ಬಿಡುಗಡೆ ಮಾಡಲಾಗುವುದು ಎಂದು ತಿಳಿಸಿದರು.

ಈ ವೇಳೆ ಪುಂಡಲೀಕ ನನ್ನೋಜಿ, ಮಲ್ಲಸರ್ಜ ಖಂಡೋಜಿ, ಬಾಳೇಶ್ ಮೂಡಲಗಿ, ಸಿದ್ದಣ್ಣ ಹಾವಣ್ಣವರ, ರವಿ ಮೇಳೆದ್, ಪ್ರಕಾಶ ಪಾಟೀಲ, ಶ್ರೀ ಬಸನಗೌಡ ಪಾಟೀಲ, ರುದ್ರಪ್ಪ ನನ್ನೋಜಿ, ಮಲ್ಲಿಕಾರ್ಜುನ ಡಬ್ಬು ಮುಂತಾದವರು ಉಪಸ್ಥಿತರಿದ್ದರು.

ನಂತರ, ಬೆಂಡಿಗೇರಿ ಗ್ರಾಮದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಗೆ 5 ಹೆಚ್ಚುವರಿ ಕೊಠಡಿಗಳನ್ನು ನಿರ್ಮಾಣ ಮಾಡುವ ನಿಟ್ಟಿನಲ್ಲಿ ಸ್ಥಳದ ಪರಿಶೀಲನೆ ನಡೆಸಿ, ಶಾಲಾ ಸಿಬ್ಬಂದಿ ಜೊತೆ ಸಮಾಲೋಚನೆ ನಡೆಸಿದರು. ಇದೇ ಸಮಯದಲ್ಲಿ ಕಂಪ್ಯೂಟರ್ ಲ್ಯಾಬ್ ಗೆ ತೆರಳಿ ಹೊಸದಾಗಿ 5 ಕಂಪ್ಯೂಟರ್ ಗಳನ್ನು ವಿತರಿಸಿದ ದಾನಿಗಳ ಕೊಡುಗೆಯನ್ನು ಶ್ಲಾಘಿಸಿದರು.

ಈ ವೇಳೆ ಶಾಲೆಯ ಗುರುಮಾತೆ ವಿದ್ಯಾ ಶೀಗಿಹಳ್ಳಿ, ದೈಹಿಕ ಶಿಕ್ಷಕರಾದ ಜಿ.ಸಿ.ಮುದಿಗೌಡರ್, ಎಸ್.ಡಿ.ಎಂ.ಸಿ ಅಧ್ಯಕ್ಷರಾದ ಮಲ್ಲಪ್ಪ ಕಾದ್ರೋಳ್ಳಿ, ಸರ್ವಸದಸ್ಯರು ಸೇರಿದಂತೆ ಬೆಂಡಿಗೇರಿ ಗ್ರಾಮಸ್ಥರು ಇದ್ದರು.

ಬೆಂಡಿಗೇರಿ ಗ್ರಾಮದಲ್ಲಿ ನಿರ್ಮಾಣ ಹಂತದಲ್ಲಿರುವ ಗ್ರಾಮ ಪಂಚಾಯತಿ ಕಟ್ಟಡದ ಪ್ರಗತಿ ಪರಿಶಿಲನೆ ನಡೆಸಿದ ಅವರು, ಅಗತ್ಯ ಸೂಚನೆಗಳನ್ನು ನೀಡಿದರು.

ಈ ವೇಳೆ ಗ್ರಾಮ ಪಂಚಾಯತ್ ಅಧ್ಯಕ್ಷರಾದ ಶಿವಾನಂದ ಚಂಡು, ಸದಸ್ಯರಾದ ದುಂಡಪ್ಪ ಮೇಳೆದ್, ಶಂಕರಗೌಡ ಮೇಳೆದ್, ಪಿಡಿಒ ಪತ್ತಾರ, ರವಿ ಮೇಳೆದ್, ಸಿದ್ದಣ್ಣ ಹಾವಣ್ಣವರ್, ಸಂತೋಷ ಅಂಗಡಿ, ಬಸವರಾಜ ಡಮ್ಮಣಗಿ ಇದ್ದರು.

ನಂತರ, ಬೆಂಡಿಗೇರಿ ಗ್ರಾಮದಲ್ಲಿ ಲಕ್ಷ್ಮೀತಾಯಿ ಫೌಂಡೇಷನ್ ವತಿಯಿಂದ ಆಯೋಜಿಸಲಾಗಿರುವ ಹಾಫ್ ಪಿಚ್ ಕ್ರಿಕೆಟ್ ಪಂದ್ಯಾವಳಿಗೆ ಚಾಲನೆ ನೀಡಿದ ಚನ್ನರಾಜ, ಕೆಲಕಾಲ ಕ್ರಿಕೆಟ್ ಆಡಿದರು.

### ಪಿಎಂಎಫ್‌ಎಂಇ ಯೋಜನೆಯಡಿ ಅರಿವು ಕಾರ್ಯಕ್ರಮ : ಸಾಲ ಮಂಜೂರಾತಿ ಆದೇಶ ವಿತರಣೆ

# ರೈತರಿಗೆ ಸರಕಾರದ ಯೋಜನೆಗಳ ಅರಿವು ಅಗತ್ಯ : ಭಾಂಡಗೆ

ಬಾಗಲಕೋಟೆ: : ರೈತರಿಗೆ ಸರ್ಕಾರದ ಯೋಜನೆಗಳ ಮಾಹಿತಿ, ಮಾರುಕಟ್ಟೆಯ ಹಾಗೂ ಆಹಾರ ಸಂಸ್ಕರಣೆಯಂತಹ ಉದ್ಯಮಗಳ ಜ್ಞಾನ ದೊರೆತಾಗ ಮಾತ್ರ ಆರ್ಥಿಕವಾಗಿ ಸದೃಡವಾಗಲು ಸಾಧ್ಯವಾಗುತ್ತದೆ ಎಂದು ರಾಜ್ಯ ಸಭಾ ಸದಸ್ಯ ನಾರಾಯಣಸಾ ಭಾಂಡಗೆ ಹೇಳಿದರು.

ಜಿಲ್ಲಾ ಪಂಚಾಯತ ನೂತನ ಸಭಾಭವನದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ, ಕೃಷಿ ಹಾಗೂ ಕೃಷಿ ಸಂಬಂಧಿತ ಇಲಾಖೆಗಳು, ಕೆಪೆಕ್ ಹಾಗೂ ಕೃಷಿ ತಂತ್ರಜ್ಞರ ಸಂಸ್ಥೆ ಸಂಯುಕ್ತ ಆಶ್ರಯದಲ್ಲಿ ಹಮ್ಮಿಕೊಂಡ ಪ್ರಧಾನಮಂತ್ರಿಗಳ ಕಿರು ಆಹಾರ ಸಂಸ್ಕರಣಾ ಉದ್ದಿಮೆಗಳ ನಿಯಮಬದ್ದಗೊಳಿಸುವಿಕೆ ಯೋಜನೆಯಡಿ ಪಿಎಂಎಫ್‌ಎಂಇ ಯೋಜನೆಯ ಜಿಲ್ಲಾ ಮಟ್ಟದ ಅರಿವು ಮೂಡಿಸುವ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು. ರೈತರಿಗೆ ಸರಿಯಾದ ಮಾಹಿತಿ ಕೊರತೆಯಿಂದ ಅನೇಕರು ಸಾಲಗಾರರಾಗುತ್ತಿದ್ದಾರೆ. ಇಂದಿನ ಸಮಾಜದಲ್ಲಿ ಕೃಷಿಗೆ ಬೇಕಾದ ಮಹತ್ವ ನೀಡದಿರುವದರಿಂದ ಜನರಲ್ಲಿ ಕೃಷಿಯತ್ತ ಆಸಕ್ತಿ ತೋರಿವದನ್ನು ದಿನೇ ದಿನೇ ಕುಂಟಿತಗೊಳ್ಳುತ್ತಿದೆ. ಇತ್ತೀಚೆಗೆ



ಜನಪ್ರಿಯವಾಗುತ್ತಿರುವ ರೆಡಿಮೆಡ್ ಆಹಾರಗಳು ಆರೋಗ್ಯಕ್ಕೆ ಹಾನಿಕಾರಕವಾಗುತ್ತಿವೆ. ಸಾವಯವ ಆಹಾರಗಳ ಬೆಲೆ ಸ್ವಲ್ಪ ಹೆಚ್ಚಾದರೂ ದೀರ್ಘಾವಧಿ ಆರೋಗ್ಯಕ್ಕೆ ಅನುಕೂಲಕರವಾಗಿದೆ ಎಂದು ತಮ್ಮ ಅಭಿಪ್ರಾಯವನ್ನು ವ್ಯಕ್ತಪಡಿಸಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಶಾಸಕ ಹಾಗೂ ಬಿಡಿಟಿಎ ಅಧ್ಯಕ್ಷ ಎಚ್.ವಾಯ್.ಮೇಟಿ ಕಿರು ಆಹಾರ ಮಾರಾಟಕ್ಕಾಗಿ ರೂಪಿಸಲಾದ ಚಾಲುಕ್ಯನಾಡು ವೆಬ್‌ಸೈಟ್ ಬಿಡುಗಡೆಗೊಳಿಸಿ ಮಾತನಾಡಿದ ಅವರು ರೈತರು ಮತ್ತು ಗೃಹಿಣಿಯರು ತಯಾರಿಸುವ ಆಹಾರ ಪದಾರ್ಥಗಳನ್ನು ಮೌಲ್ಯವರ್ಧಕವಾಗಿ ರೂಪಾಂತರಿಸಿ ಮಾರುಕಟ್ಟೆಯಲ್ಲಿ ಮಾರಾಟ ಮಾಡಲು ಸರ್ಕಾರದಿಂದ ಅನೇಕ ಸಬ್ಸಿಡಿ ಆಧಾರಿತ ಸಾಲ ಸಹಾಯ ಹಾಗೂ ಯಂತ್ರೋಪಕರಣಗಳ ಒದಗಿಸುವ ಯೋಜನೆಗಳು ಲಭ್ಯವಿವೆ. ಇಂತಹ ಯೋಜನೆಗಳ ಕುರಿತು ಸರಿಯಾದ ಅರಿವು ಮೂಡಿಸುವುದು ಅಧಿಕಾರಿಗಳ ಜವಾಬ್ದಾರಿಯಾಗಿದೆ ಎಂದರು. ಆಹಾರ ಸಂಸ್ಕರಣಾ ಕ್ಷೇತ್ರದಲ್ಲಿ ಕಾರ್ಯ ನಿರ್ವಹಿಸುವವರಿಗೆ ಚಪಾತಿ ಯಂತ್ರ ಸೇರಿದಂತೆ ವಿವಿಧ ಉಪಕರಣಗಳನ್ನು ಸಹ ಸರ್ಕಾರ ಒದಗಿಸುತ್ತದೆ ಎಂದರು.

ಜಿಲ್ಲಾಧಿಕಾರಿ ಸಂಗಪ್ಪ ಮಾತನಾಡಿ ಬಾಗಲಕೋಟೆ ಜಿಲ್ಲೆಯಲ್ಲಿ ನೀರು ಹಾಗೂ ಭೂಮಿ ಕೃಷಿಗೆ ಅನುಕೂಲವಾಗಿದೆ. ತಂತ್ರಜ್ಞಾನ ಬಳಸಿ ಹೆಚ್ಚು ಹೆಚ್ಚು ಆಹಾರ ಉತ್ಪಾದನೆ ಮಾಡಿ ಇತರ ಜಿಲ್ಲೆ ಹಾಗೂ ರಾಜ್ಯಗಳಿಗೆ ರಫ್ತು ಮಾಡುವಂತಾಗಬೇಕು ಎಂದರು. ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಶಶಿಧರ ಕುರೇರ ಮಾತನಾಡಿ ಸರ್ಕಾರದ ಯೋಜನೆಗಳು ಸಮಾಜದ ಕಟ್ಟಕಡೆಯ ವ್ಯಕ್ತಿಗೂ ತಲುಪಿ, ಅವರು ಆರ್ಥಿಕವಾಗಿ ಅಭಿವೃದ್ಧಿ ಹೊಂದಿದಾಗ ಮಾತ್ರ ಯೋಜನೆ ಯಶಸ್ವಿಯಾಗುತ್ತದೆ ಎಂದರು.

ಕಾರ್ಯಕ್ರಮದಲ್ಲಿ ನಗರಸಭೆ ಅಧ್ಯಕ್ಷೆ ಸವಿತಾ ಲಂಕನ್ನವರ್, ಜಿಲ್ಲಾ ಕೃಷಿಕ ಸಮಾಜ ಅಧ್ಯಕ್ಷ ಮಹಾಂತೇಶ ಹಟ್ಟಿ, ಬೆಂಗಳೂರು ಕೆಪೆಕ್‌ನ ವ್ಯವಸ್ಥಾಪಕ ನಿರ್ದೇಶಕ ಸಿ.ಎನ್.ಶಿವಪ್ರಕಾಶ್, ಕೃಷಿ ವಿಜ್ಞಾನ ಕೇಂದ್ರ ಮುಖ್ಯಸ್ಥ ಗುರುದತ್ ಹೆಗಡೆ, ರೇಷ್ಮೆ ಇಲಾಖೆ ಉಪ ನಿರ್ದೇಶಕ ಎಸ್.ಎಂ.ಕೋರಿ, ಜಂಟಿ ಕೃಷಿ ನಿರ್ದೇಶಕ ಲಕ್ಷ್ಮಣ ಕಳ್ಳೆನ್ನವರ್ ಸೇರಿದಂತೆ ಇತರರು ಉಪಸ್ಥಿತರಿದ್ದರು.

# ಪ್ರತಿಯೊಬ್ಬರೂ ಸತ್ವಯುತ ಜೀವನ ಸಾಗಿಸಬೇಕು : ಹರಸೂರಶ್ರೀಗಳು

**ಬಸವನಬಾಗೇವಾಡಿ,** ಒಂದು ತಿಂಗಳ ಕಾಲ ಶ್ರವಣ ಮಾಡಿದ ಪುರಾಣ-ಪ್ರವಚನಗಳಿಂದ ಪ್ರತಿಯೊಬ್ಬರೂ ಸತ್ವಯುತ ಜೀವನ ಸಾಗಿಸಬೇಕು. ಮನುಷ್ಯನಲ್ಲಿ ಭಕ್ತಿ ಮೂಡಿದರೆ ಅದು ಎಂದಿಗೂ ಕರಗುವುದಿಲ್ಲ. ಭಕ್ತಿಯಿಂದ ಮುಕ್ತಿ ಪಡೆಯಲು ಸಾಧ್ಯವಿದೆ ಎಂದು ಹರಸೂರ ಕಲ್ಮಠದ ಕರಸಿದ್ದೇಶ್ವರ ಶಿವಾಚಾರ್ಯ ಸ್ವಾಮೀಜಿ ಹೇಳಿದರು. ತಾಲೂಕಿನ ಸುಕ್ಷೇತ್ರ ಜಾಯವಾಡಗಿಯ ಸೋಮನಾಥ ಹಾಗೂ ಶಿವಪ್ಪ ಮುತ್ಯಾ ದೇವಸ್ಥಾನದ ಮಂಗಲ ಕಾರ್ಯಾಲಯದಲ್ಲಿ ಹುಬ್ಬಳ್ಳಿ ಶ್ರೀಸಿದ್ದಾರೂಢರ ಪುರಾಣ ಮಹಾಮಂಗಲ ಹಾಗೂ ಜೋಡು ಎತ್ತಿನ ನೂತನ ಮೂರ್ತಿ ಪ್ರತಿಷ್ಠಾಪನೆಯಂಗವಾಗಿ ಬುಧವಾರ ಹಮ್ಮಿಕೊಂಡಿದ್ದ ಧರ್ಮಸಭೆಯ ದಿವ್ಯಸಾನಿಧ್ಯ ವಹಿಸಿ ಮಾತನಾಡಿದ ಅವರು, ಈ ದೇವಸ್ಥಾನದಲ್ಲಿ ಹಲವಾರು ವರ್ಷಗಳಿಂದ ಪ್ರತಿ ವರ್ಷದಶ್ರಾವಣ ಮಾಸದಲ್ಲಿ ಪುರಾಣ ನಡೆದುಕೊಂಡು ಬರುತ್ತಿರುವುದನ್ನು ನೋಡಿದ್ದೇವೆ. ವರ್ಷದಿಂದ ವರ್ಷಕ್ಕೆ ಭಕ್ತರ ಸಹಕಾರದೊಂದಿಗೆ ದೇವಸ್ಥಾನದಲ್ಲಿ ಹೊಸತನ ನಡೆಯುತ್ತಿರುವದು ಸಂತಸದಾಯಕ ಸಂಗತಿ. ಈ ವರ್ಷದ ಪುರಾಣ ಮಂಗಲ ಮಹೋತ್ಸವದ ಸಂದರ್ಭದಲ್ಲಿ ದೇವಸ್ಥಾನದಲ್ಲಿ ಬೃಹತ್‌ಜೋಡು ಎತ್ತಿನ ನೂತನ ಮೂರ್ತಿ ಪ್ರತಿಷ್ಠಾಪನೆಯಾಗಿರುವದು ಕಾಮಧೇನು ಕಲ್ಪವೃಕ್ಷ ಸ್ಥಾಪನೆಯಾದಂತಾಗಿದೆ. ಇದರಿಂದ ಈ ಭಾಗದ ಭಕ್ತರ ಬಹುದಿನದ ಬೇಡಿಕೆ ಈಡೇರಿದಂತಾಗಿದೆ ಎಂದರು.

ಸಾನಿಧ್ಯ ವಹಿಸಿದ್ದ ವೀರಗಟ್ಟಿಯ ಅಡವಿಲಿಂಗ ಮಹಾರಾಜರು ಮಾತನಾಡಿ, ಜೀವನದಲ್ಲಿ



ಮಾನವನು ಪಶು-ಪಕ್ಷಿ,ಗಿಡ-ಮರ ಹಾಗೂ ಜಾನುವಾರುಗಳಂತೆ ಪರರ ಬದುಕಿಗಾಗಿ ಜೀವನ ಮೀಸಲಿಟ್ಟರೆ ಮಾನವನ ಬದುಕು ಹಸನಾಗಿ ಭಗವಂತನ ಕೃಪೆ ಪಾತ್ರನಾಗಲು ಸಾಧ್ಯ.ಪರಿಸರದಲ್ಲಿರುವ ಇವುಗಳಲ್ಲಿ ಇವುಗಳಲ್ಲಿ ಎಂದಿಗೂ ಅಸಹ್ಯ ಭಾವನೆ, ನ್ಯಾಯ ಬಾರದೇ ಇರುವದನ್ನು ಕಾಣುತ್ತೇವೆ.ಎಲ್ಲವೂ ಒಂದಾಗಿ ಪರಸ್ಪರ ಕೂಡಿ ಬಾಳುವುದನ್ನು ಕಾಣುತ್ತೇವೆ. ಅದರಂತೆ ಮಾನವರು ಪ್ರಾಣಿ-ಪಕ್ಷಿಗಳಲ್ಲಿರುವ ಒಳ್ಳೆಯ ಗುಣವನ್ನು ಅರಿತು ಜೀವನ ಸಾಗಿಸುವಂತಾಗಬೇಕೆಂದರು.

ಯರಝರಿಯ ಮಲ್ಲಾರಲಿಂಗ ಮಹಾರಾಜರು ಮಾತನಾಡಿ, ಸುಕ್ಷೇತ್ರ ಜಾಯವಾಡಗಿ ದೇವಸ್ಥಾನಕ್ಕೂ ನಮ್ಮ ಶ್ರೀಮಠಕ್ಕೂ ಅವಿನಾಭಾವ ಸಂಬಂಧವಿದೆ. ಬಸವನಾಡಿನ ಜನರು ಪುಣ್ಯವಂತರಾಗಿದ್ದಾರೆ. ಈ ಕ್ಷೇತ್ರದ ಗುರು-ಶಿಷ್ಯರ ಆಶೀರ್ವಾದ ಸದಾ ಜನರ ಮೇಲಿದೆ ಎಂದರು.

ಮಾನಭಾವಿಯ ಬಸವರಾಜ ಗುರುಗಳು ಮಾತನಾಡಿ, ಸುಕ್ಷೇತ್ರ ಜಾಯವಾಡಗಿಯ ಸೋಮನಾಥ ಶಿವಪ್ಪ ಮುತ್ಯಾರ ದೇವಸ್ಥಾನಕ್ಕೆ ಜನರು ತಮ್ಮ ದನಕರುಗಳನ್ನು ತಂದು ಪ್ರದಕ್ಷಿಣೆ ಹಾಕಿಸಿದರೆ ಅವುಗಳಿಗೆ ಸೋಮನಾಥ ಶಿವಪ್ಪ ಮುತ್ಯಾರ ಕೃಪೆಯಿಂದ ಯಾವುದೇ ರೋಗ ಬರುವುದಿಲ್ಲ. ಒಂದು ವೇಳೆ ರೋಗ-ರುಜಿನವಿದ್ದರೂ ಅವು ಮಾಯವಾಗುತ್ತವೆ. ಇದು ಈ ಕ್ಷೇತ್ರದ ಪವಾಡವೇ ಸರಿ ಎಂದು.

ಪಡೇಕನೂರಿನ ಮಲ್ಲಿಕಾರ್ಜುನ ಸ್ವಾಮೀಜಿ, ಪ್ರವಚನಕಾರ ಶರಣಸೋಮನಾಳದ ಮಹಾದೇವಯ್ಯ ಶಾಸ್ತ್ರೀಜಿ ಮಾತನಾಡಿದರು.

ಕಾರ್ಯಕ್ರಮದಲ್ಲಿ ಕಾಮನಕೇರಿಯ ಜ್ಞಾನೇಶ್ವರಿ ಅಪ್ಪಾಜಿ, ಯಲ್ಲಾಲಿಂಗ ಮಹಾರಾಜರು. ರೇವಣಸಿದ್ದೇಶ್ವರ ಶಾಂತಮಯ ಸ್ವಾಮೀಜಿ, ಮಹೇಶ ಮುತ್ಯಾ, ದೇವಸ್ಥಾನ ಟ್ರಸ್ಟ್ ಅಧ್ಯಕ್ಷ ಶರಣಪ್ಪಗೌಡ ನರಸಲಗಿ, ಉಪಾಧ್ಯಕ್ಷ ಶಿವನಗೌಡ ಬಿರಾದಾರ, ಪ್ರಧಾನ ಕಾರ್ಯದರ್ಶಿ ಬಸನಗೌಡ ಪಾಟೀಲ, ಶ್ರೀಮಠದ ಭಕ್ತರಾದ ಶರಣಗೌಡ ಬಿರಾದಾರ,ಶರಣಬಸು ಹೆರೂರ, ನಾನಾಗೌಡ ಬಿರಾದಾರ, ಮಲ್ಲಣ್ಣ ಕಾಮನಹಟ್ಟಿ, ಸೋಮನಗೌಡ ಪಾಟೀಲ, ಸಂಗಮೇಶ ಸಜ್ಜನ, ಸಿದ್ದನಗೌಡ ಬಿರಾದಾರ, ಸಂಗಣ್ಣ ಬಳಿಗಾರ, ಚಿದಾನಂದ ದಿಂಡವಾರ, ಸಿದ್ರಾಮ ಕಲ್ಲೂರ, ಪರಶುರಾಮ ಪೂಜಾರಿ ಇತರರು ಇದ್ದರು. ಕಾರ್ಯಕ್ರಮಕ್ಕೂ ಮುನ್ನ ಬೆಳಗ್ಗೆ ಸೋಮನಾಥ ಮತ್ತು ಶಿವಪ್ಪ ಮುತ್ಯಾರ ಕೃರ್ತು ಗದ್ದುಗೆಗೆ ವಿಶೇಷ ಪೂಜೆ, ಸುಮಂಗಲೆಯರಿಗೆ ಉಡಿ ತುಂಬುವ ಕಾರ್ಯಕ್ರಮ ನೆರವೇರಿತು.ದೇವಸ್ಥಾನದ ಶಿವಾನುಭವ ಮಂಟಪದಲ್ಲಿ ವಿವಿಧ ಶ್ರೀಗಳ ಸಾನಿಧ್ಯದಲ್ಲಿ ಜೋಡು ಎತ್ತಿನ ನೂತನ ಮೂರ್ತಿ ಪ್ರತಿಷ್ಠಾಪನೆ ನೆರವೇರಿತು. ನಂತರ ಗ್ರಾಮದ ಮಹಿಳೆಯರ ಕುಂಭ ಮೇಳ, ವಿವಿಧ ವಾದ್ಯಮೇಳದೊಂದಿಗೆ ಗ್ರಾಮದ ಪ್ರಮುಖ ಬೀದಿಗಳಲ್ಲಿ ಹುಬ್ಬಳ್ಳಿಯ ಶ್ರೀಸಿದ್ದಾರೂಢರ ಪುರಾಣ ಹಾಗೂ ಭಾವಚಿತ್ರದ ಮೆರವಣಿಗೆ ಜರುಗಿತು.

**ದಾಖಲೆ ಕಳೆದಿದೆ**

ಮಾನ್ಯರೇ,ಹುಲಿಗೆಮ್ಮ ಗಂಡ ವಿರುಪಣ್ಣ ಕಂಪ್ಲಿ, ಕೊಪ್ಪಳ ನಿವಾಸಿಯಾದ ನಾನು ಕೊಪ್ಪಳದ ನಗರಸಭೆ ಕಾರ್ಯಾಲಯದಲ್ಲಿ ಮನೆ ಪಾವತಿ ಸಲುವಾಗಿ ಪ್ರಯಾಣಿಸುವ ಸಮಯದಲ್ಲಿ ನನ್ನ ಮನೆಯ ಮಾರಾಟ ಪತ್ರ ದಸ್ತಾವೇಜು **ಸಂಖ್ಯೆ: 544/2001-02** ವನ್ನು ಕಳೆದು ಹೋಗಿರುತ್ತದೆ ಯಾರಿಗಾದರೂ ಸಿಕ್ಕಿದ್ದರೆ ದಯವಿಟ್ಟು ಅದನ್ನು ಈ ವಿಳಾಸಕ್ಕೆ ತಲುಪಿಸಿ ಹಾಗೂ ನಂಬರ್ ಕರೆ ಮಾಡಿ ವಿಳಾಸ:- ಹುಲಿಗೆಮ್ಮ ಗಂಡ ವಿರುಪಣ್ಣ ಕಂಪ್ಲಿ ಸಾ :6/3/245, ಮೂಚಿಗೇರಿಓಣಿ ,ವಾರ್ಡ್ ನ:2, ಶಾರದಾ ಟಾಕೀಸ್ ಹಿಂದುಗಡೆ, ಕೊಪ್ಪಳ -583231 ಪೋ : 80737 47167, 9008671817

BELAGINA SURYODHYA KANNADA DAILY MORNING Editor, Printer, PUblisher and Owned By GURURAJ IRAPPA KADAM Plot No.2743 NEAR KEB POWER HOUSE RAMTEERTH NAGAR, SHIVAJI NAGAR BELAGAVI-590016
DIST-BELAGAVI,STATE KARNATAKA PRINTED At M/S LAXMI PRINTERS, No. 627,Auto Nagar,Belagavi,Dist- Belagavi Karnataka, RNI No. KARKAN/2019/77640, Volume : 07, Issue :175, Postal Reg No. PMG/KA/NK/BM/135/25-27 / POST AT Vantamury Colony Post Office